ಸಂಪುಟ: 22, ಸಂಚಿಕೆ: 162, ಪುಟಗಳು: 8, ಶನಿವಾರ, 22 ಮಾರ್ಚ್ 2025 RNI NO. KARKAN/2002/08054
epaper: www.sanjemugilu.com




ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3




### ಸುಭಾಷಿತ

**ಕಾಲವೆಂದರೆ ಹಾಗೆ ಹರಿಯುವ ನೀರಿದ್ದಂತೆ. ಒಮ್ಮೆ ಹರಿದು ಹೋದ ನೀರು ಮತ್ತೆ ಕೈಗೆ ಸಿಗುವುದಿಲ್ಲ. ಸಿಕ್ಕ ಅವಕಾಶವನ್ನು ಸರಿಯಾಗಿ ಬಳಸಿಕೊಳ್ಳೋಣ.**

### ಪಂಚಾಂಗ

(ಶನಿವಾರ 22 ಮಾರ್ಚ್-2025)

- ಶ್ರೀಕ್ರೋಧಿನಾಮ ಸಂವತ್ಸರ,
- ಉತ್ತರಾಯಣ, ಶಿಶಿರ ಋತು,
- ಫಾಲ್ಗುಣ ಮಾಸ, ಕೃಷ್ಣ ಪಕ್ಷ,
- ಅಷ್ಟಮಿ, ಶನಿವಾರ, ಮೂಲ ನಕ್ಷತ್ರ
- ರಾಹುಕಾಲ: 09:28 ರಿಂದ 10:59
- ಗುಳಿಕಕಾಲ : 06:27 ರಿಂದ 07:57
- ಯಮಗಂಡಕಾಲ: 02:01 ರಿಂದ 03:32

## ಸಂಕ್ಷಿಪ್ತ ಸುದ್ದಿ

### ತಮಾಷೆಗೆ 40 ಕಿಮೀ ದೂರದಿಂದ ಅಂಬುಲೆನ್ಸ್ ಕರೆಸಿದ ಕುಡುಕ!



**ಚಿಕ್ಕಮಗಳೂರು:** ಕುಡಿದ ಮತ್ತಲ್ಲಿ ವ್ಯಕ್ತಿಯೊಬ್ಬ ಸುಮ್ಮನೆ 108ಕ್ಕೆ ಕರೆ ಮಾಡಿ, 40 ಕಿ.ಮೀ ದೂರದಿಂದ ಅಂಬುಲೆನ್ಸ್ ಕರೆಸಿರುವುದು ಶೃಂಗೇರಿಯಲ್ಲಿ ನಡೆದಿದೆ. ಕುಡಿದ ಮತ್ತಿನಲ್ಲಿ, ನಾನು ಆಕಾಶದ ಕೆಳಗೆ ಭೂಮಿಯ ಮೇಲೆ ಇದ್ದೀನಿ ಬೇಗ ಬನ್ನಿ, ಶೃಂಗೇರಿಯಲ್ಲಿ ಗಲಾಟೆಯಾಗಿ ತುಂಬಾ ಪೆಟ್ಟಾಗಿದೆ ಎಂದು ಅಂಬುಲೆನ್ಸ್‌ಗೆ ಕರೆ ಮಾಡಿದ್ದಾನೆ. ಇದನ್ನು ನಂಬಿದ ಅಂಬುಲೆನ್ಸ್ ಸಿಬ್ಬಂದಿ ಬಾಳೆಹೊನ್ನೂರಿನಿಂದ 40 ಕಿ.ಮೀ ದೂರದಿಂದ ಶೃಂಗೇರಿಗೆ ಬಂದಿದ್ದಾರೆ. ಪುಟ 2

### ಮಕ್ಕಳ ಕೈಯಲ್ಲಿ ಮಲ-ಮೂತ್ರ ಗುಂಡಿ ಕ್ಲೀನ್ ಮಾಡಿಸಿದ ಶಿಕ್ಷಕರು..!



**ಬೆಂಗಳೂರು:** ಪೋಷಕರು ತಮ್ಮ ಮಕ್ಕಳನ್ನು ಶಾಲೆಗೆ ಕಳಿಸುವುದು ವಿದ್ಯಾವಂತರಾಗಲಿ, ದೇಶಕ್ಕೆ ಒಳ್ಳೆಯ ಪ್ರಜೆಗಳಾಗಲಿ, ಸಣ್ಣ ವಯಸ್ಸಿನಲ್ಲಿ ನಮ್ಮ ಮಕ್ಕಳು ಕೂಲಿ ನಾಲಿ ಮಾಡೋದು ಬೇಡ ನಾನಾ ಕನಸು ಕಟ್ಟಿಕೊಂಡು ಶಾಲೆ ಕಳುಹಿಸುತ್ತಾರೆ. ಆದರೆ ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರದ ವಿಶ್ವಪ್ರಿಯ ಲೇಔಟ್, ಬೇಗೂರು ಮುಖ್ಯ ರಸ್ತೆಯಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಾಲಾ ಶಿಕ್ಷಕರು ವಿದ್ಯಾರ್ಥಿಗಳಿಂದಲೇ ಮಲ, ಮೂತ್ರ ವಿಸರ್ಜನೆ ಮಾಡುವ ಶೌಚಾಲಯದ ಗುಂಡಿಯನ್ನು ಕ್ಲೀನ್ ಮಾಡಿಸಿರುವ ಘಟನೆ ನಡೆದಿದೆ. ಪುಟ 2



# ಬೆಂಗಳೂರಿಗೆ ತಟ್ಟದ ಬಂದ್ ಬಿಸಿ

## ಪ್ರಮುಖ ಕೇಂದ್ರ ಬೆಳಗಾವಿಯಲ್ಲೂ ಜನಜೀವನ ಸಹಜ

**ಬೆಂಗಳೂರು:** ಬೆಳಗಾವಿಯಲ್ಲಿ ಮರಾಠಿ ಪುಂಡರ ಹಾವಳಿ ಖಂಡಿಸಿ ಕನ್ನಡ ಪರ ಸಂಘಟನೆಗಳು ಕರೆ ನೀಡಿರುವ ಕರ್ನಾಟಕ ಬಂದ್‌ಗೆ ಬೆಂಗಳೂರು ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ನೀರಸ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ಬಂದ್‌ಗೆ ಕಾರಣವಾದ ಪ್ರಮುಖ ಕೇಂದ್ರ ಬೆಳಗಾವಿಯಲ್ಲೇ ಜನಜೀವನ ಸಹಜ ಸ್ಥಿತಿಯಲ್ಲಿ ಸಾಗುತ್ತಿದೆ. ಬೆಂಗಳೂರು ನಗರದ ಪ್ರಮುಖ ಪ್ರದೇಶಗಳಲ್ಲಿ ಬಸ್, ಆಟೋ ಓಡಾಟ ಎಂದಿನಂತೆಯೇ ಇದೆ. ಶನಿವಾರ ಆಗಿರುವುದರಿಂದ ಸಂಚಾರ ದಟ್ಟಣೆ ತುಸು ಕಡಿಮೆ ಇದೆ.

**ಬೆಂಗಳೂರಿನಲ್ಲಿ ಬಿಎಂಟಿಸಿ ಬಸ್, ಆಟೋ ಸಂಚಾರ:** ಬೆಂಗಳೂರಿನ ಹೆಬ್ಬಾಳ ದಿಂದ ಕೆಆರ್ ಪುರಂ ಭಾಗದ ಕಡೆ ಸಂಚರಿಸುವರರಿಗೆ ಹಾಗೂ ಇತರ ಪ್ರಮುಖ ಪ್ರದೇಶಗಳವರಿಗೆ ಯಾವುದೇ ಸಮಸ್ಯೆ ಎದುರಾಗಿಲ್ಲ. ಎಂದಿನಂತೆಯೇ ಕೆಎಸ್‌ಆರ್‌ಟಿಸಿ, ಬಿಎಂಟಿಸಿ ಬಸ್, ಆಟೋ, ಓಲಾ, ಉಬರ್ ಸಂಚಾರ ನಡೆಸುತ್ತಿವೆ.

**ಮೆಜೆಸ್ಟಿಕ್ ಮೆಟ್ರೋ ನಿಲ್ದಾಣಕ್ಕೆ ಬಿಗಿ ಭದ್ರತೆ:** ಪ್ರತಿಭಟನಾಕಾರರು ಮೆಟ್ರೋ ನಿಲ್ದಾಣಕ್ಕೆ ಮುತ್ತಿಗೆ ಹಾಕುವ ಎಚ್ಚರಿಕೆ ನೀಡಿರುವ ಕಾರಣ ಮೆಜೆಸ್ಟಿಕ್ ಮೆಟ್ರೋ ನಿಲ್ದಾಣಕ್ಕೆ ಬಿಗಿ ಭದ್ರತೆ ಕಲ್ಪಿಸಲಾಗಿದೆ. 1 ಕೆಎಸ್‌ಆರ್‌ಪಿ ತುಕಡಿ ನಿಯೋಜನೆ ಮಾಡಲಾಗಿದೆ. ಮೈಸೂರು ಬ್ಯಾಂಕ್ ವೃತ್ತದಲ್ಲಿ ಪ್ರತಿಭಟನೆ ಕಾವು ಹೆಚ್ಚಾಗುವ ಸಾಧ್ಯತೆ ಇದ್ದು, ಭದ್ರತೆಗೆ 100 ಕ್ಕೂ ಹೆಚ್ಚು ಪೊಲೀಸರ ನಿಯೋಜನೆ ಮಾಡಲಾಗಿದೆ. ಓರ್ವ ಎಸಿಪಿ, ಇಬ್ಬರು ಇನ್ಸ್‌ಪೆಕ್ಟರ್, 6 ಸಬ್ ಇನ್ಸ್‌ಪೆಕ್ಟರ್ ನೇತೃತ್ವದಲ್ಲಿ ಭದ್ರತೆ ಒದಗಿಸಲಾಗಿದೆ.

**ಬೆಳಗಾವಿಯಲ್ಲಿ ತಟ್ಟದ ಬಂದ್ ಬಿಸಿ:** ಬೆಳಗಾವಿ ನಗರದಲ್ಲಿ ಬಂದ್ ಬಿಸಿ ಕಾಣಿಸಿಲ್ಲ. ನಗರದಲ್ಲಿ ಶನಿವಾರ ಬೆಳಗ್ಗೆ ಎಂದಿನಂತೆಯೇ ಬಸ್ ಸಂಚಾರ ಆರಂಭವಾಗಿದೆ. ಎಲ್ಲಾ ಅಂಗಡಿ ಮುಂಗಟ್ಟುಗಳು ತೆರೆದಿವೆ. ಈ ಮಧ್ಯೆ, ಕೇಂದ್ರ ಬಸ್ ನಿಲ್ದಾಣದಲ್ಲಿ ಪ್ರತಿಭಟನೆ ನಡೆಸಲು ಕರವೇ ನಿರ್ಧರಿಸಿದೆ.

**ದಾವಣಗೆರೆಯಲ್ಲೂ ಬಂದ್‌ಗೆ ನೀರಸ ಪ್ರತಿಕ್ರಿಯೆ:** ದಾವಣಗೆರೆಯಲ್ಲಿ ಕರ್ನಾಟಕ ಬಂದ್‌ಗೆ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದೆ. ಬಸ್, ಆಟೋಗಳ ಸಂಚಾರ ಎಂದಿನಂತೆ ಆರಂಭವಾಗಿದೆ. ಅಹಿತಕರ ಘಟನೆ ನಡೆಯದಂತೆ ಅಲ್ಲಲ್ಲಿ ಪೊಲೀಸ್ ಸಿಬ್ಬಂದಿ ನಿಯೋಜಿಸಲಾಗಿದೆ.

ಕೋಟೆ ನಾಡು ಚಿತ್ರದುರ್ಗದಲ್ಲಿಯೂ ಜನಜೀವನ ಎಂದಿನಂತೆಯೇ ಆರಂಭವಾಗಿದೆ. ಹೂವು, ಹಣ್ಣು, ಬೇಕರಿ, ಗೂಡಂಗಡಿ ವ್ಯಾಪಾರ ವಹಿವಾಟು ಆಟೋ, ಬಸ್ ಸಂಚಾರ ಮಾಮೂಲಿಯಾಗಿದೆ.



**ಮಂಡ್ಯದಲ್ಲಿ ಪ್ರತಿಭಟನೆಯ ಕಾವು:** ಮಂಡ್ಯದ ಸಂಜಯ್ ವೃತ್ತದಲ್ಲಿ ನಡೆಯುತ್ತಿರುವ ಪ್ರತಿಭಟನೆಯಲ್ಲಿ, ರಸ್ತೆಯಲ್ಲಿಯೇ ಮಲಗಿ ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು. ಕರವೇ ಶಿವರಾಮೇಗೌಡ ಬಣದಿಂದ ಈ ಪ್ರತಿಭಟನೆ ನಡೆದಿದೆ.

**ಮೈಸೂರಿನಲ್ಲಿ ಮಿಶ್ರ ಪ್ರತಿಕ್ರಿಯೆ:** ಮೈಸೂರು ಜಿಲ್ಲೆಯಲ್ಲಿ ಬಂದ್‌ಗೆ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ಬಹುತೇಕ ಸಂಘಟನೆಗಳಿಂದ ನೈತಿಕ ಬೆಂಬಲ ವ್ಯಕ್ತವಾಗಿದೆ. ಹೋಟೆಲ್ ಮಾಲೀಕರ ಸಂಘ, ಖಾಸಗಿ ಬಸ್ ಮಾಲೀಕರ ಸಂಘ, ಮೈಸೂರು ಜಿಲ್ಲಾ ವಕೀಲರ ಸಂಘ ಸೇರಿ ಹಲವರಿಂದ ನೈತಿಕ ಬೆಂಬಲ ವ್ಯಕ್ತವಾಗಿದೆ. ಸಾರಿಗೆ ಸಂಚಾರ ಎಂದಿನಂತೆಯೇ ಇರಲಿದೆ. ಹೋಟೆಲ್‌ಗಳಲ್ಲಿ ಕಪ್ಪು ಪಟ್ಟಿ ಧರಿಸಿ ಕೆಲಸ ಮಾಡಲಾಗುತ್ತಿದೆ. ಮೈಸೂರು ಗ್ರಾಮಾಂತರ ಬಸ್ ನಿಲ್ದಾಣದ ಬಳಿ ಕನ್ನಡ ಪರ ಸಂಘಟನೆಗಳು ಬೆಳ್ಳಂಬೆಳಗ್ಗೆಯೇ ಪ್ರತಿಭಟನೆ ನಡೆಸಿವೆ.

ಚಿಕ್ಕಮಗಳೂರಿನಲ್ಲಿ ಕನ್ನಡ ಪರ ಸಂಘಟನೆಗಳು ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿವೆ. ಕನ್ನಡಿಗರ ಮೇಲೆ ಹಲ್ಲೆಯಾದರೂ ಈ ಸರ್ಕಾರ ಮೌನವಾಗಿದೆ. ಪೊಲೀಸರ ಮೂಲಕ ಪ್ರತಿಭಟನೆ ಹತ್ತಿಕ್ಕುವ ಕೆಲಸ ಮಾಡುತ್ತಿದ್ದಾರೆ. ಪುಟ 2

### ಮೈಸೂರಲ್ಲಿ ಪ್ರತಿಭಟನಾಕಾರರು ಪೊಲೀಸರ ವಶಕ್ಕೆ

**ಮೈಸೂರು:** ಕರ್ನಾಟಕ ಬಂದ್ ಹಿನ್ನೆಲೆ ಮೈಸೂರಿನಲ್ಲಿ ಕೆಎಸ್‌ಆರ್‌ಟಿಸಿ ಬಸ್‌ಗಳನ್ನು ತಡೆದು ಪ್ರತಿಭಟನೆ ನಡೆಸುತ್ತಿದ್ದ ಕನ್ನಡ ಪರ ಸಂಘಟನೆಗಳ ಪ್ರತಿಭಟನಾಕಾರರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಪುಟ 2



## ಬಲವಂತವಾಗಿ ಬಂದ್ ಮಾಡಿದ್ರೆ ಶಿಸ್ತು ಕ್ರಮ

**ಬೆಂಗಳೂರು:** ಬೆಳಗಾವಿಯಲ್ಲಿ ಕಂಡಕ್ಟರ್ ಮೇಲೆ ಮರಾಠಿ ಪುಂಡರ ಹಲ್ಲೆ ಪ್ರಕರಣ ಸಂಬಂಧ ಶುರುವಾದ ಸಮರ ಈಗ ಕರ್ನಾಟಕ ಬಂದ್‌ವರೆಗೆ ಬಂದಿದೆ. ಕರ್ನಾಟಕದಲ್ಲಿ ಎಂಇಎಸ್ ನಿಷೇಧ, ಮೇಕೆದಾಟು, ಕಳಸಬಂಡೂರಿ ಯೋಜನೆಗೆ ಶೀಘ್ರ ಅನುಮತಿ ಸೇರಿದಂತೆ ನಾಡು-ನುಡಿ, ನೆಲ-ಜಲ ವಿಷಯವಾಗಿ ಕನ್ನಡ ಒಕ್ಕೂಟಗಳು ಇಂದು ಕರ್ನಾಟಕ ಬಂದ್‌ಗೆ ಕರೆ ನೀಡಿವೆ.



ಬೆಳಗ್ಗೆ 6 ಗಂಟೆಯಿಂದ ಸಂಜೆ 6 ಗಂಟೆವರೆಗೆ ಅಖಂಡ ಕರ್ನಾಟಕ ಬಂದ್‌ಗೆ ಕರೆ ನೀಡಿದ್ದು ಬೆಳಗ್ಗೆ ಬೆಂಗಳೂರಿನ ಟೌನ್‌ಹಾಲ್‌ನಿಂದ ಫ್ರೀಡಂ ಪಾರ್ಕ್‌ವರೆಗೆ ಬೃಹತ್ ಮೆರವಣಿಗೆ ಹಮ್ಮಿಕೊಂಡಿವೆ. ಬೆಳಗಾವಿ, ಮಂಡ್ಯ, ರಾಮನಗರದಲ್ಲಿ ಸಂಪೂರ್ಣ ಬೆಂಬಲ ಸಿಕ್ಕಿದೆ. ಮೈಸೂರು, ಕಲ್ಯಾಣ ಕರ್ನಾಟಕದಲ್ಲಿ ಮಿಶ್ರ ಬೆಂಬಲ ಇದೆ. ಕರಾವಳಿ ಕರ್ನಾಟಕದಲ್ಲಿ ಬಂದ್‌ಗೆ ಯಾವುದೇ ಸಂಘಟನೆ ಕರೆ ನೀಡಿಲ್ಲ.

**» ಬೆಳಗ್ಗೆಯಿಂದಲೇ ಬೆಂಗಳೂರಿನಲ್ಲಿ ಪೊಲೀಸರ ಕಟ್ಟೆಚ್ಚರ**

ಬಂದ್‌ಗೆ ಬೆಂಗಳೂರಿನಲ್ಲಿ ಪೊಲೀಸರು ಕಟ್ಟೆಚ್ಚರ ವಹಿಸಿದ್ದಾರೆ. ನಗರದ ಪ್ರಮುಖ ರಸ್ತೆಗಳಲ್ಲಿ ಪೊಲೀಸರು ಬೆಳಗ್ಗೆಯಿಂದಲೇ ಗಸ್ತಿನಲ್ಲಿದ್ದಾರೆ. ಯಾವುದೇ ಮೆರವಣಿಗೆ, ಪ್ರತಿಭಟನೆಗೆ ಅವಕಾಶವಿಲ್ಲ ಎಂದು ಪೊಲೀಸರು ಈಗಾಗಲೇ ಎಚ್ಚರಿಕೆ ನೀಡಿದ್ದಾರೆ. ಪುಟ 2

## ಸಿನಿಮಾ ನೋಡೋ ಪ್ಲ್ಯಾನ್ ಬೇಡ

**ಬೆಂಗಳೂರು:** ಬೆಳಗಾವಿಯಲ್ಲಿ ಮರಾಠಿಗರ ಪುಂಡಾಟ ಹೆಚ್ಚಾಗಿದೆ. ಮಹಾರಾಷ್ಟ್ರದಲ್ಲಿ ನಮ್ಮ ರಾಜ್ಯದ ಸಾರಿಗೆ ಬಸ್ ಚಾಲಕನಿಗೆ ಕಿರುಕುಳ ಕೊಟ್ಟ ಘಟನೆ ಇದಕ್ಕೆ ತಾಜಾ ಉದಾಹರಣೆ. ಇದನ್ನು ಖಂಡಿಸಿ ಕನ್ನಡ ಪರ ಸಂಘಟನೆಗಳು ಬಂದ್‌ಗೆ ಕರೆ ನೀಡಿವೆ. ಇಂದು ರಾಜ್ಯ ಸ್ತಬ್ಧವಾಗಲಿದೆ. ಹಲವು ಸಂಘ-ಸಂಸ್ಥೆಗಳು ಈ ಬಂದ್‌ಗೆ ಬೆಂಬಲ ಸೂಚಿಸಿವೆ. ಅದೇ ರೀತಿ ಕರ್ನಾಟಕ ಬಂದ್‌ಗೆ ಚಲನಚಿತ್ರ ವಾಣಿಜ್ಯ ಮಂಡಳಿ ಬೆಂಬಲ ಕೊಟ್ಟಿದೆ. ಇದರಿಂದ ಸಿನಿಮಾ ಪ್ರದರ್ಶನದಲ್ಲಿ ವ್ಯತ್ಯಾಸ ಕಾಣಲಿದೆ. ಪುಟ 2



## 1 ತಿಂಗಳು ನಂದಿ ಬೆಟ್ಟದ ರಸ್ತೆ ಬಂದ್

**ಚಿಕ್ಕಬಳ್ಳಾಪುರ:** ವಿಶ್ವವಿಖ್ಯಾತ ನಂದಿಗಿರಿಧಾಮದ ರಸ್ತೆ ನವೀಕರಣ ಕಾಮಗಾರಿ ಹಿನ್ನಲೆಯಲ್ಲಿ 1 ತಿಂಗಳು ನಂದಿಬೆಟ್ಟದ ರಸ್ತೆಯಲ್ಲಿ ವಾಹನಗಳ ಸಂಚಾರಕ್ಕೆ ನಿರ್ಬಂಧ ವಿಧಿಸಿ ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ ಆದೇಶ ಮಾಡಿದ್ದಾರೆ.

ಅಂದ ಹಾಗೆ ವಾರಾಂತ್ಯದ ದಿನಗಳಲ್ಲಿ ಶುಕ್ರವಾರ ಸಂಜೆ 6:30ರಿಂದ ಸೋಮವಾರ ಬೆಳಿಗ್ಗೆ 08 ಗಂಟೆ ವರೆಗೆ ಮಾತ್ರ ವಾಹನಗಳ ಸಂಚಾರಕ್ಕೆ ಅವಕಾಶ ಮಾಡಿಕೊಡಲಾಗಿದೆ. ಉಳಿದಂತೆ ವಾರದ ಐದೂ ದಿನಗಳು ವಾಹನಗಳ ಸಂಚಾರಕ್ಕೆ ಸಂಪೂರ್ಣ ನಿರ್ಬಂಧ ವಿಧಿಸಲಾಗಿದೆ. ಮಾರ್ಚ್ 24 ರಿಂದ ಏಪ್ರಿಲ್ 25ರ ವರೆಗೂ 1 ತಿಂಗಳು 4 ವಾರಗಳ ಕಾಲ ನಿರ್ಬಂಧ ಇರಲಿದೆ. ನಂದಿಬೆಟ್ಟದ ತಪ್ಪಲಿನಿಂದ ಬೆಟ್ಟದವರೆಗೂ 7.70 ಕಿಲೋಮೀಟರ್ ದೂರದ ರಸ್ತೆ ಕಾಮಗಾರಿ ನಡೆಯಲಿದೆ. ಪುಟ 2



## ಐಪಿಎಲ್ 10 ಸೆಕೆಂಡ್ ಜಾಹೀರಾತಿಗೆ ಲಕ್ಷ ಲಕ್ಷ

### 4,500 ಕೋಟಿ ಆದಾಯ ನಿರೀಕ್ಷೆಯಲ್ಲಿ ಜಿಯೋಸ್ಟಾರ್

**ಮುಂಬೈ:** ಇಂದಿನಿಂದ ಐಪಿಎಲ್ ಹಬ್ಬ ಆರಂಭವಾಗಲಿದ್ದು ಪ್ರಸಾರ ಹಕ್ಕುಗಳನ್ನು ಪಡೆದಿರುವ ಜಿಯೋ ಮತ್ತು ಸ್ಟಾರ್ ಈ ಬಾರಿಯ ಟೂರ್ನಿಯ ಜಾಹೀರಾತುಗಳಿಂದ ಒಟ್ಟು 4,500 ಕೋಟಿ ರೂ. ಆದಾಯವನ್ನು ನಿರೀಕ್ಷಿಸುತ್ತಿದೆ.

ಟಿವಿ ಮತ್ತು ಡಿಜಿಟಲ್‌ನಿಂದ 100 ಕೋಟಿ ವೀಕ್ಷಣೆಯ ಗುರಿಯನ್ನು ಹಾಕಲಾಗಿದ್ದು ಹತ್ತು ಸೆಕೆಂಡ್ ಟಿವಿ ಜಾಹೀರಾತಿಗೆ 8.5 ಲಕ್ಷ ರೂ. ದರವನ್ನು ನಿಗದಿಪಡಿಸಲಾಗಿದೆ. ಈಗಾಗಲೇ 32 ಕಂಪನಿಗಳು ಜಾಹೀರಾತು ನೀಡಲು ಮುಂದೆ ಬಂದಿದ್ದು ಮಾತುಕತೆ ಅಂತಿಮ ಹಂತದಲ್ಲಿದೆ ಎಂದು ವರದಿಯಾಗಿದೆ.

ಸಾಧಾರಣವಾಗಿ ಐಪಿಎಲ್‌ನಲ್ಲಿ ದೊಡ್ಡ ಕಂಪನಿಗಳು ಜಾಹೀರಾತು ನೀಡುತ್ತಿದ್ದವು. ಆದರೆ ಈ ಬಾರಿ ಯೂಟ್ಯೂಬ್ ಮತ್ತು ಫೇಸ್‌ಬುಕ್‌ನಲ್ಲಿ ವಿಡಿಯೋದಲ್ಲಿ ಜಾಹೀರಾತು ನೀಡುತ್ತಿರುವ ಸಣ್ಣ ಮತ್ತು ಮಧ್ಯಮ ಪ್ರಮಾಣದ ಉದ್ದಿಮೆಗಳನ್ನು ಜಿಯೋಹಾಟ್‌ಸ್ಟಾರ್ ಸಂಪರ್ಕಿಸಿವೆ. ಜಿಯೋಹಾಟ್‌ಸ್ಟಾರ್ ಐಪಿಎಲ್ ಅವಧಿಯಲ್ಲಿ ಒಟ್ಟು 10 ಕೋಟಿ ಸಬ್‌ಸ್ಕ್ರೈಬರ್ ಅದರಲ್ಲೂ 4 ಕೋಟಿ ಹೊಸ ಗ್ರಾಹಕರ ಮೇಲೆ ಕಣ್ಣಿಟ್ಟಿದೆ. ಪುಟ 2




**ಹಿಂದಿ ಹೇರಿಕೆಯಿಲ್ಲ | ಅಮಿತ್ ಶಾ ಮಹತ್ವದ ಘೋಷಣೆ**

## ಕನ್ನಡ ಸೇರಿ ಪ್ರಾದೇಶಿಕ ಭಾಷೆಗಳಲ್ಲೇ ಪತ್ರ ವ್ಯವಹಾರ

**ಬೆಂಗಳೂರು:** ಹಿಂದಿ ಹೇರಿಕೆ ಮಾಡಲಾಗುತ್ತಿದೆ ಎಂದು ಆರೋಪಿಸುವವರಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಶುಕ್ರವಾರ ರಾಜ್ಯಸಭೆಯಲ್ಲಿ ತೀಕ್ಷ್ಣ ತಿರುಗೇಟು ನೀಡಿದ್ದಾರೆ. ಭಾಷೆಯ ಹೆಸರಿನಲ್ಲಿ ದೇಶವನ್ನು ವಿಭಜಿಸುವ ಕೆಲಸ ಮಾಡಬಾರದು ಎಂದ ಅವರು, ಪ್ರಾದೇಶಿಕ ಭಾಷೆಗಳ ಉತ್ತೇಜನಕ್ಕಾಗಿ ಡಿಸೆಂಬರ್ ನಿಂದ ರಾಜ್ಯಗಳ ಜತೆ ಅಲ್ಲಿನ ಪ್ರಾದೇಶಿಕ ಭಾಷೆಯಲ್ಲೇ ಪತ್ರ ವ್ಯವಹಾರ ಮಾಡುವುದಾಗಿ ಘೋಷಣೆ ಮಾಡಿದ್ದಾರೆ. ಅದರಂತೆ, ಕರ್ನಾಟಕ ಸರ್ಕಾರದ ಜತೆ ಕನ್ನಡದಲ್ಲಿ, ತಮಿಳುನಾಡು ಸರ್ಕಾರದ ಜತೆ ತಮಿಳು ಹಾಗೂ ಇತರ ರಾಜ್ಯಗಳ ಜತೆ ಅಲ್ಲಿನ ಭಾಷೆಯಲ್ಲೇ ಅಮಿತ್ ಶಾ ಪತ್ರ ವ್ಯವಹಾರ ನಡೆಯಲಿದೆ.

**ಅಮಿತ್ ಶಾ ಹೇಳಿದ್ದೇನು? :** ಡಿಸೆಂಬರ್ ನಂತರ ನಾಗರಿಕರು, ಮುಖ್ಯಮಂತ್ರಿಗಳು, ಸಚಿವರು ಮತ್ತು ಸಂಸತ್ ಸದಸ್ಯರೊಂದಿಗೆ ಅವರದೇ ಭಾಷೆಯಲ್ಲಿ ಪತ್ರವ್ಯವಹಾರ ಮಾಡುತ್ತೇನೆ. ತಮ್ಮ ಭ್ರಷ್ಟಾಚಾರವನ್ನು ಮರೆಮಾಚಲು ಭಾಷೆಯ ಹೆಸರಿನಲ್ಲಿ ರಾಜಕೀಯ ನಡೆಸುವವರಿಗೆ ಇದು ಬಲವಾದ ಪ್ರತ್ಯುತ್ತರವಾಗಿದೆ ಎಂದು ಅಮಿತ್ ಶಾ ಹೇಳಿದರು.



ಬಿಜೆಪಿ ದಕ್ಷಿಣ ಭಾರತದ ಭಾಷೆಗಳನ್ನು ವಿರೋಧಿಸುತ್ತದೆ ಎಂಬ ಆರೋಪಗಳನ್ನು ತಿರಸ್ಕರಿಸಿದ ಅಮಿತ್ ಶಾ, 'ಅವರು ಏನು ಹೇಳುತ್ತಿದ್ದಾರೆ ನಾವು ದಕ್ಷಿಣದ ಭಾಷೆಗಳನ್ನು ವಿರೋಧಿಸುತ್ತೇವೆಯೇ ಇದು ಹೇಗೆ ಸಾಧ್ಯ ನಾನು ಗುಜರಾತ್‌ನಿಂದ ಬಂದವನು. ನಿರ್ಮಲಾ ಸೀತಾರಾಮನ್ ತಮಿಳುನಾಡಿನವರು. ಹೀಗಿದ್ದಾಗ ನಾವು ಪ್ರಾದೇಶಿಕ ಭಾಷೆಗಳನ್ನು ಹೇಗೆ ವಿರೋಧಿಸಬಹುದು' ಎಂದು ಪ್ರಶ್ನಿಸಿದರು.

ಭಾಷೆಯ ಹೆಸರಿನಲ್ಲಿ ದೇಶವನ್ನು ವಿಭಜಿಸುವವರು ತಮ್ಮ ಕಾರ್ಯಸೂಚಿಯನ್ನು ಜಾರಿಗೊಳಿಸಲು ಬಿಡಬಾರದು. ಅಧಿಕೃತ ಭಾಷಾ ಇಲಾಖೆಯ ಅಡಿಯಲ್ಲಿ, ನರೇಂದ್ರ ಮೋದಿ ಸರ್ಕಾರವು ಎಲ್ಲಾ ಭಾರತೀಯ ಭಾಷೆಗಳ ಬಳಕೆಯನ್ನು ಹೆಚ್ಚಿಸುವ ಕೆಲಸ ಮಾಡುತ್ತಿದೆ. ಅದಕ್ಕಾಗಿ ತಮಿಳು, ತೆಲುಗು, ಮರಾಠಿ, ಗುಜರಾತಿ, ಪಂಜಾಬಿ, ಅಸ್ಸಾಮಿ, ಬಂಗಾಳಿ ಸೇರಿದಂತೆ ಎಲ್ಲಾ ಭಾಷೆಗಳಿಗಾಗಿ 'ಭಾರತೀಯ ಅಧಿಕೃತ ಭಾಷಾ ಇಲಾಖೆ'ಯನ್ನು ಸ್ಥಾಪಿಸಿದೆ ಎಂದು ಶಾ ಹೇಳಿದರು.

**ಹಿಂದಿ, ಪ್ರಾದೇಶಿಕ ಭಾಷೆಗಳು ಒಡನಾಡಿಗಳು:** ಹಿಂದಿ ಯಾವುದೇ ಪ್ರಾದೇಶಿಕ ಭಾಷೆಯೊಂದಿಗೆ ಸ್ಪರ್ಧಿಸುವುದಿಲ್ಲ. ಅದರ ಬದಲಿಗೆ, ಹಿಂದಿಯು ಭಾಷಾ ಸಾಮರಸ್ಯವನ್ನು ಬೆಳೆಸುತ್ತದೆ. ಹಿಂದಿ ಎಲ್ಲಾ ಭಾರತೀಯ ಭಾಷೆಗಳಿಗೆ ಒಡನಾಡಿಯಾಗಿದೆ. ಹಿಂದಿ ಎಲ್ಲಾ ಭಾರತೀಯ ಭಾಷೆಗಳನ್ನು ಬಲಪಡಿಸುತ್ತದೆ ಮತ್ತು ಎಲ್ಲಾ ಭಾರತೀಯ ಭಾಷೆಗಳು ಹಿಂದಿಯನ್ನು ಬಲಪಡಿಸುತ್ತವೆ. ಇಲ್ಲಿ ಭಾಷೆಗಳ ನಡುವೆ ಕೊಡು ಕೊಳ್ಳುವಿಕೆ ಇದೆ ಎಂದ ಅವರು, ಭಾರತದ ಭಾಷಾ ವೈವಿಧ್ಯತೆಯನ್ನು ಬಲಪಡಿಸುವಲ್ಲಿ ಹಿಂದಿ ಮತ್ತು ಪ್ರಾದೇಶಿಕ ಭಾಷೆಗಳ ನಡುವಿನ ಪರಸ್ಪರ ಸಂಬಂಧವನ್ನು ಒತ್ತಿ ಹೇಳಿದರು.

**ತಮಿಳುನಾಡು ಸರ್ಕಾರದ ವಿರುದ್ಧ ವಾಗ್ದಾಳಿ:** ಭ್ರಷ್ಟಾಚಾರ ಮರೆಮಾಚಲು ಭಾಷೆಯನ್ನು ದಾಳವಾಗಿ ಬಳಸುವವರ ಬಂಡವಾಳವನ್ನು ಹಳ್ಳಿ ಹಳ್ಳಿಗೆ ತೆರಳಿ ಬಯಲಿಗೆಳೆಯುತ್ತೇವೆ ಎಂದು ತಮಿಳುನಾಡಿನ ಆಡಳಿತಾರೂಢ ಡಿಎಂಕೆ ವಿರುದ್ಧ ಅಮಿತ್ ಶಾ ವಾಗ್ದಾಳಿ ನಡೆಸಿದರು. ನಿಮಗೆ (ಡಿಎಂಕೆ) ವೈದ್ಯಕೀಯ ಮತ್ತು ಎಂಜಿನಿಯರಿಂಗ್ ಕೋರ್ಸ್‌ಗಳನ್ನು ತಮಿಳು ಭಾಷೆಗೆ ಭಾಷಾಂತರಿಸಲು ಧೈರ್ಯವಿಲ್ಲ ಎಂದೂ ಹೇಳಿದರು. ಪುಟ 2

## ಎಲ್ಲಾ ಎಣ್ಣೆ ಮಹಿಮೆ

### ಕುಡಿದ ಮತ್ತಲ್ಲಿ ರೈಲನ್ನೇ ನಿಲ್ಲಿಸಿದ ಕುಡುಕ

**ಮುಂಬೈ:** ಕುಡುಕರು ಕಂಠಪೂರ್ತಿ ಕುಡಿದಾಗ ಅವರು ಏನು ಮಾಡ್ತಾರೆ ಎಂಬ ಅರಿವೇ ಅವರಿಗೆ ಇರೋದಿಲ್ಲ. ಎಣ್ಣೆ ಪ್ರಿಯರಿಗೆ ಕುಡಿದ ಮೇಲೆ ಅದೆಷ್ಟು ಹುಚ್ಚು ಧೈರ್ಯ ಬರುತ್ತೆ ಅಂದ್ರೆ ಹುಲಿಯ ಬೋನಿಗೂ ಬೇಕಾದ್ರೂ ಕೈ ಹಾಕ್ತಾರೆ, ಟವರ್ ಬೇಕಾದ್ರೂ ಏರಿ ನಿಲ್ತಾರೆ. ಕುಡುಕರ ಅವಾಂತರ, ಹುಚ್ಚು ಸಾಹಸಗಳಿಗೆ ಸಂಬಂಧಿಸಿದ ಇಂತಹ ಸುದ್ದಿಗಳು ಆಗಾಗ್ಗೆ ವೈರಲ್ ಆಗುತ್ತಿರುತ್ತವೆ. ಇಲ್ಲೊಂದು ಅಂತಹದ್ದೇ ಘಟನೆ ನಡೆದಿದ್ದು, ಕುಡಿದ ಮತ್ತಲ್ಲಿ ವ್ಯಕ್ತಿಯೊಬ್ಬ ರೈಲನ್ನೇ ತಡೆದು ನಿಲ್ಲಿಸಿದ್ದಾನೆ. ಅದು ಹೆಂಗ್ ಹೋಗ್ತೀರಾ ಎಂದು ಹೇಳಿ ರೈಲು ಹೋಗದಂತೆ ತಡೆದು ನಿಲ್ಲಿಸಿ ಅವಾಂತರ ಸೃಷ್ಟಿಸಿದ್ದಾನೆ. ಈ ವಿಡಿಯೋ ಎಲ್ಲೆಡೆ ಹರಿದಾಡುತ್ತಿದ್ದು, ಈತನ ಮಂಗನಾಟವನ್ನು ಕಂಡು ನೋಡುಗರು ಫುಲ್ ಸುಸ್ತಾಗಿದ್ದಾರೆ.



ಮುಂಬೈನ ಮಾಹಿಮ್‌ನಲ್ಲಿ ಈ ಘಟನೆ ನಡೆದಿದ್ದು, ಎಣ್ಣೆ ಏಟಲ್ಲಿ ಕುಡುಕನೊಬ್ಬ ಇಲ್ಲಿನ ಲೋಕಲ್ ಟ್ರೈನ್‌ನನ್ನೇ ತಡೆದು ನಿಲ್ಲಿಸಿದ್ದಾನೆ. ರೈಲಿನ ಕಂಪಾರ್ಟ್‌ಮೆಂಟ್ ಮೇಲೆ ಹಾರಿ ಮಂಗನಾಟ ಆಡಿದ್ದು ಮಾತ್ರವಲ್ಲದೆ ಹಳಿಯ ಮೇಲೆ ಕುಳಿತು ಪುಟ 2

## ಹನಿಟ್ರ್ಯಾಪ್ ಆಗಿದ್ರೆ, ಪೊಲೀಸ್ ಠಾಣೆಯಲ್ಲಿ ದೂರು ನೀಡಲಿ: ಡಿಕೆಶಿ

**ಮಡಿಕೇರಿ:** ಹನಿಟ್ರ್ಯಾಪ್ ಆಗಿದ್ದರೆ ಪೊಲೀಸ್ ಠಾಣೆಯಲ್ಲಿ ದೂರು ನೀಡಲಿ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ. ಕೊಡಗಿನ ಭಾಗಮಂಡಲದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಹನಿ ಟ್ರ್ಯಾಪ್ ಆಗಿರುವುದು ಅಲ್ಲ, ಹನಿಟ್ರ್ಯಾಪ್ ಆಗುವುದು. ಮಾಡಿದ್ದಾರೋ ಇಲ್ಲವೋ ಮಹರಾಯ, ಅವರು ಮಾಡಿದ್ದು ಅವರಿಗೆ. ಹಾಗೇನಾದರೂ ಆಗಿದ್ದರೆ ದೂರು ನೀಡಲಿ ಕಾನೂನು ಕ್ರಮ ತೆಗೆದುಕೊಳ್ಳುತ್ತೇವೆ ಎಂದರು. ಮುನಿರತ್ನ ಮಾಡಿದ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು,



ಅಧಿವೇಶನದಲ್ಲಿ ಅವರು ಏನು ಮಾಡಿದ್ದಾರೆ ಎನ್ನುವುದು ದೂರಿನಲ್ಲಿ ಇದೆ. ಬಿಜೆಪಿಯವರೇ ಹೇಳ್ತಿದ್ದಾರೆ ಅಲ್ವಾ ಅಶೋಕ್‌ಗೆ ಏನೋ ಮಾಡಿದ್ದಾರೆ ಅಂತ, ಸುಮ್ಮ ಸುಮ್ಮನೆ ಯಾರಾದರೂ ನಿಮ್ಮ ಹತ್ತಿರಕ್ಕೆ ಬರುತ್ತಾರಾ? ನೀವು ಹಾಯ್ ಎಂದ್ರೆ, ಅವರು ಹಾಯ್ ಅಂತಾರೆ ಎಂದು ತಿರುಗೇಟು ನೀಡಿದರು. ಬೆಂಗಳೂರಿನ ಸ್ಯಾಂಕಿಕೆರೆಯಲ್ಲಿ ಕಾವೇರಿ ಆರತಿ ಹಿನ್ನೆಲೆಯಲ್ಲಿ ಕಾವೇರಿಗೆ ಪೂಜೆ ಸಲ್ಲಿಸಲು ಭಾಗಮಂಡಲಕ್ಕೆ ಹೆಲಿಕಾಪ್ಟರ್‌ನಲ್ಲಿ ಡಿಕೆಶಿ ಬಂದಿದ್ದಾರೆ. ತಲಕಾವೇರಿಯಲ್ಲಿ ಪೂಜೆ ಸಲ್ಲಿಸಿದ ಬಳಿಕ ಕಾವೇರಿ ತೀರ್ಥವನ್ನು ಸಂಗ್ರಹ ಮಾಡಿದ್ದಾರೆ. ಕಾವೇರಿ ತೀರ್ಥವನ್ನು ನೇರವಾಗಿ ಬೆಂಗಳೂರಿಗೆ ತೆಗೆದುಕೊಂಡು ಹೋಗಿ ಸ್ಯಾಂಕಿ ಕೆರೆಯ ಪೂಜೆಯಲ್ಲಿ ಡಿಕೆಶಿ ಭಾಗಿಯಾಗಿದ್ದಾರೆ.

## ಸಿಎಂ ಕುರ್ಚಿಗಾಗಿ ಹನಿಟ್ರ್ಯಾಪ್ ಸರ್ಕಾರದಲ್ಲಿ ದಲಿತ ಮಂತ್ರಿಗೆ ರಕ್ಷಣೆ ಇಲ್ಲ: ಅಶೋಕ್

**ಬೆಂಗಳೂರು:** ಸಿಎಂ ಕುರ್ಚಿಗಾಗಿ ಹನಿಟ್ರ್ಯಾಪ್ ಯತ್ನ ನಡೆದಿದೆ ಎಂದು ವಿಪಕ್ಷ ನಾಯಕ ಆರ್ ಅಶೋಕ್ ಗಂಭೀರ ಆರೋಪ ಮಾಡಿದ್ದಾರೆ. ವಿಧಾನಸಭಾ ಕಲಾಪ ಮುಂದೂಡಿದ ಬಳಿಕ ಹೊರಗಡೆ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ರಾಜಣ್ಣ ಸಾಮಾನ್ಯ ವ್ಯಕ್ತಿಯಲ್ಲ. ಅವರು ಸರ್ಕಾರದ ಮಂತ್ರಿಯಾಗಿದ್ದಾರೆ.



ಅವರೇ ಸದನದಲ್ಲಿ ಆರೋಪ ಮಾಡಿದ್ದಾರೆ. ಈ ಸರ್ಕಾರದಲ್ಲಿ ದಲಿತ ಮಂತ್ರಿಗಳಿಗೆ ರಕ್ಷಣೆ ಇಲ್ಲ ಎಂದು ಟೀಕಿಸಿದರು. ರಾಜಣ್ಣ ಅವರೇ ಸದನದಲ್ಲಿ 48 ಜನರ ಮೇಲೆ ಹನಿಟ್ರ್ಯಾಪ್ ಆಗಿದೆ ಅಂದಿದ್ದಾರೆ. ಈ ಆರೋಪಕ್ಕೆ ಸಿಎಂ ಸರಿಯಾಗಿ ಉತ್ತರ ನೀಡಿಲ್ಲ. ಇದು ಗಂಭೀರ ಪ್ರಕರಣ, ಎಲ್ಲ ಶಾಸಕರ, ಸದನದ, ರಾಜ್ಯದ ಗೌರವದ ಪ್ರಶ್ನೆ. ಸಿಬಿಐ ಅಥವಾ ಹಾಲಿ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು. ಹನಿಟ್ರ್ಯಾಪ್ ವಿಚಾರ ಸದನದಲ್ಲಿ ಪ್ರಸ್ತಾಪ ಆಗಿದ್ದು ಒಂದು ಗ್ಯಾಂಗ್ ಮಾಡಿದೆ ಎಂದು ಹೇಳಿದ್ದಾರೆ. ಏನಿದು ಕಳ್ಳಾಟ ನಡೆಯುತ್ತಿದ್ಯಾ, ರಾಜಣ್ಣ ಹೇಳಿಕೆ ಸದನದ ಆಸ್ತಿ ಎಂದರು.

# ಪ್ರೀತ್ಸೆ ಎಂದು 19ರ ಯುವತಿ ಹಿಂದೆ ಬಿದ್ದ 47ರ ವ್ಯಕ್ತಿ: ಅಂಕಲ್ ಕಿರುಕುಳಕ್ಕೆ ವಿದ್ಯಾರ್ಥಿನಿ ದುರಂತ ಸಾವು

**ಗದಗ:** ಪ್ರೀತ್ಸೆ ಪ್ರೀತ್ಸೆ ಅಂತ ದುಂಬಾಲು, ಮದುವೆಯಾಗುವಂತೆ 47 ವರ್ಷದ ಅಂಕಲ್ 19 ವರ್ಷದ ಯುವತಿ ಹಿಂದೆಬಿದ್ದಿದ್ದು, ಇದೀಗ ಅಂಕಲ್?ನ ಕಿರುಕುಳ ತಾಳಲಾರದೇ ಯುವತಿ ದುರಂತ ಸಾವು ಕಂಡಿದ್ದಾಳೆ. ಹೌದು; ಗದಗ ಜಿಲ್ಲೆ ಮುಂಡರಗಿ ತಾಲೂಕಿನ ವೀರಾಪೂರ ತಾಂಡಾ ನಿವಾಸಿ ಕಿರಣ್ ಎನ್ನುವಾತ ಪ್ರೀತಿಸುವಂತೆ ಮಗಳ ವಯಸ್ಸಿನ ಯುವತಿ ಹಿಂದೆ ಬಿದ್ದು ಕಿರುಕುಳ ನೀಡಿದ್ದಾನೆ. ಇದರಿಂದ ಯುವತಿ ಆತ್ಮಹತ್ಯೆಗೆ ಶರಣಾಗಿದ್ದಾಳೆ. ಕಿರಣ ಕಳೆದ ಹಲವು ದಿನಗಳಿಂದ ವಂದನಾಗೆ ನಿತ್ಯ ಫೋನ್ ಮಾಡೋದು, ಮೆಸೇಜ್ ಮಾಡಿ, ಮದುವೆ ಆಗುವಂತೆ ಕಿರುಕುಳ ನೀಡುತ್ತಿದ್ದನಂತೆ. ಮದುವೆ ಆಗದಿದ್ದರೆ ಇಬ್ಬರ ಫೋಟೋ ಎಡಿಟ್ ಮಾಡಿ, ಸಾಮಾಜಿಕ ಜಾಲತಾಣದಲ್ಲಿ ವೈರಲ್ ಮಾಡುವುದಾಗಿ ಬೆದರಿಕೆ ಹಾಕಿದ್ದನಂತೆ. ಹೀಗಾಗಿ ಆತನ ಕಿರುಕುಳ ತಾಳಲಾರದೆ ವಂದನಾ ಫಿನಾಯಿಲ್ ಕುಡಿದು ಆತ್ಮಹತ್ಯೆಗೆ ಶರಣಾಗಿದ್ದಾಳೆ ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ. 47 ವರ್ಷದ ಕಿರಣ್‌ಗೆ ಎರಡು ಕಾಲು ಇಲ್ಲ. ಆದರೂ ತನ್ನ ವಯಸ್ಸು ಆ ಯುವತಿ ವಯಸ್ಸು ಏನು ಎನ್ನುವುದನ್ನು ಯೋಚಿಸಿದೇ ಪ್ರೀತ್ಸೆ ಪ್ರೀತ್ಸೆ ಎಂದು ದುಂಬಾಲು ಬಿದ್ದಿದ್ದಾನೆ. ಕಿರಣ್‌ನ ಕಿರುಕುಳ ತಾಳಲಾರದೇ ವಂದನಾ ಫಿನಾಯಿಲ್ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದು, ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ. ಇನ್ನು ಇದಕ್ಕೆ ಕಾರಣನಾದ ಕಿರಣ್‌ನಿಗೆ ಕಠಿಣ ಕ್ರಮಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ. ಸದ್ಯ ಬೆಟಗೇರಿ ಪೊಲೀಸ್ ಠಾಣೆ ಪೊಲೀಸರು ದೂರು ದಾಖಲಿಸಿಕೊಂಡು ಕಿರಣ್‌ನನ್ನು ಬಂಧಿಸಿ ತನಿಖೆ ನಡೆಸಿದ್ದಾರೆ.



**ಆರೋಪಕ್ಕೆ ಬಿಗ್ ಟ್ವಿಸ್ಟ್?:** 19 ವರ್ಷದ ವಂದನಾ ಗದಗ ಜಿಮ್ಸ್ ನಲ್ಲಿ ಪ್ಯಾರಾಮೆಡಿಕಲ್ ಓದುತ್ತಿದ್ದಳು. ಮಗಳ ಬಗ್ಗೆ ಪೋಷಕರು ಸಾಕಷ್ಟು ಕನಸು ಕಂಡಿದ್ದರು. ಆದ್ರೆ, ಈ ಯುವತಿ ಹಿಂದೆ 47 ವರ್ಷದ ಕಿರಣ ಎನ್ನುವಾತ ಮದುವೆ ಆಗು ಎಂದು ನಿತ್ಯ ಫೋನ್ ಮಾಡಿ ಕಿರುಕುಳ ನೀಡುತ್ತಿದ್ದನಂತೆ. ಅಲ್ಲದೇ ಇಬ್ಬರ ಫೋಟೋ ಎಡಿತ್ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಡುವುದಾಗಿ ಬೆದರಿಕೆ ಹಾಕಿದ್ದನಂತೆ. ಹೀಗಾಗಿ ಗದಗ ನಗರದ ಮೆಟ್ರಿಕ್ ನಂತರ ಬಾಲಕಿಯರ ವಸತಿ ನಿಲಯದಲ್ಲಿ ವಂದನಾ ಫಿನಾಯಿಲ್ ಕುಡಿದಿದ್ದಾಳೆ. ಇದರಿಂದ ಅಸ್ವಸ್ಥಳಾಗಿದ್ದ ವಂದನಾಳನ್ನು ಗದಗ ಜಿಮ್ಸ್ ಆಸ್ಪತ್ರೆ ದಾಖಲು ಮಾಡಲಾಗಿತ್ತು. ಆದ್ರೆಮ ಚಿಕಿತ್ಸೆ ಫಲಕಾರಿಯಾಗದೇ ಕೊನೆಯುಸಿರೆಳೆದಿದ್ದಾಳೆ.

ಅಂದಹಾಗೇ ಮೃತ ವಂದನಾ ಹಾಗೂ ಅಂಕಲ್ ಕಿರಣ ಇಬ್ಬರು ಗದಗ ಜಿಲ್ಲೆ ಮುಂಡರಗಿ ತಾಲೂಕಿನ ವೀರಾಪೂರ ತಾಂಡಾ ನಿವಾಸಿಗಳು. ವಂದನಾ ಕುಟುಂಬಸ್ಥರು ಚಿಕ್ಕದೊಂದು ಬೀಡಿ ಶಾಪ್ ಹಾಕಿಕೊಂಡು ಜೀವನ ನಡೆಸುತ್ತಿದ್ದರು. ಅದೇ ತಾಂಡಾದಲ್ಲಿ ಕಿರಣ್ ವಾಟರ್ ಮ್ಯಾನ್ ಕೆಲಸ ಮಾಡುತ್ತಿದ್ದ. ಆದ್ರೆ, ಕಳೆದ ಒಂದು ವರ್ಷದ ಹಿಂದೆ ಕಿರಣ್?, ವಂದನಾ ಜೊತೆಗೆ ಮದುವೆ ಮಾಡಿಕೊಂಡಿ ಎಂದು ಕುಟುಂಬಸ್ಥರನ್ನು ಕೇಳದ್ದನಂತೆ ಆಗ ವಯಸ್ಸಿನ ಅಂತರ ಹಾಗೂ ಕಿರಣ ವಿಶೇಷ ಚೇತನ ಇರೋದರಿಂದ ಮದುವೆಗೆ ಮೃತಳ ಕುಟುಂಬಸ್ಥರು ವಿರೋಧ ಮಾಡಿದ್ದರು. ಆಗ ಸುಮ್ಮನಾಗದ ಕಿರಣ ಪುನಃ ಕಿರುಕುಳ ನೀಡಲು ಪ್ರಾರಂಭಿಸಿದ್ದಾನೆ. ಇದರಿಂದ ಬೇಸತ್ತ ಯುವತಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ಕುಟುಂಬಸ್ಥರು ಆರೋಪ ಮಾಡಿದ್ದಾರೆ. ನಮ್ಮ ಕುಟುಂಬಕ್ಕೆ ಹಿರಿಯ ಮಗಳು ವಂದಾನ. ಗಂಡ ಇಲ್ಲವಾದರೂ ಸಹ ಕಷ್ಟಪಟ್ಟು ಮೂವರು ಮಕ್ಕಳನ್ನು ಚನ್ನಾಗಿ ಬೆಳೆಸಿದ್ದೆ. ಮೂವರ ಪೈಕಿ ಕಿರಿಯ ಮಗಳು ವಂದಾನ ಚೆನ್ನಾಗಿ ಓದಿ, ನೌಕರಿ ಮಾಡುತ್ತಾಳೆ.ದು ಕನಸು ಕಂಡಿದ್ದೆ. ಆದ್ರೆ ಈಗ ಕಿರಣ ಕಿರುಕುಳಕ್ಕೆ ಬೇಸತ್ತು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ವಂದನಾ ತಾಯಿ ಕಣ್ಣೀರಿಟ್ಟಿದ್ದಾರೆ. ಮಗಳ ವಯಸ್ಸಿನ ಯುವತಿ ಹಿಂದೆ ಬಿದ್ದ ವ್ಯಕ್ತಿಗೆ ತಕ್ಕ ಶಿಕ್ಷೆಯಾಗಬೇಕು ಎಂದು ಕುಟುಂಬಸ್ಥರು ಒತ್ತಾಯ ಮಾಡಿದ್ದಾರೆ.

ಒಟ್ಟಿನಲ್ಲಿಬಾಳಿ ಬದುಕಬೇಕಾದ ಯುವತಿ ಅಂಕಲ್ ಕಾಟಕ್ಕೆ ಸಾವಿನ ಮನೆ ಸೇರಿದ್ದಾಳೆ. ಮತ್ತೊಂದೆಡೆ ಮನೆಗೆ ಆಧಾರವಾಗಬೇಕಾದ ಮಗಳನ್ನು ಕಳೆದುಕೊಂಡು ಹೆತ್ತವರು ಕಣ್ಣೀರು ಹಾಕುವಂತಾಗಿದೆ.

# ಹನಿಟ್ರ್ಯಾಪ್ ಪ್ರಕರಣ ಜಡ್ಜ್ ಅಥವಾ ಸಿಬಿಐ ತನಿಖೆಗೆ ಕೊಡಬೇಕು

**ಬೆಂಗಳೂರು:** ಹನಿಟ್ರ್ಯಾಪ್ ಕುರಿತಂತೆ ಹೈಕೋರ್ಟಿನ ಈಗಿನ ನ್ಯಾಯಮೂರ್ತಿಗಳು ಅಥವಾ ಸಿಬಿಐ ತನಿಖೆ ನಡೆಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ. ವಿಜಯೇಂದ್ರ ಅವರು ಆಗ್ರಹಿಸಿದ್ದಾರೆ.

ಮಾಧ್ಯಮ ಪ್ರತಿನಿಧಿಗಳ ಜೊತೆ ಇಂದು ಮಾತನಾಡಿದ ಅವರು, ಸಚಿವರಾದ ರಾಜಣ್ಣ ಅವರು ರಾಜ್ಯ ಹಾಗೂ ದೇಶದ 48ಕ್ಕೂ ಹೆಚ್ಚು ಪ್ರಮುಖರು ಹನಿಟ್ರ್ಯಾಪ್‌ಗೆ ಒಳಗಾದ ಕುರಿತು ತಿಳಿಸಿ ತನಿಖೆ ಆಗಬೇಕೆಂದು ಹೇಳಿಕೆ ಕೊಟ್ಟಿದ್ದಾರೆ. ಇದು ಬಹಳ ಗಂಭೀರ ವಿಚಾರ ಎಂದು ತಿಳಿಸಿದ ಗೃಹ ಸಚಿವರು, ಇದರ ಬಗ್ಗೆ ತನಿಖೆ ಮಾಡಿಸುವುದಾಗಿ ಹೇಳಿದ್ದರು. ಸದನ ಮುಗಿದ ಬಳಿಕ ಹೊರಕ್ಕೆ ಬಂದ ಗೃಹ ಸಚಿವರು, ತಮಗೆ ಅಧಿಕೃತವಾಗಿ ಯಾವುದೇ ಅಧಿಕಾರಿಗಳು ಮಾಹಿತಿ ನೀಡಿಲ್ಲ ಎಂದಿದ್ದಾರೆ ಎಂದು ವಿವರಿಸಿದರು.



ಅಧಿಕಾರಿಗಳು ಮಾಹಿತಿ ಕೊಟ್ಟ ಮೇಲೆ ಅದರ ಕುರಿತು ಆಲೋಚಿಸುವುದಾಗಿ ತಿಳಿಸಿ ದ್ವಂದ್ವ ನೀತಿ ಪ್ರದರ್ಶನ ಮಾಡಿದ್ದಾರೆ. ನಾವು ಸದನದಲ್ಲಿ ಮುಖ್ಯಮಂತ್ರಿಗಳಿಂದ ಉತ್ತರ ಪಡೆಯುವ ಪ್ರಯತ್ನ ಮಾಡಿದ್ದೇವೆ. ಅವರು ಯಾವುದೇ ರೀತಿ ಸರಿಯಾದ ಉತ್ತರ ಕೊಟ್ಟಿಲ್ಲ ಎಂದು ಟೀಕಿಸಿದರು. ಇದೊಂದು ಗಂಭೀರ ಪ್ರಕರಣ. ಇದು ಸದನದ 224 ಶಾಸಕರ, ರಾಜ್ಯದ ಗೌರವದ ಪ್ರಶ್ನೆ. ಬಿಜೆಪಿ ಹಾಗೂ ಜೆಡಿಎಸ್ ಒಟ್ಟಾಗಿ ಪ್ರತಿಭಟಿಸುವುದಾಗಿ ತಿಳಿಸಿದರು.

ರಾಜ್ಯದಲ್ಲಿ ಅಲ್ಪಸಂಖ್ಯಾತರಿಗೆ ಸರಕಾರಿ ಕಾಮಗಾರಿಗಳಲ್ಲಿ 4% ಮೀಸಲಾತಿ ನೀಡಿದ ಬಗ್ಗೆ ಮುಖ್ಯಮಂತ್ರಿಗಳು ಹೇಳಿಕೆ ಕೊಟ್ಟಿದ್ದಾರೆ. ಇದರ ವಿರುದ್ಧ ನಾವು ರಾಜ್ಯಾದ್ಯಂತ ಜನಾಂದೋಲನಕ್ಕೆ ಕರೆ ಕೊಡಲಿದ್ದೇವೆ ಎಂದು ಪ್ರಕಟಿಸಿದರು.

ಬಿಜೆಪಿ– ಜೆಡಿಎಸ್ ಪಕ್ಷಗಳು ಮುಸಲ್ಮಾನರ ವಿರೋಧಿ ಅಲ್ಲ. ಆದರೆ ಹಿಂದೂಗಳಿಗೆ ಅಪಮಾನ ಮಾಡುವ ರೀತಿಯಲ್ಲಿ ಹಣಕಾಸಿನ ಸಚಿವರಾದ ಮುಖ್ಯಮಂತ್ರಿಗಳು ನಡೆದುಕೊಳ್ಳುತ್ತಿದ್ದಾರೆ. ಇದನ್ನು ನಾವು ಧಿಕ್ಕರಿಸುತ್ತಿದ್ದೇವೆ ಎಂದು ತಿಳಿಸಿದರು. ವಿದೇಶಕ್ಕೆ ವಿದ್ಯಾಭ್ಯಾಸಕ್ಕೆ ಹೋಗುವ ಮುಸಲ್ಮಾನರಿಗೆ ಕೊಡುವ ಮೊತ್ತವನ್ನು 20 ಲಕ್ಷದಿಂದ 30 ಲಕ್ಷ ರೂ.ಗೆ ಏರಿಸಿದ್ದಾರೆ. ಹಿಂದೂಗಳಲ್ಲಿ ಬಡವರಿಲ್ಲವೇ ಅವರು ಹೊರದೇಶಕ್ಕೆ ವಿದ್ಯಾಭ್ಯಾಸಕ್ಕೆ ಹೋದರೆ ಅವರಿಗೆ ಹಣಕಾಸಿನ ಅವಶ್ಯಕತೆ ಇಲ್ಲವೇ ಎಂದು ಕೇಳಿದರು. ಮುಸಲ್ಮಾನ ಹೆಣ್ಮಕ್ಕಳ ಆತ್ಮರಕ್ಷಣೆಗಾಗಿ ಬಜೆಟ್‌ನಲ್ಲಿ ಹಣ ಇಟ್ಟಿದ್ದಾರೆ. ರಾಜ್ಯದಲ್ಲಿ ಲವ್ ಜಿಹಾದ್‌ಗೆ ಬಲಿ ಆಗುತ್ತಿರುವುದು ಹಿಂದೂ ಹೆಣ್ಮಕ್ಕಳೇ ಹೊರತು ಮುಸ್ಲಿಂ ಹೆಣ್ಮಕ್ಕಳಲ್ಲ ಎಂದು ಗಮನ ಸೆಳೆದರು. ಮುಸಲ್ಮಾನರ ಓಲೈಕೆ ಮೂಲಕ ಧರ್ಮಗಳ ನಡುವೆ ಬೆಂಕಿ ಹಚ್ಚಲು ಮುಖ್ಯಮಂತ್ರಿಗಳು ಹೊರಟಿದ್ದು, ಇದನ್ನು ನಾವು ವಿರೋಧಿಸುತ್ತೇವೆ. ಈ ಎಲ್ಲ ವಿಚಾರಗಳನ್ನು ಮುಂದಿಟ್ಟು ಬಿಜೆಪಿ- ಜೆಡಿಎಸ್ ರಾಜ್ಯವ್ಯಾಪಿ ಹೋರಾಟ ಮಾಡಲಿದೆ. ಓಲೈಕೆ ರಾಜಕಾರಣಕ್ಕೆ ಇತಿಶ್ರೀ ಹಾಕಬೇಕು ಎಂದು ಒತ್ತಾಯಿಸಿದರು.

# ಸಿಬಿಐ ಮೂಲಕವೇ ಹನಿಟ್ರ್ಯಾಪ್ ತನಿಖೆಯಾಗಲಿ ಗೃಹ ಸಚಿವ ಪರಮೇಶ್ವರ್‌ಗೆ ಯತ್ನಾಳ್ ಪತ್ರ

**ವಿಜಯಪುರ:** ಜನಪ್ರತಿನಿಧಿಗಳ ಭದ್ರತೆಗೆ ಸಿಬಿಐ ಮೂಲಕವೇ ಹನಿಟ್ರ್ಯಾಪ್ ತನಿಖೆಯಾಗಲಿ ಎಂದು ಗೃಹ ಸಚಿವ ಜಿ.ಪರಮೇಶ್ವರ್‌ಗೆ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಪತ್ರ ಬರೆದಿದ್ದಾರೆ.

ವಿಧಾನಸಭೆ ಕಲಾಪದಲ್ಲಿ ಬಯಲಾದ ಹನಿಟ್ರ್ಯಾಪ್ ವಿಚಾರ ಪ್ರಸ್ತಾಪಿಸಿ ಪತ್ರ ಬರೆದಿದ್ದು, ಹನಿಟ್ರ್ಯಾಪ್ ಪ್ರಕರಣದ ತನಿಖೆಗೆ ಒತ್ತಾಯಿಸಿದ್ದಾರೆ. ಜನಪ್ರತಿನಿಧಿಗಳನ್ನ ಟಾರ್ಗೆಟ್ ಮಾಡಿ ಹನಿಟ್ರ್ಯಾಪ್ ಮಾಡಲಾಗುತ್ತಿದೆ. ಜನಪ್ರತಿನಿಧಿಗಳ ಭದ್ರತೆಗಾಗಿ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದ್ದಾರೆ. ಈ ಮೂಲಕ ನೀವು ಜನಪ್ರತಿನಿಧಿಗಳ ಘನತೆ ಕಾಪಾಡಿ ಎಂದು ಮನವಿ ಮಾಡಿಕೊಂಡಿದ್ದಾರೆ.

ಹನಿಟ್ರ್ಯಾಪ್ ಪ್ರಕರಣದ ತನಿಖೆಗೆ ನಡೆಸಬೇಕು. ಸಿಬಿಐ ಮೂಲಕವೇ ಹನಿಟ್ರ್ಯಾಪ್ ಪ್ರಕರಣ ತನಿಖೆಯಾಗಲಿ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಗುರುವಾರ ವಿಧಾನಸಭೆಯಲ್ಲಿ ಬಜೆಟ್ ಭಾಷಣದ ಮೇಲಿನ ಚರ್ಚೆಯ ಸಂದರ್ಭದಲ್ಲಿ ಈ ವಿಚಾರ



ಪ್ರಸ್ತಾಪ ಮಾಡಿದ ಯತ್ನಾಳ್, ರಾಜ್ಯದಲ್ಲಿ ಸಹಕಾರಿ ಸಚಿವರ ಮೇಲೆ ಹನಿಟ್ರ್ಯಾಪ್ ಮಾಡುವ ಪ್ರಯತ್ನ ಮಾಡಲಾಗಿದೆ. ಇದೊಂದು ಕೆಟ್ಟ ಸಂಸ್ಕೃತಿ. ಜನ ಪ್ರತಿನಿಧಿಗಳನ್ನು ಬ್ಲ್ಯಾಕ್ ಮೇಲ್ ಮಾಡುತ್ತಿದ್ದಾರೆ ಎಂದು ಪ್ರಸ್ತಾಪಿಸಿದ್ದರು. ಈ ಸಂದರ್ಭದಲ್ಲಿ ಕೆ.ಎನ್ ರಾಜಣ್ಣ ಮಾತನಾಡಿ, ರಾಜ್ಯದ 48 ರಾಜಕೀಯ ಮುಖಂಡರ ಸಿ.ಡಿ, ಪೆನ್‌ಡ್ರೈವ್ ತಯಾರಾಗಿದೆ. ನನ್ನ ಮೇಲೂ ಹನಿಟ್ರ್ಯಾಪ್ ಯತ್ನ ನಡೆದಿದೆ ಸ್ಫೋಟಕ ಮಾಹಿತಿ ನೀಡಿದ್ದರು.

# ಹಿಟ್ ಆಂಡ್ ರನ್ ಪ್ರಶ್ನೆಯೇ ಇಲ್ಲ, ಹನಿಟ್ರ್ಯಾಪ್ ಹಿಂದಿರುವವರ ಹೆಸರು ಬರಬೇಕು

**ಬೆಳಗಾವಿ:** ರಾಜಣ್ಣ ಈಗಾಗಲೇ ಹೇಳಿದ್ದಾರೆ. ಈ ಪ್ರಕರಣದಲ್ಲಿ ಹಿಟ್ ಆಂಡ್ ರನ್ ಪ್ರಶ್ನೆಯೇ ಇಲ್ಲ. ಹನಿಟ್ರ್ಯಾಪ್ ಹಿಂದೆ ಯಾರಿದ್ದಾರೆ ಅವರ ಹೆಸರು ಹೊರಗಡೆ ಬರಬೇಕು ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ.

ರಾಜಣ್ಣ ಹನಿಟ್ರಾಪ್ ವಿಚಾರದ ಬಗ್ಗೆ ಮಾಧ್ಯಮದ ಜೊತೆ ಮಾತನಾಡಿದ ಅವರು, ಕರ್ನಾಟಕ ರಾಜ್ಯದಲ್ಲಿ ಆಗಾಗ ಸಿಡಿ ಸದ್ದು ಆಗುತ್ತಿರುತ್ತದೆ ಸರಿಯಾದ ದಾರಿಯಲ್ಲಿ ತನಿಖೆ ಆಗಬೇಕು ಎಂದರು.

ಸಹೋದರ ರಮೇಶ ಜಾರಕಿಹೊಳಿ ಸಿಡಿ ಪ್ರಕರಣದಲ್ಲಿ ಹೀಗೆ ಆಯ್ತು. ಚರ್ಚೆಯಾಯಿತು, ತನಿಖೆಯಾಯಿತು. ಆದರೆ ಮಾಡಿದವರು ಯಾರು ಅಂತ ಬರಲಿಲ್ಲ. ಕೇವಲ ಇಬ್ಬರು ಮೂವರನ್ನು ಬಂಧಿಸಿದರು, ಆ ಪ್ರಕರಣದ ಹಿಂದೆ ಯಾರಿದ್ದರು ಎಂಬುದರ ಕುರಿತು ತಾರ್ಕಿಕ ಅಂತ್ಯ ಆಗಲಿಲ್ಲ ಎಂದು ತಿಳಿಸಿದರು.



ಗಂಭೀರ ಸಮಸ್ಯೆ ಕುರಿತು ಕಾಂಗ್ರೆಸ್ ಹೈಕಮಾಂಡ್ ಸೀರಿಯಸ್ ಆಗಿ ಅವರಾಗಿಯೇ ವರದಿ ತರಿಸಿಕೊಳ್ಳಬೇಕು. ರಾಜಣ್ಣ ಹನಿಟ್ರ್ಯಾಪ್ ಗಾಳಿಯಲ್ಲಿ ಹೇಳುವ ಮಾತಿಲ್ಲ, ತನಿಖೆಯಾಗಲಿ, ಸ್ವಪಕ್ಷೀಯರು ಇರಬಹುದು ಬೇರೆ ಪಕ್ಷದವರು ಇರಬಹುದು. ಇವರೇ, ಅವರೇ ಎಂದು ಹೇಳಲು ಆಗುವುದಲ್ಲ ಎಂದರು.

ದೂರು ನೀಡಿದರೆ ಗೃಹ ಮಂತ್ರಿಗಳು ತನಿಖೆ ಮಾಡುವುದಾಗಿ ಹೇಳಿದ್ದಾರೆ. ರಾಜಕಾರಣಿಗಳ ಹೆಸರಿನಲ್ಲಿ ಕರ್ನಾಟಕದ ಹೆಸರನ್ನು ಹಾಳು ಮಾಡುವುದು ಬೇಡ. ಹೋರಾಟ ಮಾಡುವುದಾರೆ ಮಾಡಿ ಆದರೆ ಇಂಥ ಹೀನ ಕೃತ್ಯಮಾಡಿಸಿ ಬಲಿಪಶು ಮಾಡಬೇಡಿ ಎಂದು ಹೇಳಿದರು.

# ಕೇರಳ ಉದ್ಯಮಿಯ ದರೋಡೆ ಮಾಡಿದ್ದ ಆರೋಪಿ ಕಾಲಿಗೆ ಗುಂಡೇಟು

**ಮೈಸೂರು:** ದರೋಡೆ ಪ್ರಕರಣವೊಂದರಲ್ಲಿ ಶಾಮೀಲಾಗಿದ್ದ ಆರೋಪಿ ಕಾಲಿಗೆ ಪೊಲೀಸರು ಗುಂಡು ಹಾರಿಸಿರುವ ಘಟನೆ ಮೈಸೂರು ಹೊರವಲಯದಲ್ಲಿ ನಡೆದಿದೆ. ಮಹಜರ್ ನಡೆಸುವ ವೇಳೆ ಪೊಲೀಸರ ಮೇಲೆ ಹಲ್ಲೆ ನಡೆಸಿ ಪರಾರಿ ಆಗಲು ಯತ್ನಿಸಿದ ಕಾರಣ ಆತ್ಮರಕ್ಷಣೆಗಾಗಿ ಪೊಲೀಸರು ಆರೋಪಿ ಕಾಲಿಗೆ ಗುಂಡು ಹಾರಿಸಿ ಹಿಡಿದಿದ್ದಾರೆ. ಆರೋಪಿ ನಡೆಸಿದ ದಾಳಿಯಲ್ಲಿ ಸಬ್ ಇನ್ಸ್‌ಪೆಕ್ಟರ್ ಹಾಗೂ ಪೇದೆಯೊಬ್ಬರಿಗೆ ಗಾಯವಾಗಿದೆ. ಜಯಪುರ ಪೊಲೀಸ್ ಠಾಣಾ ವ್ಯಾಪ್ತಿಯ ಗೋಪಾಲಪುರ ಗ್ರಾಮದ ಬಳಿ ಈ ಘಟನೆ ನಡೆದಿದೆ. ಕೇರಳ ಮೂಲದ ಆರೋಪಿ ಆದರ್ಶ್‌ಗೆ ಗುಂಡೇಟು ಬಿದ್ದಿದೆ. ಘಟನೆಯಲ್ಲಿ ಜಯಪುರ ಠಾಣೆ ಎ ಎಸ್ ಐ ಪ್ರಕಾಶ್ ಹಾಗೂ ಸಿಬ್ಬಂದಿ ಗಾಯಗೊಂಡಿದ್ದಾರೆ.



**ಘಟನೆ ವಿವರ:** ಕೆಲವು ದಿನಗಳ ಹಿಂದೆ ಜಯಪುರ ಪೊಲೀಸ್ ಠಾಣಾ ವ್ಯಾಪ್ತಿಯ ಹಾರೋಹಳ್ಳಿ ಬಳಿ ದರೋಡೆ ನಡೆದಿತ್ತು. ಹಾಡ ಹಗಲೇ ಕೇರಳ ಮೂಲದ ಉದ್ಯಮಿಯನ್ನು ಅಡ್ಡಗಟ್ಟಿ ದರೋಡೆ ನಡೆಸಲಾಗಿತ್ತು. ಈ ಪ್ರಕರಣಕ್ಕೆ ಸಂಭಂಧಿಸಿದಂತೆ ಪೊಲೀಸರು ಈಗಾಗಲೇ 3 ಆರೋಪಿಗಳನ್ನು ಬಂಧಿಸಿದ್ದರು. ಕೆಲವು ದಿನ ಹಿಂದೆ ಮತ್ತೊಬ್ಬ ಆರೋಪಿ ಆದರ್ಶ್ ಸೇರಿ ಇಬ್ಬರನ್ನು ಬಂಧಿಸಲಾಗಿತ್ತು. ದರೋಡೆಯಲ್ಲಿ ಆದರ್ಶ್ ಪಾತ್ರ ಸಹಾ ಪ್ರಮುಖವಾಗಿತ್ತು. ದರೋಡೆ ನಡೆದ ಸ್ಥಳದ ಬಳಿ ಪೊಲೀಸರಿಗೆ ಕ್ವಾಲಿಸ್ ಕಾರು ದೊರೆತಿತ್ತು. ಇದರ ಮಾಲೀಕ ಆದರ್ಶ್ ಎಂಬುದನ್ನು ಪೊಲೀಸರು ಪತ್ತೆ ಹಚ್ಚಿದ್ದರು. ಆದರ್ಶ್‌ಗಾಗಿ ಮೈಸೂರು ಜಿಲ್ಲಾ ಪೊಲೀಸರು ತಂಡಗಳನ್ನು ರಚಿಸಿದ್ದರು. ಆದರ್ಶ್ ಬಂಧನ ಸವಾಲಾಗಿತ್ತು. ಕೊನೆಗೂ ಎರಡು ದಿನಗಳ ಹಿಂದೆ ಆದರ್ಶ್ ಪೊಲೀಸರ ಬಲೆಗೆ ಬಿದ್ದಿದ್ದ. ಮೈಸೂರಿಗೆ ಕರೆ ತಂದ ಪೊಲೀಸರು ಈತನ ಕಾರು ದೊರೆತ ಸ್ಥಳಕ್ಕೆ ಮಹಜರ್‌ಗಾಗಿ ಕರೆದುಕೊಂಡು ಹೋಗಿದ್ದರು.

ಆದರ್ಶ್ ಬಂಧಿಸಿದ ಪೊಲೀಸರು ಸ್ಥಳ ಮಹಜರಿಗಾಗಿ ಆದರ್ಶ್ ಕಾರು ಸಿಕ್ಕ ಸ್ಥಳಕ್ಕೆ ಕರೆದುಕೊಂಡು ಹೋಗಲಾಗಿತ್ತು. ಜಯಪುರ ಸಬ್ ಇನ್ಸ್ ಪೆಕ್ಟರ್ ಪ್ರಕಾಶ್ ಬೈಲುಕುಪ್ಪೆ, ಇನ್ಸಪೆಕ್ಟರ್ ದೀಪಕ್ ಹಾಗೂ ಇಬ್ಬರು ಸಿಬ್ಬಂ ಕರೆದೊಯ್ದಿದ್ದರು. ಕಾರು ಪತ್ತೆಯಾದ ಸ್ಥಳವನ್ನು ಆದರ್ಶ್ ಗುರುತಿಸಿದ್ದಾನೆ. ನಂತರ ಮೂತ್ರವಿಸರ್ಜನೆ ನೆಪವೊಡ್ಡಿ ರಸ್ತೆ ಬದಿಯಲ್ಲಿ ನಿಂತಿದ್ದಾನೆ. ಅಲ್ಲಿ ಯಾರೋ ಕುಡಿದು ಬಿಸಾಕಿದ್ದ ಬಿಯರ್ ಬಾಟಲಿ ಈತನ ಕೈಗೆ ಸಿಕ್ಕಿದೆ. ಬಾಟಲಿಯನ್ನು ತೆಗೆದುಕೊಂಡು ಅದನ್ನು ಒಡೆದು ಸಬ್ ಇನ್ಸ್ ಪೆಕ್ಟರ್ ಪ್ರಕಾಶ್ ಹಾಗೂ ಸಿಬ್ಬಂದಿ ಹರೀಶ್ ಮೇಲೆ ದಾಳಿ ನಡೆಸಿ ಪರಾರಿಯಾಗಲು ಯತ್ನಿಸಿದ್ದಾನೆ. ಪ್ರಕಾಶ್ ಸಾಕಷ್ಟು ಬಾರಿ ಶರಣಾಗುವಂತೆ ಮನವಿ ಮಾಡಿದರೂ ಕೇಳಿಲ್ಲ. ನಿರಂತರ ದಾಳಿ ಮುಂದುವರಿಸಿದ್ದಾನೆ. ಈ ವೇಳೆ ಜೊತೆಯಲ್ಲಿದ್ದ ಬೈಲುಕುಪ್ಪೆ ಇನ್ಸ್ ಪೆಕ್ಟರ್ ದೀಪಕ್ ಆತ್ಮರಕ್ಷಣೆಗಾಗಿ ತಮ್ಮಲ್ಲಿದ್ದ ಪಿಸ್ತೂಲ್ ನಿಂದ ಆದರ್ಶ್ ಮೇಲೆ ಗುಂಡು ಹಾರಿಸಿದ್ದಾರೆ. ಆದರ್ಶ್ ಎಡಗಾಲಿಗೆ ಗುಂಡು ತಗುಲಿ ಬಿದ್ದಿದ್ದಾನೆ. ಗಾಯಗೊಂಡ ಸಬ್ ಇನ್ಸ್ ಪೆಕ್ಟರ್ ಪ್ರಕಾಶ್ ಹಾಗೂ ಹರೀಶ್ ಅವರನ್ನು ಕೆಆರ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಪ್ರಕಾಶ್, ಹರೀಶ್ ಇದೀಗ ಚೇತರಿಸಿಕೊಳ್ಳುತ್ತಿದ್ದಾರೆ. ಗುಂಡು ತಗುಲಿದ ಆದರ್ಶ್ ನನ್ನು ಮೇಟಗಳ್ಳಿಯಲ್ಲಿರುವ ಸರ್ಕಾರಿ ಆಸ್ಪತ್ರೆಯಲ್ಲಿ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

# ಕಣಗಾಲು ಗ್ರಾಮ ಪಂಚಾಯ್ತಿಗೆ ಅಂಬಿಕಾ ಶ್ರೀಧರ್ ಸಾರಥಿ

**ಬೆಟ್ಟದಪುರ:** ಪಿರಿಯಾಪಟ್ಟಣ ತಾಲೂಕಿನ ಬೆಟ್ಟದಪುರ ಸಮೀಪದ ಕಣಗಾಲು ಗ್ರಾಮದ ಗ್ರಾಮ ಪಂಚಾಯತಿಗೆ ನೂತನ ಅಧ್ಯಕ್ಷರಾಗಿ ಅಂಬಿಕಾ ಶ್ರೀಧರ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಶುಕ್ರವಾರ ಚುನಾವಣೆ ಪ್ರಕ್ರಿಯೆ ನಡೆಯಿತು. ಈ ವೇಳೆ ಅಂಬಿಕಾ ಶ್ರೀಧರ್ ಹೊರತುಪಡಿಸಿ ಮತ್ತ್ಯಾರು ನಾಮಪತ್ರ ಸಲ್ಲಿಸದ ಹಿನ್ನೆಲೆ ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಚುನಾವಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ ಹಾರಂಗಿ ಇಲಾಖೆಯ ಎನ್.ಕೆ.ನವೀನ್ ಘೋಷಣೆ ಮಾಡಿದರು.

ಅಧ್ಯಕ್ಷರ ಆಯ್ಕೆಯ ಬಳಿಕ ಕಾಂಗ್ರೆಸ್ ಕಾರ್ಯಕರ್ತರು ಮತ್ತು ಮುಖಂಡರು ಪಟಾಕಿ ಸಿಡಿಸಿ, ಸಿಹಿ ಹಂಚಿ



ಸಂಭ್ರಮಿಸಿದರು. ಈ ಸಂದರ್ಭದಲ್ಲಿ ಉಪಾಧ್ಯಕ್ಷ ಮಣಿ ಮಹದೇವ್, ಸದಸ್ಯರಾದ ಡಿ.ಕೆ.ನಟೇಶ್, ಕುಮಾರ್ ಶೆಟ್ಟಿ, ಆನಂದ್, ತ್ಯಾಗರಾಜು, ರವಿ, ಮೈಮುನ್ನೀಸಾ, ರೇಣುಕಮ್ಮ, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಗಣೇಶ್, ಬಿಲ್ ಕಲೆಕ್ಟರ್ ಪಾಂಡು ಸೇರಿದಂತೆ ಕಾಂಗ್ರೆಸ್ ಕಾರ್ಯಕರ್ತರು ಇದ್ದರು.

# ಬೆಂಗಳೂರಿಗೆ ತಟ್ಟದ ಬಂದ್ ಬಿಸಿ

ಇದಕ್ಕೆ ಮುಂದೆ ಉತ್ತರ ಸಿಗಲಿದೆ ಎಂದು ಕನ್ನಡಪರ ಒಕ್ಕೂಟದ ಜಿಲ್ಲಾಧ್ಯಕ್ಷ ರಾಜೇಗೌಡ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಹೋಟೆಲ್, ಅಂಗಡಿಗಳನ್ನು ಪ್ರತಿಭಟನಾಕಾರರು ಬಲವಂತದಿಂದ ಬಂದ್ ಮಾಡಿಸುತ್ತಿದ್ದಾರೆ. ಅಂಗಡಿ, ಹೋಟೆಲ್ ತೆರೆಯದಂತೆ ಹೋರಾಟಗಾರರಿಂದ ಸೂಚನೆ ನೀಡುತ್ತಿದ್ದಾರೆ.

**ಧಾರವಾಡದಲ್ಲಿ ಸಹಜ ಸ್ಥಿತಿ:** ಧಾರವಾಡದಲ್ಲಿ ಬಂದ್‌ಗೆ ಯಾವುದೇ ಬೆಂಬಲ ವ್ಯಕ್ತವಾಗಿಲ್ಲ. ಎಂದಿನಂತೆಯೇ ಜನಜೀವನ, ವಾಹನ ಓಡಾಟ ಕಂಡುಬಂದಿದೆ. ಬೆಳಗಾವಿಯಲ್ಲಿ ಬಸ್ ನಿರ್ವಾಹಕನ ಮೇಲಿನ ಹಲ್ಲೆ ಖಂಡಿಸಿ ಧಾರವಾಡದಲ್ಲಿ ಈಗಾಗಲೇ ಪ್ರತಿಭಟನೆಗಳು ನಡೆದಿವೆ. ಹೀಗಾಗಿ ಇಂದಿನ ಬಂದ್‌ಗೆ ಬೆಂಬಲ ವ್ಯಕ್ತವಾಗಿಲ್ಲ.

**ಕರ್ನಾಟಕ ಬಂದ್‌ಗೆ ಕಾರಣ:** ಬೆಳಗಾವಿಯಲ್ಲಿ ಬಸ್ ಕಂಡಕ್ಟರ್ ಮೇಲೆ ನಡೆದ ಹಲ್ಲೆಯನ್ನು ಪ್ರತಿಭಟಿಸಿ, ಕನ್ನಡ ಪರ ಸಂಘಟನೆಗಳು ಇಂದು ಬೆಳಿಗ್ಗೆ 6 ರಿಂದ ಸಂಜೆ 6 ರವರೆಗೆ 12 ಗಂಟೆಗಳ ಕಾಲ ಕರ್ನಾಟಕ ಬಂದ್‌ಗೆ ಕರೆ ನೀಡಿವೆ. ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ನಿರ್ವಾಹಕನ ಮೇಲೆ ಮರಾಠಿ ಮಾತನಾಡದ ಕಾರಣ ಇತ್ತೀಚಗೆಎ ಹಲ್ಲೆ ನಡೆಸಲಾಗಿದ್ದು, ವ್ಯಾಪಕ ವಿರೋಧಕ್ಕೆ ಗುರಿಯಾಗಿತ್ತು. ಈ ವಿಚಾರ ಹಾಗೂ ಕನ್ನಡಿಗರ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಬಂದ್ ಆಚರಿಸಲಾಗುತ್ತಿದೆ.

ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಬಂದ್‌ಗೆ ಬೆಂಬಲ ನೀಡುವುದಿಲ್ಲ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಗುರುವಾರ ಘೋಷಿಸಿದ್ದರು. ಇದು ಸರಿಯಾದ ಕ್ರಮವಲ್ಲ ಎಂದು ನಾವು ಅವರಿಗೆ (ಬಂದ್ ಗೆ ಕರೆ ನೀಡಿದ ಸಂಘಟನೆಗಳಿಗೆ) ಹೇಳಲುಬಯಸುತ್ತೇವೆ. ಏಕೆಂದರೆ ಬಂದ್ ನಿಂದ ಈಗಾಗಲೇ ಪರೀಕ್ಷೆಗಳು ಪ್ರಾರಂಭವಾಗಿರುವಿದರಿಂದ ವಿದ್ಯಾರ್ಥಿಗಳ ಮೇಲೆ ಪರಿಣಾಮ ಬೀರುತ್ತದೆ ಎಂದು ಅವರು ಹೇಳಿದ್ದಾರೆ.

ಬೆಳಗಾವಿ ಮತ್ತು ರಾಜ್ಯದ ಇತರ ಸೂಕ್ಷ್ಮ ಪ್ರದೇಶಗಳಲ್ಲಿ ಹೆಚ್ಚುವರಿ ಭದ್ರತಾ ಪಡೆಗಳನ್ನು ನಿಯೋಜಿಸಲಾಗಿದೆ. ಪ್ರಯಾಣಿಕರು, ವ್ಯಾಪಾರ ವಹಿವಾಟು ಮತ್ತು ವಿದ್ಯಾರ್ಥಿಗಳ ಸಾಮಾನ್ಯ ದಿನಚರಿಯ ಮೇಲೆ ಬಂದ್ ನಿಂದ ಪರಿಣಾಮ ಬೀರುವ ಸಾಧ್ಯತೆ ಇದೆ.

ಕಳೆದ ತಿಂಗಳು, ಬೆಳಗಾವಿಯಿಂದ ಬಾಳೇಕುಂದ್ರಿಗೆ ಚಲಿಸುತ್ತಿದ್ದ ಬಸ್ಸಿನ ಕೆಎಸ್‌ಆರ್‌ಟಿಸಿ ಕಂಡಕ್ಟರ್ ಮೇಲೆ ಮರಾಠಿ ಪರ ಸಂಘಟನೆಗಳೊಂದಿಗೆ ಸಂಬಂಧ ಹೊಂದಿರುವ ವ್ಯಕ್ತಿಗಳು ಮರಾಠಿಯಲ್ಲಿ ಮಾತನಾಡದ ಕಾರಣ ಹಲ್ಲೆ ನಡೆಸಿದ್ದರು. ಈ ಘಟನೆಯ ನಂತರ, ಮಹಾರಾಷ್ಟ್ರ ಮತ್ತು ಕರ್ನಾಟಕ ನಡುವಿನ ಅಂತರರಾಜ್ಯ ಬಸ್ ಸೇವೆಗಳನ್ನು ಸ್ಥಗಿತಗೊಳಿಸಲಾಯಿತು. ಕಂಡಕ್ಟರ್ ಮೇಲಿನ ದಾಳಿಯು ಎರಡು ರಾಜ್ಯಗಳ ನಡುವಿನ ಭಾಷಾ ವಿವಾದಗಳ ಬಗ್ಗೆ ಮತ್ತೆ ಚರ್ಚೆಯನ್ನು ಹುಟ್ಟುಹಾಕಿತ್ತು. ಈ ಪ್ರದೇಶದಲ್ಲಿ ಹಿಂಸಾಚಾರವನ್ನು ಪ್ರಚೋದಿಸುವ ಮತ್ತು ಕೋಮು ಸಾಮರಸ್ಯವನ್ನು ಕದಡುವ ಮರಾಠಿ ಪರ ಕಾರ್ಯಕರ್ತರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿ ಕನ್ನಡ ಪರ ಸಂಘಟನೆಗಳ ಒಕ್ಕೂಟವು ಈ ಬಂದ್ ಗೆ ಕರೆ ನೀಡಿದೆ.

**ಏನೇನಿದೆ, ಏನೇನಿಲ್ಲ :** ಬಸ್ ಸೇವೆಗಳು: ಕೆಎಸ್‌ಆರ್‌ಟಿಸಿ ಮತ್ತು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ (ಬಿಎಂಟಿಸಿ) ಒಕ್ಕೂಟಗಳು ಬಂದ್‌ಗೆ ಬೆಂಬಲ ನೀಡಿದ್ದು, ಇದು ರಾಜ್ಯಾದ್ಯಂತ ಬಸ್ ಸೇವೆಗಳ ಮೇಲೆ ಪರಿಣಾಮ ಬೀರಬಹುದು.

**ಓಲಾ, ಉಬರ್:** ಓಲಾ, ಉಬರ್‌ನಂತಹ ಕ್ಯಾಬ್ ಅಗ್ರಿಗೇಟರ್‌ಗಳು, ಕೆಲವು ರಿಕ್ಷಾ ಒಕ್ಕೂಟಗಳು ಸಹ ಬಂದ್‌ಗೆ ಬೆಂಬಲ ನೀಡಿವೆ. ಆದಾಗ್ಯೂ, ಮೆಟ್ರೋ, ರೈಲ್ವೆ ಮತ್ತು ವಿಮಾನ ನಿಲ್ದಾಣ ಸೇವೆಗಳು ಇರಲಿವೆ.

**ಬ್ಯಾಂಕ್‌ಗಳು:** ಇಂದು ಶನಿವಾರವಾದ್ದರಿಂದ ಬ್ಯಾಂಕ್‌ಗಳು ಮುಚ್ಚಿರುತ್ತವೆ. ಕೆಲವು ಶಾಲೆಗಳು ಮತ್ತು ಕಾಲೇಜುಗಳಿಗೆ ಇಂದು ರಜೆ ಇರಬಹುದು, ಆದರೆ ಈ ವಿಚಾರವಾಗಿ ಇನ್ನೂ ಯಾವುದೇ ಅಧಿಕೃತ ಪ್ರಕಟಣೆ ಬಿಡುಗಡೆ ಮಾಡಿಲ್ಲ.

**ಸರ್ಕಾರಿ ಕಚೇರಿಗಳು:** ಸರ್ಕಾರಿ ಕಚೇರಿಗಳು ಸಹ ತೆರೆದಿರುತ್ತವೆ. ಆರೋಗ್ಯ ಸೇವೆ ಅಥವಾ ಇತರ ಅಗತ್ಯ ಸೇವೆಗಳನ್ನು ಒದಗಿಸುವ ಎಲ್ಲವೂ ಕಾರ್ಯನಿರ್ವಹಿಸುತ್ತವೆ.

**ಅಗತ್ಯ ವಸ್ತುಗಳ ಪೂರೈಕೆ:** ಹಾಲು, ಅಗತ್ಯ ವಸ್ತುಗಳ ಪೂರೈಕೆ ಎಂದಿನಂತೆಯೇ ಇರಲಿದೆ.

## ಪೊಲೀಸರ ವಶಕ್ಕೆ

ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಬಳಿ ಬಸ್‌ಗಳಿಗೆ ಅಡ್ಡಲಾಗಿ ಪ್ರತಿಭಟನೆ ನಡೆಸಲಾಗುತ್ತಿತ್ತು. ಕನ್ನಡ ಪರ ಸಂಘಟನೆಗಳ ಪ್ರತಿಭಟನೆಯಿಂದಾಗಿ ಎರಡು ತಾಸು ಬಸ್ ಸಂಚಾರದಲ್ಲಿ ವ್ಯತ್ಯಯ ಉಂಟಾಗಿತ್ತು. ಈ ಹಿನ್ನೆಲೆ ಪೊಲೀಸರು ಮೈಸೂರು ಕೇಂದ್ರೀಯ ಬಸ್ ನಿಲ್ದಾಣದ ಮುಂದೆ ಪ್ರತಿಭಟನಾಕಾರರನ್ನು ವಶಕ್ಕೆ ಪಡೆದಿದ್ದಾರೆ. ಮೈಸೂರು ಗ್ರಾಮಾಂತರ ಬಸ್ ನಿಲ್ದಾಣದ ಎರಡು ಭಾಗಗಳಲ್ಲಿ ಪ್ರತಿಭಟನೆ ಮಾಡುತ್ತಿದ್ದ ಎಲ್ಲಾ ಪ್ರತಿಭಟನಾಕಾರರನ್ನು ವಶಕ್ಕೆ ಪಡೆಯಲಾಗಿದೆ. ಸದ್ಯ ಬಸ್ ಸಂಚಾರ ವ್ಯವಸ್ಥೆ ಸಹಜ ಸ್ಥಿತಿಗೆ ಮರಳಿದೆ.

## ಶಿಸ್ತು ಕ್ರಮ

ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಬಳಿ ಬಸ್‌ಗಳಿಗೆ ಅಡ್ಡಲಾಗಿ ಪ್ರತಿಭಟನೆ ನಡೆಸಲಾಗುತ್ತಿತ್ತು. ಕನ್ನಡ ಪರ ಸಂಘಟನೆಗಳ ಪ್ರತಿಭಟನೆಯಿಂದಾಗಿ ಎರಡು ತಾಸು ಬಸ್ ಸಂಚಾರದಲ್ಲಿ ವ್ಯತ್ಯಯ ಉಂಟಾಗಿತ್ತು. ಈ ಹಿನ್ನೆಲೆ ಪೊಲೀಸರು ಮೈಸೂರು ಕೇಂದ್ರೀಯ ಬಸ್ ನಿಲ್ದಾಣದ ಮುಂದೆ ಪ್ರತಿಭಟನಾಕಾರರನ್ನು ವಶಕ್ಕೆ ಪಡೆದಿದ್ದಾರೆ. ಮೈಸೂರು ಗ್ರಾಮಾಂತರ ಬಸ್ ನಿಲ್ದಾಣದ ಎರಡು ಭಾಗಗಳಲ್ಲಿ ಪ್ರತಿಭಟನೆ ಮಾಡುತ್ತಿದ್ದ ಎಲ್ಲಾ ಪ್ರತಿಭಟನಾಕಾರರನ್ನು ವಶಕ್ಕೆ ಪಡೆಯಲಾಗಿದೆ. ಸದ್ಯ ಬಸ್ ಸಂಚಾರ ವ್ಯವಸ್ಥೆ ಸಹಜ ಸ್ಥಿತಿಗೆ ಮರಳಿದೆ.

## ಪ್ಲ್ಯಾನ್ ಬೇಡ

ಇಂದು ರಾಜ್ಯಾದ್ಯಂತ ಬೆಳಗಿನ ಶೋಗಳು ಬಂದ್ ಇರಲಿವೆ.

ಮೊದಲನೇ ಪುಟದಿಂದ...

ಬೆಳಿಗ್ಗೆ ಶೋ ಪ್ರದರ್ಶಿಸದಂತೆ ವಾಣಿಜ್ಯ ಮಂಡಳಿ ಕಡೆಯಿಂದ ಸುತ್ತೋಲೆ ಹೊರಡಿಸಲಾಗಿದೆ. ಸದ್ಯ ಬುಕ್ ಮೈ ಶೋನಲ್ಲಿ ಬುಕ್ಕಿಂಗ್ ಓಪನ್ ಇದೆ. ಆದರೆ, ಬಂದ್ ಬಿಸಿ ಹೆಚ್ಚಿದರೆ ನಂತರ ಶೋ ರದ್ದಾಗುವ ಸಾಧ್ಯತೆ ದಟ್ಟವಾಗಿದೆ. ಮಧ್ಯಾಹ್ನದ ಬಳಿಕ ಯಥಾ ಪ್ರಕಾರ ಶೋಗಳು ಪ್ರಸಾರ ಕಾಣಲಿವೆ. ಹೀಗಾಗಿ ಸಿನಿಮಾ ನೋಡುವ ಪ್ಲ್ಯಾನ್ ಇದ್ದರೆ ಮಧ್ಯಾಹ್ನದ ಬಳಿಕ ಯೋಜಿಸುವುದು ಉತ್ತಮ.

ಇದರ ಜೊತೆಗೆ ಫಿಲ್ಮ್ ಚೇಂಬರ್‌ನ ಮಾಜಿ ಅಧ್ಯಕ್ಷರಾದ ಸಾರಾ ಗೋವಿಂದು ಸೇರಿದಂತೆ ಚಿತ್ರರಂಗಕ್ಕೆ ಸಂಬಂಧಿಸಿದ ಹಲವರು ಹೋರಾಟದಲ್ಲಿ ಭಾಗಿ ಆಗಲಿದ್ದಾರೆ. ಟೌನ್‌ಹಾಲ್ ಸರ್ಕಲ್‌ನಿಂದ ಫ್ರೀಡಂ ಪಾರ್ಕ್‌ವರೆಗೆ ಮೆರವಣಿಗೆ ನಡೆಯಲಿದೆ. ಇದರಲ್ಲಿ ಇವರು ಭಾಗಿ ಆಗಲಿದ್ದು, ಮರಾಠಿ ಪುಂಡರ ವಿರುದ್ಧ ಹೋರಾಟದ ಮೆರವಣಿಗೆ ನಡೆಯಲಿದೆ.

**ಸ್ಯಾಟಲೈಟ್, ಮೆಜೆಸ್ಟಿಕ್‌ನಲ್ಲಿ ಪ್ರಯಾಣಿಕರ ಸಂಖ್ಯೆ ಇಳಿಕೆ:** ಮರಾಠಿಗರ ಕನ್ನಡ ವಿರೋಧಿ ನೀತಿ, ಕನ್ನಡಿಗರ ಮೇಲೆ ಎಂಇಎಸ್ ಪುಂಡರ ದಬ್ಬಾಳಿಕೆ ಖಂಡಿಸಿ ಶನಿವಾರ ಕರ್ನಾಟಕ ಬಂದ್‌ಗೆ ಕರೆ ನೀಡಲಾಗಿದೆ. ಆದರೆ ಬಂದ್ ಇದ್ದರೂ ಎಂದಿನಂತೆ ಕೆಎಸ್‌ಆರ್‌ಟಿಸಿ, ಬಿಎಂಟಿಸಿ ಬಸ್‌ಗಳು ಸಂಚರಿಸುತ್ತಿವೆ. ನಗರದ ಮೆಜೆಸ್ಟಿಕ್‌ನ ಬಿಎಂಟಿಸಿ ಬಸ್ ನಿಲ್ದಾಣ ಯಥಾಸ್ಥಿತಿಯಲ್ಲಿದೆ. ಆದರೆ ಪ್ರಯಾಣಿಕರ ಸಂಖ್ಯೆ ಸ್ವಲ್ಪ ಕಡಿಮೆಯಾಗಿದೆ.

ಇನ್ನು ಮೈಸೂರು ರಸ್ತೆಯ ಸ್ಯಾಟಲೈಟ್ ಬಸ್ ನಿಲ್ದಾಣದಲ್ಲಿ ಬೆಳ್ಳಂಬೆಳಗ್ಗೆ ಬಂದ್ ಬಿಸಿ ತಟ್ಟಿದೆ. ತಮ್ಮ ತಮ್ಮ ಊರುಗಳಿಗೆ ವೀಕೆಂಡ್‌ಗಳಲ್ಲೇ ಹೆಚ್ಚಾಗಿ ಹೋಗುವ ಜನ ಇಂದು ಬಂದ್ ಕಾರಣಕ್ಕೆ ಸ್ಯಾಟಲೈಟ್ ಬಸ್ ನಿಲ್ದಾಣದ ಕಡೆ ಮುಖ ಮಾಡಿಲ್ಲ. ಸ್ಯಾಟಲೈಟ್ ಕೆಎಸ್‌ಆರ್‌ಟಿಸಿ ನಿಲ್ದಾಣ ಇಂದು ಪ್ರಯಾಣಿಕರ ಕೊರತೆ ಎದುರಿಸುತ್ತಿದೆ. ರಾಮನಗರ, ಮೈಸೂರು, ಮದ್ದೂರು, ಮಂಡ್ಯ, ಚಾಮರಾಜನಗರ, ಕೊಳ್ಳೇಗಾಲ, ಟಿ.ನರಸೀಪುರ, ನಂಜನಗೂಡು, ಮಳವಳ್ಳಿ, ಕೊಡಗು, ಹಾಸನ ಭಾಗಕ್ಕೆ ಹೋಗುವವರು ಬಹಳಷ್ಟು ಜನ ಬಂದ್ ಅಂತ ಇಂದು ಮನೆಗಳಲ್ಲೇ ಉಳಿದುಕೊಂಡಿದ್ದಾರೆ. ಇದರ ಪರಿಣಾಮ ಬಸ್‌ಗಳು ಖಾಲಿ ಖಾಲಿ ಸಂಚಾರ ಮಾಡುತ್ತಿವೆ. ಕೆಎಸ್‌ಆರ್‌ಟಿಸಿ ಬಸ್‌ಗಳ ಸಂಖ್ಯೆ, ಸಂಚಾರದಲ್ಲಿ ಯಾವುದೇ ವ್ಯತ್ಯಯ ಇಲ್ಲ. ಬಸ್‌ಗಳಿದ್ದರೂ ಪ್ರಯಾಣಿಕರ ಸಂಖ್ಯೆ ಇಳಿಕೆಯಾಗಿದೆ.

## ಜಾಹೀರಾತಿಗೆ ಲಕ್ಷ ಲಕ್ಷ

ಕಳೆದ ವರ್ಷ ಟಿವಿ ಮತ್ತು ಡಿಜಿಟಲ್‌ನಿಂದ ಒಟ್ಟು 4,000 ಕೋಟಿ ರೂ. ಆದಾಯ ಬಂದಿತ್ತು. ಕಳೆದ ಬಾರಿಗಿಂತ ಬಾರಿ 500 ಕೋಟಿ ರೂ. ಹೆಚ್ಚು ಆದಾಯ ಸಂಗ್ರಹಿಸುವ ಗುರಿಯನ್ನು ಜಿಯೋ ಸ್ಟಾರ್ ಹಾಕಿಕೊಂಡಿದೆ.

ಐಪಿಎಲ್ ಡಿಜಿಟಲ್ ರೈಟ್ಸ್ ಅನ್ನು ವಯಾಕಾಮ್ ಪಡೆದ ನಂತರ ಕ್ರಿಕೆಟ್ ಪ್ರೇಮಿಗಳು ಜಿಯೋಸಿನಿಮಾದಲ್ಲಿ ಉಚಿತವಾಗಿ ಪಂದ್ಯವನ್ನು ವೀಕ್ಷಿಸಬಹುದಾಗಿತ್ತು. ಆದರೆ ಈಗ ಜಿಯೋ ಮತ್ತು ಹಾಟ್‌ಸ್ಟಾರ್ ವಿಲೀನಗೊಂಡಿದೆ. ಜಿಯೋ ಸಿನಿಮಾ ಮತ್ತು ಡಿಸ್ನಿ+ ಹಾಟ್‌ಸ್ಟಾರ್ ವಿಲೀನಗೊಂಡು ಜಿಯೋಸ್ಟಾರ್ ಆಗಿ ಬದಲಾಗಿದ್ದು ಈ ವರ್ಷದಿಂದ ಐಪಿಎಲ್ ಅಭಿಮಾನಿಗಳು ಹಣವನ್ನು ಪಾವತಿಸಿ ಕ್ರಿಕೆಟ್ ವೀಕ್ಷಣೆ ಮಾಡಬೇಕಾಗುತ್ತದೆ.

**ಮಾಧ್ಯಮ ಹಕ್ಕು ಎಷ್ಟು?:** 2008 ಸೋನಿ ನೆಟ್‌ವರ್ಕ್‌ಗೆ 10 ವರ್ಷ ಕಾಲ ಒಟ್ಟು 8,200 ಕೋಟಿ ರೂ.ಗೆ ನೀಡಿತ್ತು. 2017–22 ಟಿವಿ ಮತ್ತು ಡಿಜಿಟಲ್ ರೈಟ್ಸ್ ಅನ್ನು ಡಿಸ್ನಿ ಹಾಟ್‌ಸ್ಟಾರ್ ಒಟ್ಟು 16,347 ಕೋಟಿ ರೂ. ನೀಡಿ ಪಡೆದುಕೊಂಡಿತ್ತು. ಆದರೆ 2023–27ರ ಅವಧಿಯ 410 ಪಂದ್ಯಗಳಿಗೆ ಡಿಜಿಟಲ್ ಮತ್ತು ಟಿವಿ ರೈಟ್ಸ್ ಪ್ರತ್ಯೇಕವಾಗಿ ವಿಂಗಡನೆ ಮಾಡಲಾಗಿತ್ತು. ಡಿಜಿಟಲ್ ರೈಟ್ಸ್ –ವಯಾಕಾಮ್ 23,758 ಕೋಟಿ ರೂ. ನೀಡಿ ಖರೀದಿಸಿದರೆ ಟಿವಿ ಹಕ್ಕುಗಳನ್ನು- 23,575 ಕೋಟಿ ರೂ.ಗೆ ವಾಲ್ಟ್ ಡಿಸ್ನಿ ಕಂಪನಿ ನೀಡಿ ಪಡೆದುಕೊಂಡಿತ್ತು.

## ನಂದಿ ಬೆಟ್ಟದ ರಸ್ತೆ ಬಂದ್

ಅಂಕುಡೊಂಕಿನ ಕಿರಿದಾದ ರಸ್ತೆ ಕಾರಣ ರಸ್ತೆ ಕಾಮಗಾರಿಗೆ ಆಡಚಣೆ ಆಗಲಿದ್ದು, ಮುಂಜಾಗ್ರತಾ ಕ್ರಮವಾಗಿ ವಾಹನಗಳ ಸಂಚಾರಕ್ಕೆ ನಿರ್ಬಂಧ ವಿಧಿಸಲಾಗಿದೆ.

## ಪತ್ರ ವ್ಯವಹಾರ

ಜತೆಗೆ, ನಾವು ಸರ್ಕಾರ ರಚಿಸಿದಾಗ, ವೈದ್ಯಕೀಯ ಮತ್ತು ಎಂಜಿನಿಯರಿಂಗ್ ಕೋರ್ಸ್‌ಗಳನ್ನು ತಮಿಳು ಭಾಷೆಗೆ ಭಾಷಾಂತರಿಸುತ್ತೇವೆ ಎಂದೂ ಹೇಳಿದರು.

'ಭಾಷೆಯ ಹೆಸರಿನಲ್ಲಿ ವಿಷ ಹರಡುವವರಿಗೆ ನಾನು ಒಂದು ಮಾತು ಹೇಳಲು ಬಯಸುತ್ತೇನೆ; ನೀವು ಸಾವಿರಾರು ಕಿಲೋಮೀಟರ್ ದೂರದ ಭಾಷೆಗಳನ್ನು ಇಷ್ಟಪಡುತ್ತೀರಿ, ಆದರೆ ನಿಮಗೆ ಭಾರತದ ಭಾಷೆ ಇಷ್ಟವಾಗುವುದಿಲ್ಲ' ಎಂದು ಅಮಿತ್ ಶಾ ಕುಟುಕಿದರು.

## ಎಲ್ಲಾ ಎಣ್ಣೆ ಮಹಿಮೆ

ಅದು ಹೆಂಗ್ ಹೋಗ್ತೀರಾ ನಾನು ನೋಡ್ತೀನಿ ಎನ್ನುತ್ತಾ ರೈಲು ಮುಂದೆ ಚಲಿಸದಂತೆ ತಡೆದು ನಿಲ್ಲಿಸಿದ್ದಾನೆ. ಕುಡುಕನ ಈ ಅವಾಂತರದಿಂದ ಮಾಹಿಮ್ ರೈಲು ನಿಲ್ದಾಣದಲ್ಲಿ ರೈಲು ಸೇವೆಗಳಲ್ಲಿ ವಿಳಂಬವಾಯಿತಲ್ಲದೆ, ಇದರಿಂದ ಪ್ರಯಾಣಿಕರು ಕೂಡಾ ತೊಂದರೆಯನ್ನು ಅನುಭವಿಸಿದ್ದಾರೆ.

ಈ ಕುರಿತ ವಿಡಿಯೋವನ್ನು chal_mumbai ಹೆಸರಿನ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ಹಂಚಿಕೊಳ್ಳಲಾಗಿದೆ. ವೈರಲ್ ಆಗುತ್ತಿರುವ ವಿಡಿಯೋದಲ್ಲಿ ಮುಂಬೈನ ಮಾಹಿಮ್ ರೈಲ್ವೆ ಸ್ಟೇಷನ್‌ನಲ್ಲಿ ಕುಡುಕನೊಬ್ಬ ರೈಲನ್ನು ತಡೆದು ನಿಲ್ಲಿಸಿ ಅವಾಂತರ ಸೃಷ್ಟಿಸಿದ ದೃಶ್ಯವನ್ನು ಕಾಣಬಹುದು.

ಎರಡು ದಿನಗಳ ಹಿಂದೆ ಹಂಚಿಕೊಳ್ಳಲಾದ ಈ ವಿಡಿಯೋ 3.2 ಮಿಲಿಯನ್ ವೀಕ್ಷಣೆಗಳನ್ನು ಹಾಗೂ ಹಲವಾರು ಕಾಮೆಂಟ್‌ಗಳನ್ನು ಪಡೆದುಕೊಂಡಿದೆ. ಒಬ್ಬ ಬಳಕೆದಾರರು ಇದೆಲ್ಲಾ ಎಣ್ಣೆ ಪವರ್ ಎಂಬ ಕಾಮೆಂಟ್ ಬರೆದುಕೊಂಡಿದ್ದಾರೆ. ಮತ್ತೊಬ್ಬ ಬಳಕೆದಾರರು ಆರ್‌ಪಿಎಫ್ ಸಿಬ್ಬಂದಿಗಳು, ಸೆಕ್ಯುರಿಟಿ ಗಾರ್ಡ್ಸ್ ಎಲ್ಲಿ ಹೋಗಿದ್ದಾರೆ ಎಂದು ಕೇಳಿದ್ದಾರೆ. ಇನ್ನೊಬ್ಬ ಬಳಕೆದಾರರು ಮದ್ಯಕ್ಕೆ ರೈಲನ್ನೇ ತಡೆದು ನಿಲ್ಲಿಸುವ ಶಕ್ತಿಯಿದೆ ನೋಡಿ ಎಂಬ ತಮಾಷೆಯ ಕಾಮೆಂಟ್ ಬರೆದುಕೊಂಡಿದ್ದಾರೆ.

## ಕುಡುಕ!

ಈ ವೇಳೆ ಕುಡುಕ ನನಗೆ ಅಂಬುಲೆನ್ಸ್ ಬೇಡ, ತಾಕತ್ ಇದ್ರೆ ನನ್ನನ್ನ ಹಿಡಿರಿ ಎಂದು ಆಂಬುಲೆನ್ಸ್ ಸಿಬ್ಬಂದಿಗೆ ಅವಾಜ್ ಹಾಕಿದ್ದಾನೆ. ಸ್ಥಳಕ್ಕೆ ಬಂದ ಪೊಲೀಸರು ಕುಡುಕನನ್ನು ಹಿಡಿಯಲು ಹರಸಾಹಸ ಪಟ್ಟಿದ್ದಾರೆ. ಬಳಿಕ ಸ್ಥಳೀಯರು ಅಲ್ಲೇ ವೈನ್ ಶಾಪ್‌ನಲ್ಲಿದ್ದ ಅಡಗಿಕೊಂಡಿದ್ದ ಆ ವ್ಯಕ್ತಿಯನ್ನು ಹಿಡಿದು ಪೊಲೀಸರಿಗೆ ಒಪ್ಪಿಸಿದ್ದಾರೆ.

ಪೊಲೀಸರ ಬಳಿ ಸ್ಥಳೀಯರು ಕರೆದುಕೊಂಡು ಹೋಗುತ್ತಿದ್ದಂತೆ, ಸರ್ ತಪ್ಪಾಯ್ತು ಬಿಡಿ ಸರ್ ಎಂದು ಗೋಗರೆದಿದ್ದಾನೆ.

## ಶಿಕ್ಷಕರು..!

ಸಣ್ಣ ಮಕ್ಕಳ ಕೈಯಲ್ಲಿ ಕ್ಲೀನ್ ಮಾಡಿಸಿರುವ ಎಕ್ಸ್‌ಕ್ಲೂಸಿವ್ ವಿಡಿಯೋ, ಫೋಟೋಗಳು ಲಭ್ಯವಾಗಿದೆ. ಈ ಬಗ್ಗೆ ಶಾಲೆಯ ಮಕ್ಕಳನ್ನು ಕ್ಲೀನ್ ಮಾಡಲು ಯಾರು ಹೇಳಿದ್ದು ಮತ್ತು ಟಿವಿ9ಗೆ ಲಭ್ಯವಾಗಿರುವ ವಿಡಿಯೋದಲ್ಲಿ ಕೇಳಿಸುತ್ತಿರುವ ಧ್ವನಿ ಯಾರದ್ದು ಎಂದು ವಿಚಾರಿಸಿದಾಗ ಶಾಲೆಯ ಮಕ್ಕಳು ಇದು ನಮ್ಮ ಶಾಲೆಯ ಪಿಟಿ ಟೀಚರ್ ಸುಮಿತ್ರ ಮೇಡಂ ಅವರದ್ದು ಅಂತಾರೇ.

ಈ ಬಗ್ಗೆ ಸಾಮಾಜಿಕ ಹೋರಾಟಗಾರ ನಾಗೇಶ್ ಪ್ರತಿಕ್ರಿಯಿಸಿ, ಶಾಲೆಯ ಸುಣ್ಣಬಣ್ಣ ಸ್ವಚ್ಛತೆಗಾಗಿ ಸರ್ಕಾರ ಹಣ ನೀಡುತ್ತದೆ. ಅದನ್ನು ಬಳಕೆ ಮಾಡಬೇಕಿತ್ತು. ಆದರೆ ಸಣ್ಣ ಮಕ್ಕಳ ಕೈಯಲ್ಲಿ ಕ್ಲೀನ್ ಮಾಡಿಸಿದ್ದು ನಿಜಕ್ಕೂ ನೋವಿನ ಸಂಗತಿ. ಈ ಶಾಲೆಯ ಹೆಡ್ ಮೇಡಂ ಮತ್ತು ಪಿಟಿ ಟೀಚರನ್ನ ಕೂಡಲೇ ಸಸ್ಪೆಂಡ್ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

ಇನ್ನೂ ಟಿವಿ9 ಸ್ಕೂಲ್ ಗೆ ಭೇಟಿ ನೀಡಿ ಈ ಶಾಲೆಯ ಹೆಡ್ ಮೇಡಂ ಸಾಕಮ್ಮ ಅವರನ್ನು ಕೇಳಿದ್ರೆ, ಸಾಕಷ್ಟು ದಿನಗಳಿಂದ ಶೌಚಾಲಯದ ಗುಂಡಿ ಕಟ್ಟಿಕೊಂಡಿತ್ತು ಸಾಕಷ್ಟು ಬಾರಿ ದೂರು ನೀಡಿದರೂ ಯಾರು ಕ್ಲೀನ್ ಮಾಡಲಿಲ್ಲ. ಹಾಗಾಗಿ ನಾನು ನಮ್ಮ ಶಾಲೆಯ ಶಿಕ್ಷಕರಿಗೆ ಕ್ಲೀನ್ ಮಾಡಿಸಲು ಹೇಳಿದೆ. ಆದರೆ ಅವರು ಶಾಲೆಯ ಮಕ್ಕಳ ಕೈಯಲ್ಲಿ ಕ್ಲೀನ್ ಮಾಡಿಸಿದ್ದಾರೆ ಎಂದಿದ್ದಾರೆ.

ಪಿಟಿ ಟೀಚರ್ ಸುಮಿತ್ರ ಅವರನ್ನು ಕೇಳಿದ್ರೆ ಹೆಡ್ ಮೇಡಂ ಕ್ಲೀನ್ ಮಾಡಿಸಲು ಹೇಳಿದ್ರು, ಹಾಗಾಗಿ ನಮ್ಮ ಶಾಲೆಯ ಶಿಕ್ಷಕರು ಸೇರಿಯೇ ಮಕ್ಕಳ ಕೈಯಲ್ಲಿ ಕ್ಲೀನ್ ಮಾಡಿಸಿದ್ದೇವೆ. ಆದರೆ ವಿಡಿಯೋದಲ್ಲಿ ನನ್ನ ಆಡಿಯೋ ಮಾತ್ರ ಕೇಳಿಸಿದೆ ನನ್ನಿಂದ ತಪ್ಪಾಗಿದೆ ಕ್ಷಮಿಸಿಬಿಡಿ ಅಂತಾರೇ.

ಒಟ್ಟಿನಲ್ಲಿ ಶಿಕ್ಷಣ ಇಲಾಖೆ ಶಾಲೆಯ ನಿರ್ವಹಣೆಗಾಗಿ ಪ್ರತಿವರ್ಷ ಇಂತಿಷ್ಟು ಎಂದು ಅನುದಾನ ಬಿಡುಗಡೆ ಮಾಡುತ್ತದೆ. ಆದರೆ ಆ ಹಣವನ್ನು ಗುಳುಂ ಮಾಡಿ ಆ ಪುಟ್ಟ ಮಕ್ಕಳ ಕೈಯಲ್ಲಿ ಶೌಚಾಲಯದ ಗುಂಡಿ ಕ್ಲೀನ್ ಮಾಡಿಸಿದ ಶಿಕ್ಷಕರಿಗೆ ನಿಜವಾಗಿಯೂ ನಾಚಿಕೆ ಆಗಬೇಕು.

ಸಂಜೆ ಮುಗಿಲು
ಶನಿವಾರ
22.3.2025


### ಇದು 7 ಕೋಟಿ ಜನರ ಬದುಕಿನ ಉಸಿರಿನ ಪ್ರತೀಕ- ಮುಖ್ಯಮಂತ್ರಿ ಸಿದ್ದರಾಮಯ್ಯ

# ಬಜೆಟ್ ಕೇವಲ ಅಂಕಿ ಸಂಖ್ಯೆಗಳ ಆಟವಲ್ಲ

**ಬೆಂಗಳೂರು:** ಬಜೆಟ್ ಕೇವಲ ಅಂಕಿ ಸಂಖ್ಯೆಗಳ ಆಟವಲ್ಲ, ಇದು 7 ಕೋಟಿ ಜನರ ಬದುಕಿನ ಉಸಿರಿನ ಪ್ರತೀಕ, ಬಜೆಟ್‌ನಲ್ಲಿ ನಮ್ಮ ಸರ್ಕಾರದ ಧ್ಯೇಯೋದ್ದೇಶಗಳು, ಅಭಿವೃದ್ಧಿಗಳ ಕುರಿತಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಧಾನಸಭೆಯಲ್ಲಿ ಹೇಳಿದರು.

ಇಂದು ವಿಧಾನಸಭೆಯಲ್ಲಿ 2025-26ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ನಡೆದ ಸಾಮಾನ್ಯ ಚರ್ಚೆಗೆ ಉತ್ತರವನ್ನು ನೀಡಿದ ಅವರು 4-5 ವಿಚಾರಗಳನ್ನು ಪ್ರಮುಖವಾಗಿ ಇಟ್ಟುಕೊಂಡು ಬಜೆಟ್ ಮೇಲೆ ಚರ್ಚಿಸಲಾಗಿದೆ. ಮುಖ್ಯವಾಗಿ, ರಾಜ್ಯದ ಸಾಲ ಹಾಗೂ ಆರ್ಥಿಕ ಪರಿಸ್ಥಿತಿ, ಗ್ಯಾರಂಟಿ ಯೋಜನೆಗಳು, ಎಸ್.ಸಿ ಎಸ್.ಪಿ ಮತ್ತು ಟಿ.ಎಸ್.ಪಿ ವಿಚಾರ, ಮುಸ್ಲಿಂ ಸಮುದಾಯಕ್ಕೆ ಗುತ್ತಿಗೆಯಲ್ಲಿ ಮೀಸಲಾತಿ, ಕ್ಷೇತ್ರಗಳಿಗೆ ಅಭಿವೃದ್ಧಿ ಅನುದಾನ ಹಾಗೂ ಪ್ರದೇಶವಾರು ಅಭಿವೃದ್ಧಿ ಕುರಿತಂತೆ ಚರ್ಚಿಸಲಾಗಿದೆ.

ಬಜೆಟ್ ಕುರಿತು ಮಾಧ್ಯಮದವರು ಅಭೂತಪೂರ್ವವಾಗಿ ಸ್ವಾಗತಿಸಿವೆ. ಶ್ಲಾಘನೆ ಮಾಡಿವೆ. ವಿಶ್ಲೇಷಣೆಗಳನ್ನು ಬರೆದಿವೆ. ನಮ್ಮ ಬಜೆಟ್‌ನ್ನು ಅರ್ಥ ಮಾಡಿಕೊಂಡು ಜನರಿಗೆ ತಲುಪಿಸಿವೆ. ಇದಲ್ಲದೇ ನಾಡಿನ ಜನತೆ, ವಿವಿಧ ಸಂಘ ಸಂಸ್ಥೆಗಳಾದ ಎಫ್‌ಕೆಸಿಸಿಐ, ಸಿ.ಐ.ಐ., ಚಲನಚಿತ್ರ, ರಂಗ ಇನ್ನಿತರ ಸಂಘಸಂಸ್ಥೆಗಳು ಸರ್ಕಾರದ ಬಜೆಟ್ ನ್ನು ಹೊಗಳಿದ್ದಾರೆ. ನಾಡಿನ ವಿವಿಧ ವಲಯಗಳ ಜನರು ನಮ್ಮ ಬಜೆಟ್ ಕುರಿತು ವ್ಯಕ್ತಪಡಿಸಿರುವ ಅಭಿಪ್ರಾಯಗಳು ನಮಗೆ ಇನ್ನಷ್ಟು ಶಕ್ತಿ ತುಂಬಿವೆ ಎಂದು ಅವರು ತಿಳಿಸಿದರು.

2025-26ನೇ ಸಾಲಿನಲ್ಲಿ 4,09,549 ಕೋಟಿ ರೂ. ಗಾತ್ರದ ಬಜೆಟ್‌ನ್ನು ನಾನು ಮಂಡಿಸಿದ್ದೇನೆ. 2024-25ನೇ ಸಾಲಿನ ಆಯವ್ಯಯಕ್ಕೆ ಹೋಲಿಸಿದರೆ 2025-26ನೇ ಸಾಲಿನಲ್ಲಿ ನಮ್ಮ ರಾಜ್ಯದ ಬಜೆಟ್ ಗಾತ್ರ ಶೇ.10.3 ರಷ್ಟು ಹೆಚ್ಚಿನ ಬೆಳವಣಿಗೆ ಕಂಡಿದೆ. ಜನಸಂಖ್ಯೆಯ ಗಾತ್ರದಲ್ಲಿ ಕರ್ನಾಟಕವು 8ನೇ ಸ್ಥಾನದಲ್ಲಿದೆ. ತೆರಿಗೆ ಸಂಗ್ರಹಿಸಿ ಕೊಡುವ ವಿಚಾರದಲ್ಲಿ ಕರ್ನಾಟಕವು 2ನೇ ಸ್ಥಾನದಲ್ಲಿದೆ. ಜಿಡಿಪಿಯಲ್ಲಿ ಕರ್ನಾಟಕವು ಮಹಾರಾಷ್ಟ್ರ, ತಮಿಳುನಾಡಿನ ನಂತರ 3ನೇ ಸ್ಥಾನದಲ್ಲಿದೆ. ಆದರೆ, 2025-26ನೇ ಸಾಲಿನ ನಮ್ಮ ಬಜೆಟ್ ಉತ್ತರ ಪ್ರದೇಶ, ಮಹಾರಾಷ್ಟ್ರ, ರಾಜಸ್ಥಾನ, ತಮಿಳುನಾಡಿನ ನಂತರ 5ನೇ ದೊಡ್ಡ ಬಜೆಟ್ ಆಗಿದೆ ಎಂದು ಹೇಳಿದರು.

2024-25 ರಲ್ಲಿ 1,89,893 ಕೋಟಿ ರೂ.ಗಳಷ್ಟು ರಾಜ್ಯದ ಸ್ವಂತ ತೆರಿಗೆ ಸಂಗ್ರಹವಾಗಬಹುದೆಂದು ಅಂದಾಜು ಮಾಡಲಾಗಿತ್ತು. ಫೆಬ್ರವರಿ ಅಂತ್ಯದವರೆಗೆ 1,57,111 ಕೋಟಿ ರೂ.ಗಳನ್ನು ಸಂಗ್ರಹಿಸಲಾಗಿದ್ದು, ಶೇ. 82.7 ರಷ್ಟಾಗಿದೆ. ಮಾರ್ಚ್ ತಿಂಗಳ ಅಂತ್ಯಕ್ಕೆ ಸುಮಾರು 1,77,000 ಕೋಟಿ ರೂ.ಗಳಷ್ಟು ಸಂಗ್ರಹವಾಗಬಹುದು. ಇದು ನಾವು ನಿರೀಕ್ಷೆ ಮಾಡಿದ್ದಕ್ಕಿಂತ ತುಸು ಕಡಿಮೆ. ಇದು ಕರ್ನಾಟಕದಲ್ಲಿ ಅಷ್ಟೇ ಅಲ್ಲ, ಇಡೀ ದೇಶದಲ್ಲಿಯೂ ಸಂಭವಿಸುತ್ತಿದೆ. ಕರ್ನಾಟಕವು ದೇಶದ ಒಂದು ಭಾಗ. ದೇಶದಲ್ಲಿ ನಡೆಯುವ ಬೆಳವಣಿಗೆಗಳು ರಾಜ್ಯದ ಮೇಲೂ ಪರಿಣಾಮ ಬೀರುತ್ತವೆ. ಇದು ದೇಶದ ಆರ್ಥಿಕ ಬೆಳವಣಿಗೆ ಸಮರ್ಪಕವಾಗಿಲ್ಲ ಎಂಬುದನ್ನು ತೋರಿಸುತ್ತದೆ ಎಂದರು.

## ವಿಧೇಯಕಗಳ ಅಂಗೀಕಾರ

**ಬೆಂಗಳೂರು:** ಕರ್ನಾಟಕ ಧನ ವಿನಿಯೋಗ ವಿಧೇಯಕ-2025, ಕರ್ನಾಟಕ ಧನ ವಿನಿಯೋಗ (ಸಂಖ್ಯೆ-2) ವಿಧೇಯಕ-2025, ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ತಿದ್ದುಪಡಿ) ವಿಧೇಯಕ-2025, ಕರ್ನಾಟಕ ಮಂತ್ರಿಗಳ ಸಂಬಳಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ-2025, ಹಾಗೂ ಕರ್ನಾಟಕ ವಿಧಾನ ಮಂಡಲದ ಸಂಬಳಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳು (ತಿದ್ದುಪಡಿ) ವಿಧೇಯಕ-2025 ವಿಧೇಯಕಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪರ್ಯಾಲೋಚಿಸಿ ಅಂಗೀಕರಿಸುವಂತೆ ಇಂದು ವಿಧಾನಸಭೆಯ ಅಧಿವೇಶನದಲ್ಲಿ ಪ್ರಸ್ತಾವನೆ ಸಲ್ಲಿಸಿದರು. ಪ್ರಸ್ತಾವನೆಗಳನ್ನು ಪರ್ಯಾಲೋಚನೆ ನಂತರ ವಿಧೇಯಕಗಳು ಅಂಗೀಕಾರವಾದವು.



## ಉತ್ತರ ಕರ್ನಾಟಕ ಭಾಗಕ್ಕೆ ಕ್ಯಾನ್ಸರ್ ಆಸ್ಪತ್ರೆ ಚಿಕ್ಕೋಡಿಯನ್ನು ಜಿಲ್ಲೆಯನ್ನಾಗಿ ಘೋಷಿಸಲು ಪ್ರಕಾಶ್ ಬಾಬಣ್ಣ ಹುಕ್ಕೇರಿ ಮನವಿ

**ಬೆಂಗಳೂರು:** ಸನ್ಮಾನ್ಯ ಮುಖ್ಯಮಂತ್ರಿಗಳು ಇತ್ತೀಚೆಗೆ ಮಂಡಿಸಿರುವ 2025-26ನೇ ಸಾಲಿನ ಆಯವ್ಯಯವನ್ನು ಉತ್ತರ ಕರ್ನಾಟಕದ ಜನತೆ ಬಹಳ ವಿಶೇಷವಾಗಿ ಹೃದಯ ಪೂರ್ವಕವಾಗಿ ಸ್ವಾಗತಿಸಿದರು.

ಆಯವ್ಯಯದ ಬಗ್ಗೆ ವಿರೋಧ ಪಕ್ಷಗಳ ನಾಯಕರು ಮಾಡುವ ಟೀಕೆ ಟಿಪ್ಪಣಿಗಳಿಗೆ ಯಾರೂ ತಲೆ ಕೆಡಿಸಿಕೊಳ್ಳಬಾರದು ವಿರೋಧ ಪಕ್ಷದವರು ಮಾಡುವ ಟೀಕೆಗಳಿಗೆ ಮಾನ್ಯ ಮುಖ್ಯಮಂತ್ರಿಗಳು ಸದನದಲ್ಲಿ ಎಲ್ಲಾ ಪ್ರಶ್ನೆಗಳಿಗೆ ಸಮರ್ಪಕವಾಗಿ ಉತ್ತರವನ್ನು ನೀಡಲಿದ್ದಾರೆ. ಈಗಾಗಲೇ ಉತ್ತರ ಕರ್ನಾಟಕ ಜನತೆಯ ಬಹುದಿನಗಳ ಬೇಡಿಕೆಯಾದ ಮೆಡಿಕಲ್ ಕಾಲೇಜು ಸ್ಥಾಪನೆಗೆ ಸಂಬಂಧಿಸಿದಂತೆ ಮಾನ್ಯ ಮುಖ್ಯಮಂತ್ರಿಗಳು, ಉಪ ಮುಖ್ಯಮಂತ್ರಿಗಳು ಹಾಗೂ ಸಚಿವರುಗಳು ಸಕಾರಾತ್ಮಕವಾಗಿ ಸ್ಪಂದಿಸಿ ಬೆಳಾವಿಯಲ್ಲಿ ಮೆಡಿಕಲ್ ಸ್ಥಾಪನೆಗೆ ಕ್ರಮವಹಿಸಿದ್ದಾರೆ. ಇದಕ್ಕೆ ನಾನು ಉತ್ತರ ಕರ್ನಾಟಕ ಜನತೆ ಹಾಗೂ ವಿದ್ಯಾರ್ಥಿಗಳ ಪರವಾಗಿ ಅಭಿನಂದನೆಯನ್ನು ಸಲ್ಲಿಸುತ್ತೇನೆ. ಉತ್ತರ ಕರ್ನಾಟಕದ ಭಾಗದಲ್ಲಿ ಯಾವುದೇ ಕ್ಯಾನ್ಸರ್ ಆಸ್ಪತ್ರೆ ಇರುವುದಿಲ್ಲ. ಇಲ್ಲಿನ ಜನರು ಹಲವಾರು ಬಗೆಯ ಕಾಯಿಲೆಗಳಿಗೆ ಒಳಗಾಗುತ್ತಿದ್ದಾರೆ. ಅದರಲ್ಲಿ ಕ್ಯಾನ್ಸರ್ ಕಾಯಿಲೆಗೆ ಬಹಳಷ್ಟು ಜನ ತುತ್ತಾಗುತ್ತಿದ್ದಾರೆ. ಜನರ ಆರೋಗ್ಯದ ಹಿತದೃಷ್ಟಿಯಿಂದ ಉತ್ತರ ಕರ್ನಾಟಕ ಭಾಗದಲ್ಲಿ ಒಂದು ಕ್ಯಾನ್ಸರ್ ಆಸ್ಪತ್ರೆ ನಿರ್ಮಾಣ ಮಾಡಲು ಮುಂದಾಗಬೇಕು. ಆಸ್ಪತ್ರೆ ನಿರ್ಮಾಣಕ್ಕಾಗಿ 10 ಎಕರೆ ಜಮೀನನ್ನು ಸಹ ನಾವು ಸರ್ಕಾರಕ್ಕೆ ನೀಡಲು ಸಿದ್ದರಿದ್ದೇವೆ. ಈ ಬಗ್ಗೆ ಮುಖ್ಯಮಂತ್ರಿಗಳು ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಆಸಕ್ತಿ ವಹಿಸಬೇಕು ಎಂದು ಮನವಿ ಮಾಡಿದರು.

### ಕಳ್ಳಂಬಾಡಿ ಡ್ಯಾಂ ನಿಂದ ನೀರು ಬಿಡಲು ಮನವಿ

**ಸನ್ಮಾನ್ಯ ಮುಖ್ಯಮಂತ್ರಿಗಳು ಜನಪರವಾದ ಬಜೆಟ್‌ನ್ನು ಮಂಡಿಸಿದ್ದಾರೆ. ಮುಖ್ಯಮಂತ್ರಿಗಳಿಗೆ ಹಾಗೂ ನಮ್ಮ ಉತ್ತರ ಕರ್ನಾಟಕ ಸಚಿವರು ಮತ್ತು ಶಾಸಕರಿಗೆ ರೈತರ ಮೇಲೆ ಅಪಾರ ಕಾಳಜಿ ಗೌರವವಿದೆ. ರೈತರಿಗಾಗಿ, ರೈತ ಪರ ಚಟುವಟಿಕೆಗಳಿಗಾಗಿ 2025-26ನೇ ಆಯವ್ಯಯದಲ್ಲಿ ಅನೇಕ ಯೋಜನೆಗಳನ್ನು ನೀಡಿದ್ದಾರೆ. ಇದಕ್ಕಾಗಿ ನಾನು ಉತ್ತರ ಕರ್ನಾಟಕ ರೈತ ಜನತೆಯ ಪರವಾಗಿ ಅಭಿನಂದನೆಗಳನ್ನು ಸಲ್ಲಿಸುತ್ತೇನೆ. ಅದರೆ ಉತ್ತರಕರ್ನಾಟಕ ಭಾಗದ ರೈತರಿಗೆ ಅನುಕೂಲವಾಗುವಂತೆ ಮಹಾರಾಷ್ಟ್ರ ಮತ್ತು ಕರ್ನಾಟಕ ಸರ್ಕಾರಗಳ ಒಪ್ಪಂದದಂತೆ ಕಳ್ಳಂಬಾಡಿ ಡ್ಯಾಂ ನಿಂದ 4 ಟಿ.ಎಂ.ಸಿ ನೀರನ್ನು ವೇದ ಗಂಗಾ ಮತ್ತು ದೂದ್ ಗಂಗಾಗೆ ಹರಿಸಬೇಕಿತ್ತು. ಆದರೆ ಮಹಾರಾಷ್ಟ್ರ ಸರ್ಕಾರ ನೀರನ್ನು ಹರಿಸುತ್ತಿಲ್ಲ. ಆದ್ದರಿಂದ ಈ ನಿಟ್ಟಿನಲ್ಲಿ ಸರ್ಕಾರ ಅಗತ್ಯ ಕ್ರಮ ವಹಿಸಬೇಕು ಎಂದು ಮನವಿ ಮಾಡಿದರು.**

### ಚಿಕ್ಕೋಡಿಯನ್ನು ಜಿಲ್ಲೆಯನ್ನಾಗಿ ಘೋಷಣೆ ಮಾಡಲು ಮನವಿ

**ಚಿಕ್ಕೋಡಿ ಗಡಿಭಾಗದ ಜನರು ತಮ್ಮ ಕೆಲಸ ಕಾರ್ಯಗಳಿಗೆ 190 ಕಿಲೋಮೀಟರ್ ದೂರದ ಜಿಲ್ಲಾ ಕೇಂದ್ರ ಬೆಳಗಾವಿಗೆ ಬರಬೇಕಾಗಿದೆ. ಪ್ರತಿನಿತ್ಯ ತಮ್ಮ ಸಣ್ಣ ಸಣ್ಣ ಕೆಲಸಗಳಿಗೂ ಇಷ್ಟು ದೂರ ಪ್ರಯಾಣ ಮಾಡುವುದು ಸಾಧ್ಯವಿಲ್ಲ. ಇದರಿಂದ ಸಾರ್ವಜನಿಕರಿಗೆ ಸಾಕಷ್ಟು ತೊಂದರೆಯಾಗುತ್ತಿದೆ. ಆದ್ದರಿಂದ ಚಿಕ್ಕೋಡಿಯನ್ನು ಜಿಲ್ಲಾ ಕೇಂದ್ರವನ್ನಾಗಿ ಘೋಷಣೆ ಮಾಡಲು ಸೂಕ್ತ ಪಟ್ಟಣವಾಗಿದ್ದು, ಚಿಕ್ಕೋಡಿ ಜಿಲ್ಲೆಯಾದಲ್ಲಿ ಎಲ್ಲಾ ಕಚೇರಿಗಳು ಆಭಾಗಕ್ಕೆ ಬರಲಿದ್ದು, ಜನರ ಅಲೆದಾಟ ತಪ್ಪುತ್ತದೆ. ಆ ಭಾಗದ ಜನರಿಗೆ ಸಾಕಷ್ಟು ಅನುಕೂಲವಾಗಲಿದೆ ಎಂದು ಹೇಳುತ್ತಾ, ಚಿಕ್ಕೋಡಿಯನ್ನು ಜಿಲ್ಲೆಯನ್ನಾಗಿ ಘೋಷಣೆ ಮಾಡಬೇಕೆಂದು ಆಗ್ರಹಿಸಿ ಆ ಭಾಗದ ಜನರು ಪ್ರತಿಭಟನೆ ನಡೆಸುತ್ತಿದ್ದಾರೆ, ಕೂಡಲೇ ರಾಜ್ಯ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.**

## ಹನಿಟ್ರ್ಯಾಪ್: ಯಾರನ್ನು ರಕ್ಷಿಸುವ ಪ್ರಶ್ನೆ ಉದ್ಭವವಿಲ್ಲ, ತಪ್ಪಿತಸ್ಥರ ವಿರುದ್ಧ ಕ್ರಮ

**ಹನಿಟ್ರ್ಯಾಪ್‌ಗೆ ಸಂಬಂಧಪಟ್ಟಂತೆ ಯಾರನ್ನೂ ರಕ್ಷಿಸುವ ಪ್ರಶ್ನೆ ಉದ್ಭವಿಸುವುದಿಲ್ಲ. ಈ ವಿಷಯದಲ್ಲಿ ಯಾರು ತಪ್ಪತಸ್ಥರುರಾಗಿರುವರೋ ಅವರನ್ನು ಕಾನೂನಿನ ರೀತ್ಯ ಶಿಕ್ಷೆಗೆ ಒಳಪಡಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು. ಇಂದು ವಿಧಾನಸಭೆಯ ಸದನದಲ್ಲಿ ಹನಿಟ್ರ್ಯಾಪ್ ವಿಷಯವನ್ನು ವಿರೋಧಪಕ್ಷದ ನಾಯಕರು ಹಾಗೂ ಇನ್ನಿತರ ಶಾಸಕರು ಪ್ರಸ್ತಾಪಿಸಿದರು. ಈ ಬಗ್ಗೆ ಮುಖ್ಯಮಂತ್ರಿಗಳು ಉತ್ತರಿಸಬೇಕು, ಯಾರೇ ಕಾರಣರಾದರೂ ಅವರ ವಿರುದ್ಧ ಶಿಸ್ತಿನ ಕ್ರಮ ಕೈಗೊಳ್ಳಬೇಕು. ಇದು ಸದನದಲ್ಲಿ ಪ್ರಸ್ತಾಪವಾದ ವಿಷಯವಾದ್ದರಿಂದ ಸದನದ ಮೌಲ್ಯವನ್ನು ಎತ್ತಿ ಹಿಡಿಯಬೇಕು ಎಂದು ಕೋರಿದರು.**

**ನಿನ್ನೆ ಸದನದಲ್ಲಿ ರಾಜಣ್ಣ ಅವರು ಪ್ರಸ್ತಾಪಿಸಿರುವ ವಿಷಯಕ್ಕೆ ಗೃಹ ಮಂತ್ರಿಗಳು ಅಂತಹವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಇದು ಒಂದು ಗಂಭೀರವಾದ ವಿಷಯವಾದ್ದರಿಂದ ದೂರು ನೀಡಿದಲ್ಲಿ ದೂರಿನಲ್ಲಿರುವ ಅಂಶಗಳ ಮೇಲೆ ಸೂಕ್ತ ಕ್ರಮ ವಹಿಸಬೇಕಾಗುತ್ತದೆ ಎಂದರು. ಈ ಪ್ರಕರಣ ಕೇವಲ ಒಬ್ಬರಿಗೆ ಸೀಮಿತವಲ್ಲ, ಯಾವುದೇ ಪಕ್ಷದ ಶಾಸಕರಾಗಲಿ, ಸಚಿವರಾಗಲಿ ಈ ಪ್ರಕರಣದಲ್ಲಿ ಸಿಲುಕಿದ್ದರೆ ಅವರಿಗೆ ರಕ್ಷಣೆ ಕೊಡಬೇಕಾಗಿರುವುದು ಸರ್ಕಾರದ ಜವಾಬ್ದಾರಿ. ರಾಜಣ್ಣ ಅವರು ದೂರು ಕೊಟ್ಟರೆ ಉನ್ನತ ಮಟ್ಟದ ತನಿಖೆ ಮಾಡಿಸಲಾಗುತ್ತದೆ ಎಂದು ಗೃಹ ಸಚಿವರು ಉತ್ತರಿಸಿದ ಮೇಲೆ ಪುನ: ಪ್ರಸ್ತಾಪಿಸುವುದು ತರವಲ್ಲ. ಹನಿಟ್ರ್ಯಾಪ್ ಯಾರೇ ಮಾಡಿಸಿದ್ದರೂ ಅದು ತಪ್ಪೇ ಎಂದರು. ರಾಜಣ್ಣ ಅವರು ಯಾರ ಹೆಸರನ್ನೂ ಹೇಳಿಲ್ಲ, ಹೇಳಿದ್ದರೆ ಕ್ರಮ ತೆಗೆದುಕೊಳ್ಳಬಹುದಾಗಿತ್ತು. ಕಾನೂನಿನ ಪ್ರಕಾರ ತಪ್ಪಿತಸ್ಥರಿಗೆ ಶಿಕ್ಷೆಯಾಗಲೇಬೇಕು ದೂರು ದಾಖಲಾದಲ್ಲಿ ಇದರ ಬಗ್ಗೆ ಸೂಕ್ತ ಕ್ರಮ ವಹಿಸಲಾಗುವುದು. ಪ್ರಕರಣದಲ್ಲಿ ಯಾರನ್ನೂ ರಕ್ಷಿಸುವ ಪ್ರಶ್ನೆಯೇ ಇಲ್ಲ ಎಂದು ಮುಖ್ಯಮಂತ್ರಿಗಳು ವಿಧಾನಸಭೆಯಲ್ಲಿ ತಿಳಿಸಿದರು.**

## ಹಿಂದುಳಿದ ವರ್ಗ, ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ವಿಶೇಷ ಯೋಜನೆಗಳು

2017-18 ರಲ್ಲಿ ಹಿಂದುಳಿದ ವರ್ಗಕ್ಕೆ 3300 ಕೋಟಿ ರೂ. ಕೊಟ್ಟಿದ್ದರೆ 2022-23 ರಲ್ಲಿ 2372 ಕೋಟಿ ರೂ. ಕೊಡಲಾಯಿತು. ಅಲ್ಪಸಂಖ್ಯಾತರ ಕಲ್ಯಾಣಕ್ಕೆ ನಾವು 2221 ಕೋಟಿ ರೂ. ಅನುದಾನ ನೀಡಿದ್ದರೆ, ಹಿಂದಿನ ಸರ್ಕಾರ 1495 ಕೋಟಿ ರೂ. ನೀಡಿತ್ತು. ವಿರೋಧ ಪಕ್ಷದವರು ಈ ಬಾರಿ ಅಲ್ಪಸಂಖ್ಯಾತರ ಕಲ್ಯಾಣಕ್ಕೆ 4500 ಕೋಟಿ ರೂ ಕೊಡಲಾಗಿದೆ ಎಂದು ಮಾತನಾಡಿದ್ದಾರೆ. ಆದರೆ ವಾಸ್ತವವಾಗಿ 2017-18 ರಲ್ಲಿ ಬಜೆಟ್ ಗಾತ್ರ 1.86 ಲಕ್ಷ ಕೋಟಿಗಳಷ್ಟಿತ್ತು. ಆಗ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ 2200 ಕೋಟಿ ರೂ. ಗಳನ್ನು ಒದಗಿಸಿದ್ದೆವು. ಆಗಲೂ ಬಜೆಟ್ ಗಾತ್ರಕ್ಕೆ ಹೋಲಿಸಿದರೆ ನಾವು ಶೇ.1.18 ರ?ಟ್ಟು ಅನುದಾನವನ್ನು ನೀಡಿದ್ದೆವು. 2025-26ನೇ ಸಾಲಿನ ಬಜೆಟ್ನಲ್ಲಿ ಶೇ.1.1 ರ?ಟ್ಟು ಮಾತ್ರ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ನೀಡಲಾಗಿದೆ ಹಾಗೂ ಈ 5 ಕಲ್ಯಾಣ ಇಲಾಖೆಗಳಿಗೆ ಸರ್ಕಾರ ಈ ಬಾರಿ 50,816 ಕೋಟಿ ರೂ. ಗಳನ್ನು ಕೊಟ್ಟಿದೆ. ಹಿಂದುಳಿದ ವರ್ಗಗಳ ಕಲ್ಯಾಣಕ್ಕೆ 1642 ಕೋಟಿ, ಸಮಾಜ ಕಲ್ಯಾಣ ಇಲಾಖೆಗೆ 2204 ಕೋಟಿ, ಪರಿಶಿ?ಟ ಪಂಗಡಗಳ ಕಲ್ಯಾಣ ಇಲಾಖೆಗೆ 585 ಕೋಟಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ 29,482 ಕೋಟಿ ರೂ.ಗಳನ್ನು 2022-23 ಕ್ಕಿಂತ ಹೆಚ್ಚಿಗೆ ನೀಡಲಾಗಿದೆ ಎಂದರು. 2017-18 ನೇ ಸಾಲಿನಲ್ಲಿ ನಾನು ಮಂಡಿಸಿದ್ದ ಬಜೆಟ್ ಗಾತ್ರ 1,86,561 ಕೋಟಿ ರೂ. ಆ ವ?ರ್ ದಲಿತರು, ಹಿಂದುಳಿದವರು, ಅಲ್ಪ ಸಂಖ್ಯಾತರು, ಮಹಿಳೆಯರು ಮತ್ತು ಮಕ್ಕಳ ಕಲ್ಯಾಣಕ್ಕೆಂದು ಮೀಸಲಿಟ್ಟಿದ್ದ ಅನುದಾನ 16358 ಕೋಟಿ ರೂ. ಇದು ಬಜೆಟ್‌ನ ಶೇ. 8.77 ರ?ಟ್ಟು. ಇದು ನಮ್ಮ ಬದ್ಧತೆ. 2017-18 ರ ನಂತರ ನಿಂತಿದ್ದ ಮಹಿಳೆಯರ, ಮಕ್ಕಳ, ದಲಿತರ, ಹಿಂದುಳಿದವರ, ಅಲ್ಪಸಂಖ್ಯಾತರ ಅಭಿವೃದ್ಧಿಯ ರಥವನ್ನು ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಕೂಡಲೇ ಮುನ್ನಡೆಸಲು ಪ್ರಾರಂಭಿಸಿದ್ದೇವೆ. 25-26 ನೇ ಸಾಲಿನ ಬಜೆಟ್‌ನಲ್ಲಿ ಈ 5 ವರ್ಗಗಳಿಗೆ 50,816 ಕೋಟಿ ರೂಗಳನ್ನು ನೀಡಿದ್ದೇವೆ. ಇದು ಬಜೆಟ್‌ನ ಶೇ.12.41 ರ?ಾಗುತ್ತದೆ ಎಂದರು.

## ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಉಚಿತ ಸಾರಿಗೆ ಸೌಲಭ್ಯ

**ಬೆಂಗಳೂರು:** ರಾಜ್ಯದಲ್ಲಿ 8,96,447 ವಿದ್ಯಾರ್ಥಿಗಳು ಇಂದು ಎಸ್.ಎಸ್.ಎಲ್.ಸಿ. ಪರೀಕ್ಷೆ ಬರೆಯುತ್ತಿದ್ದು, ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತ ಸಾರಿಗೆ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಇಂದು ವಿಧಾನಸಭೆಯ ಸದನದಲ್ಲಿ ಮಾತನಾಡಿದ ಮುಖ್ಯಮಂತ್ರಿಗಳು ಈ ಸಾಲಿನ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳು ಯಾವುದೇ ಗ್ರೇಸ್ ಮಾರ್ಕ್ಸ್ ಇಲ್ಲದೆ ಪರೀಕ್ಷೆಗಳನ್ನು ಬರೆಯುತ್ತಿದ್ದಾರೆ. ಎಲ್ಲಾ ವಿದ್ಯಾರ್ಥಿಗಳು ಉತ್ತಮವಾಗಿ ಪರೀಕ್ಷೆ ಬರೆದು ತೇರ್ಗಡೆ ಆಗಲಿ ಎಂದು ಶುಭ ಹಾರೈಸಿದರು.

# ಗ್ಯಾರಂಟಿ ಯೋಜನೆಗಳು ಸಾಮಾಜಿಕ ಕಲ್ಯಾಣ ಯೋಜನೆ

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿರುವ ದಾಖಲೆಯ 16 ನೇ ಬಜೆಟ್ ರಾಜ್ಯದ ಸಾಮಾಜಿಕ ಸಾರ್ವತ್ರಿಕ ಕಲ್ಯಾಣ ಯೋಜನೆಗಳನ್ನು ಒಳಗೊಂಡಿದೆ ಎಂದು ಬಣ್ಣಿಸಿದರು.

ಪ್ರತಿ ಬಾರಿ ಯಾವುದೇ ಸರ್ಕಾರಗಳಿರಲಿ ಆಯವ್ಯಯ ಮಂಡಿಸಿದಾಗ ಆಡಳಿತ ಪಕ್ಷಗಳು ಸ್ವಾಗತಿಸುವುದು, ಪ್ರತಿಪಕ್ಷಗಳು ವಿರೋಧ ವ್ಯಕ್ತಪಡಿಸುವುದು ಸರ್ವೇ ಸಾಮಾನ್ಯ ವಿಷಯ. ಟೀಕೆ ಟಿಪ್ಪಣಿ ಇದ್ದಲ್ಲಿ ಯಾವುದರಲ್ಲಿ ಲೋಪವಿದೆ ಎಂಬುದರ ಬಗ್ಗೆ ಪರಿಶೀಲಿಸಲು ಸರ್ಕಾರಗಳು ಮುಂದಾಗುತ್ತವೆ. ಹಾಗೂ ಸಮಸ್ಯೆ - ಲೋಪಗಳನ್ನು ಸರಿಪಡಿಸಿಕೊಂಡು ಸರಿ ದಾರಿಯಲ್ಲಿ ನಡೆಯುತ್ತವೆ. ಅಂತಹ ಸಂದರ್ಭದಲ್ಲಿ ಸಾರ್ವಜನಿಕರಿಂದ ಹಾಗೂ ಮಾಧ್ಯಮದವರ ವಿಶ್ವಾಸಾರ್ಹತೆಯನ್ನು ಗಳಿಸುತ್ತವೆ. ಮಾನ್ಯ ಮುಖ್ಯಮಂತ್ರಿಗಳು 16ನೇ ಆಯವ್ಯಯ ಮಂಡಿಸಿದ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಳಿಗೇನಾದರೂ ಅಪಾಯವಿದೆಯೇ ಎಂದು ನನಗೆ ಬಹಳ ಆತಂಕ ಇತ್ತು. ಆದರೆ ಮಾನ್ಯ ಮುಖ್ಯ ಮಂತ್ರಿಗಳು ಆಯವ್ಯಯ ಮಂಡಿಸಿದ ನಂತರ ಆ ಆತಂಕ ದೂರವಾಯಿತು. ಗ್ಯಾರಂಟಿ ಯೋಜನೆಗಳ ಬಹು ದೊಡ್ಡ ಪ್ರಯೋಗ ನಮ್ಮಲ್ಲಿ ನಡೆಯುತ್ತಿದೆ. ಇದು ಕೇವಲ ಗ್ಯಾರಂಟಿ ಯೋಜನೆಗಳಲ್ಲ. ಇದು ಸಾಮಾಜಿಕ ಕಲ್ಯಾಣ ಕಾರ್ಯಕ್ರಮಗಳು ಎಂದು ತಿಳಿಸಿದರು. ಇಂತಹ ಗ್ಯಾರಂಟಿ ಯೋಜನೆಗಳ ಒತ್ತಡದ ನಡುವೆಯೂ ಹೊಸ ತೆರಿಗೆಯನ್ನು ಪ್ರಸ್ತಾಪ ಮಾಡದಿರುವುದು ಬಜೆಟ್‌ನ ಹೆಗ್ಗಳಿಕೆಯಾಗಿದೆ. ಇಂತಹ ಜವಾಬ್ದಾರಿ ಹೊತ್ತವರಿಗೆ ಅದರ ಕಷ್ಟ - ಸುಖ ತಿಳಿಯುತ್ತದೆ. ಮುಂದಿನ ಆಯವ್ಯಯ ಮಂಡನೆಯ ಸಮಯಕ್ಕೆ ರಾಜ್ಯವು ಸಾಲದಿಂದ ಹೊರಗೆ ಬರುವ ಭರವಸೆ ನನಗಿದೆ ಎಂದರು. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ, ಶೋಷಿತರು, ಸಾಮಾಜಿಕ ದುರ್ಬಲವಾದ ಸಮುದಾಯಗಳ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳಿಗೆ ಇರುವ ಬದ್ಧತೆಯನ್ನು ಯಾರೂ ಪ್ರಶ್ನೆ ಮಾಡುವ ಹಾಗಿಲ್ಲ. ಅವರ ಶ್ರೇಯೋಭಿವೃದ್ದಿಗಾಗಿ ಹಲವಾರು ಕಾರ್ಯಕ್ರಮಗಳು / ಯೋಜನೆಗಳನ್ನು 2025-26 ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದ್ದಾರೆ. ಮುಖ್ಯಮಂತ್ರಿಗಳು ಕೇವಲ ಎಸ್.ಸಿ / ಎಸ್.ಟಿ ಸಮುದಾಯದವರ ಅಭಿವೃದ್ಧಿಗಾಗಿ ಕಾನೂನುಗಳನ್ನು ರೂಪಿಸಿಲ್ಲ. ಎಲ್ಲರಿಗೂ ರಕ್ಷಣೆ / ಕಲ್ಯಾಣ ನೀಡುವಂತೆ ಸರ್ವರಿಗೂ ಸಮ ಪಾಲು - ಸರ್ವರಿಗೂ ಸಮಬಾಳು ಎಂಬ ದೃಷ್ಟಿಯಿಂದ ಆಯವ್ಯಯ ಮಂಡಿಸಿದ್ದಾರೆ. ಪರಿಶಿಷ್ಟ ಸಮುದಾಯಕ್ಕೆ ಎಸ್ ಸಿ ಎಸ್ ಪಿ ? ಟಿಎಸ್ ಪಿ ಹಣ ಸಮರ್ಪಕವಾಗಿ ವಿನಿಯೋಗವಾಗುತ್ತಿಲ್ಲ. ನಿರೀಕ್ಷಿತ ಮಟ್ಟದಲ್ಲಿ ಅರ್ಹರಿಗೆ ಯೋಜನೆಗಳು ತಲುಪುತ್ತಿಲ್ಲ. ಕಳೆದ ಸಾಲಿನಲ್ಲಿ ಕೇವಲ ಶೇಕಡ 54 ರಷ್ಟು ಮಾತ್ರ ಅನುದಾನ ಖರ್ಚಾಗಿದೆ ಎಂದರು. ಎಸ್ ಸಿ ಎಸ್ ಪಿ ಟಿಎಸ್ ಪಿ ಹಣ ಸಮರ್ಪಕವಾಗಿ ವಿನಿಯೋಗವಾಗಬೇಕೆಂದರೆ ಸಮಾಜ ಕಲ್ಯಾಣ ಇಲಾಖೆಯನ್ನು ಆರ್ಥಿಕ ಇಲಾಖೆಯಿಂದ ಹೊರತರಬೇಕು. ಆಗ ಆದಲ್ಲಿ ಸಂಪೂರ್ಣ ಹಣ ಬಳಕೆಯಾಗಿ ಆ ಸಮುದಾಯದ ಕಲ್ಯಾಣ ಆಗುತ್ತದೆ ಎಂದರು. ಇದೇ ಸಂದರ್ಭದಲ್ಲಿ ಎಸ್ ಸಿ ಎಸ್ ಪಿ ? ಟಿಎಸ್ ಪಿ ಹಣ ಸಮರ್ಪಕವಾಗಿ ವಿನಿಯೋಗ ಮಾಡಿ, ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡದ ಅಧಿಕಾರಿಗಳಿಗೆ ಶಿಕ್ಷೆ ಆಗಬೇಕು. ಅಂತಹ ಅಧಿಕಾರಿಗಳನ್ನು ಕೂಡಲೇ ಗುರುತಿಸಿ ಕ್ರಮ ಕೈಗೊಂಡಲ್ಲಿ ಉಳಿದ ಅಧಿಕಾರಿಗಳು ಎಚ್ಚೆತ್ತುಕೊಂಡು ಕೆಲಸ ನಿರ್ವಹಿಸುತ್ತಾರೆ ಎಂದು ತಿಳಿಸಿದರು.

## ಎಸ್.ಎಸ್.ಎಲ್.ಸಿ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಅಭಿನಂದನೆ- ಸಭಾಧ್ಯಕ್ಷ ಯು.ಟಿ ಖಾದರ್

**ಬೆಂಗಳೂರು:**' ರಾಜ್ಯದಲ್ಲಿ 15,881 ಪರೀಕ್ಷಾ ಕೇಂದ್ರಗಳನ್ನು ತೆರೆಯಲಾಗಿದ್ದು, 8,96,447 ವಿದ್ಯಾರ್ಥಿಗಳು ಇಂದು ಎಸ್.ಎಸ್.ಎಲ್.ಸಿ. ಪರೀಕ್ಷೆ ಬರೆಯುತ್ತಿದ್ದು, ಪೋಷಕರು ವಿದ್ಯಾರ್ಥಿಗಳಿಗೆ ಭಾವನಾತ್ಮಕ ಬೆಂಬಲ ನೀಡುವುದು ಮುಖ್ಯ. ಎಸ್.ಎಸ್.ಎಲ್.ಸಿ ಪರೀಕ್ಷೆಯು ವಿದ್ಯಾರ್ಥಿಗಳ ಭವಿಷ್ಯಕ್ಕೆ ಮೊದಲನೇ ಹಂತ, ಅಂತ್ಯವಲ್ಲ ವಿಧಾನಸಭಾಧ್ಯಕ್ಷರಾದ ಯು.ಟಿ ಖಾದರ್ ಫರೀದ್ ತಿಳಿಸಿದರು. ಇಂದು ವಿಧಾನಸಭೆಯ ಸದನದಲ್ಲಿ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಶುಭ ಕೋರಿ ಮಾತನಾಡಿದ ಸಭಾಧ್ಯಕ್ಷರು ವಿದ್ಯಾರ್ಥಿಗಳು ರಾತ್ರಿ ಹಗಲೆನ್ನದೇ ಪರಿಶ್ರಮಪಟ್ಟು ಪರೀಕ್ಷೆಗೆ ಸಿದ್ದವಾಗಿರುವ ಎಲ್ಲಾ ವಿದ್ಯಾರ್ಥಿಗಳು ಮನೋಸ್ಥೈರ್ಯದಿಂದ ಪರೀಕ್ಷೆ ಎದುರಿಸಬೇಕೆಂದರು. ಇದೇ ಸಂದರ್ಭದಲ್ಲಿ ಶಿಕ್ಷಣ ಸಚಿವರಾದ ಮಧು ಬಂಗಾರಪ್ಪ ಹಾಗೂ ವಿರೋಧ ಪಕ್ಷದ ನಾಯಕರಾದ ಅಶೋಕ್ ರವರು ವಿದ್ಯಾರ್ಥಿಗಳಿಗೆ ಶುಭ ಕೋರಿದರು.



## 'ಬೇಕರಿ ಟೆಕ್ನಾಲಜಿ ಸರ್ಟಿಫಿಕೇಟ್ ಕೋರ್ಸ್''ಗೆ ಅರ್ಜಿ ಆಹ್ವಾನ

**ಬೆಂಗಳೂರು:** ಬೆಂಗಳೂರಿನ ಕೃಷಿ ವಿಶ್ವವಿದ್ಯಾನಿಲಯದ ಬೇಕಿಂಗ್ ತಂತ್ರಜ್ಞಾನ ಮತ್ತು ಮೌಲ್ಯವರ್ಧನಾ ಸಂಸ್ಥೆಯು ''ಹದಿನಾಲ್ಕು ವಾರಗಳ ಬೇಕರಿ ಟೆಕ್ನಾಲಜಿ ಸರ್ಟಿಫಿಕೇಟ್ ಕೋರ್ಸ್''ಗೆ ಅರ್ಜಿಯನ್ನು ಆಹ್ವಾನಿಸಿದೆ. ಎಸ್.ಎಸ್.ಎಲ್.ಸಿ. ಪಾಸ್/ಫೇಲ್ ಆಗಿರುವವರು ರೂ.10-00 ಸಂದಾಯಿಸಿ ಅರ್ಜಿ ಫಾರಂಗಳನ್ನು ಸಂಯೋಜಕರು ಮತ್ತು ಮುಖ್ಯಸ್ಥರು, ಬೇಕಿಂಗ್ ತಂತ್ರಜ್ಞಾನ ಮತ್ತು ಮೌಲ್ಯವರ್ಧನಾ ಸಂಸ್ಥೆ, ಕೃಷಿ ವಿಶ್ವ ವಿದ್ಯಾನಿಲಯ, ಜಿಕೆವಿಕೆ, ಬೆಂಗಳೂರು-560 065 ರವರಿಂದ ಪಡೆದುಕೊಂಡು, ಭರ್ತಿ ಮಾಡಿದ ಅರ್ಜಿಯನ್ನು ಮಾರ್ಚ್ 29 ರೊಳಗೆ ಅಪರಾಹ್ನ 4.00 ಘಂಟೆಯೊಳಗೆ ತಲುಪಿಸಬೇಕು. ಹೆಚ್ಚಿನ ಮಾಹಿತಿಗಾಗಿ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 080-23513370 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಮೂರು ದಿನಗಳ ಕಮ್ಮಟಕ್ಕೆ ಅರ್ಜಿ

**ಬೆಂಗಳೂರು:** ಕರ್ನಾಟಕ ಸಾಹಿತ್ಯ ಅಕಾಡೆಮಿಯು ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಗೊಟಗೋಡಿ. ಹಾವೇರಿ ಜಿಲ್ಲೆ ಇವರ ಸಹಯೋಗದಲ್ಲಿ ಗಿರಿಜನ ಉಪಯೋಜನೆಯಡಿ ಕನ್ನಡ ಸಾಹಿತ್ಯ ಮತ್ತು ಸಾಂವಿಧಾನಿಕ ಮೌಲ್ಯಗಳು ಎಂಬ ಹೆಸರಿನಲ್ಲಿ ಮೂರು ದಿನಗಳ ಕಮ್ಮಟವನ್ನು ಏಪ್ರಿಲ್ 21, 22 ಮತ್ತು 23 ರಂದು ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಗೊಟಗೋಡಿ, ಹಾವೇರಿ ಜಿಲ್ಲೆಯಲ್ಲಿ ನಡೆಸಲು ಉದ್ದೇಶಿಸಿದ್ದು, ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತರು 20 ರಿಂದ 45 ವರ್ಷ ವಯಸ್ಸುಳ್ಳ ಪರಿಶಿಷ್ಟ ಪಂಗಡಕ್ಕೆ ಸೇರಿದ ರಾಜ್ಯದ ಎಲ್ಲಾ ಭಾಗದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಏಪ್ರಿಲ್ 5 ಕೊನೆಯ ದಿನಾಂಕವಾಗಿದೆ. ಹೆಚ್ಚಿನ ಮಾಹಿತಿಗಾಗಿ ಅಭ್ಯರ್ಥಿಗಳು ಕರ್ನಾಟಕ ಸಾಹಿತ್ಯ ಅಕಾಡೆಮಿಯ ವೆಬ್ ಸೈಟ್ http://karnatakasahithyaacademy.org ನಲ್ಲಿ ವಿವರಗಳನ್ನು ಪಡೆದುಕೊಳ್ಳಬಹುದಾಗಿದೆ.

## 27 ರಂದು ಚಿತ್ರದುರ್ಗ ಜಿಲ್ಲೆಯಲ್ಲಿ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗ ಸಿಟ್ಟಿಂಗ್ಸ್

**ಬೆಂಗಳೂರು:** ಮಾನವ ಹಕ್ಕುಗಳ ಸಂರಕ್ಷಣೆ ಹಾಗೂ ಮಾನವ ಹಕ್ಕುಗಳ ಉಲ್ಲಂಘನೆ ಪ್ರಕರಣಗಳಲ್ಲಿ ನೊಂದವರಿಗೆ ಸೂಕ್ತ ನೆರವನ್ನು ಒದಗಿಸುವ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗವು ಮಾರ್ಚ್ 27 ರಂದು ಚಿತ್ರದುರ್ಗ ಜಿಲ್ಲೆಯಲ್ಲಿ ಸಿಟ್ಟಿಂಗ್ಸ್ ನಡೆಸಲಿದೆ. ಚಿತ್ರದುರ್ಗ ಜಿಲ್ಲೆಗೆ ಸಂಬಂಧಿಸಿದಂತೆ ಆಯೋಗದಲ್ಲಿ ನೋಂದಣಿಯಾಗಿರುವ ಪ್ರಕರಣಗಳನ್ನು ಇತ್ಯರ್ಥಪಡಿಸಿ, ವಿಲೇ ಮಾಡಿ ಕ್ರಮ ಜರುಗಿಸಲು ಉದ್ದೇಶಿಸಲಾಗಿದೆ. ದೂರುದಾರರು ಹಾಗೂ ಪ್ರತಿವಾದಿ ಪ್ರಾಧಿಕಾರಗಳು ಈ ಸೌಲಭ್ಯದ ಸದುಪಯೋಗ ಪಡಿಸಿಕೊಳ್ಳಬಹುದಾಗಿದೆ. ಮಾನವ ಹಕ್ಕು ಉಲ್ಲಂಘನೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಚಿತ್ರದುರ್ಗ ಜಿಲ್ಲೆಯಲ್ಲಿನ ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಮಾರ್ಚ್ 27 ರಂದು ಸಾರ್ವಜನಿಕರಿಂದ ದೂರುಗಳು / ಅಹವಾಲುಗಳನ್ನು ಸಹ ಸ್ವೀಕರಿಸಲು ಉದ್ದೇಶಿಸಲಾಗಿದೆ. ಸಾರ್ವಜನಿಕರು ನಿಗದಿತ ದಿನಾಂಕದಂದು ಆಯೋಗದ ಮಾನ್ಯ ಅಧ್ಯಕ್ಷರು (ಹಂಗಾಮಿ) ಹಾಗೂ ಮಾನ್ಯ ಸದಸ್ಯರನ್ನು ಸಂಪರ್ಕಿಸಿ, ದೂರುಗಳನ್ನು ಸಲ್ಲಿಸಬಹುದು ಎಂದು ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಪ್ರಭಾರ ಕಾರ್ಯದರ್ಶಿ ಎ. ದಿನೇಶ್ ಸಂಪತ್ ರಾಜ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪತ್ರಿಕಾ ಛಾಯಾಗ್ರಹಣ ಕುರಿತು ''ಫೋಕಸ್ ಆನ್ ನ್ಯೂಸ್'' ಕಾರ್ಯಾಗಾರ

**ಬೆಂಗಳೂರು:** ಕರ್ನಾಟಕ ಮಾಧ್ಯಮ ಅಕಾಡೆಮಿಯು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಧಾರವಾಡ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸಹಯೋಗದಲ್ಲಿ ಮಾರ್ಚ್ 23 ರಂದು ಹುಬ್ಬಳ್ಳಿಯ ಇಂದಿರಾ ಗಾಜಿನ ಮನೆಯಲ್ಲಿ ಪತ್ರಿಕಾ ಛಾಯಾಗ್ರಹಣ ಕುರಿತು ''ಫೋಕಸ್ ಆನ್ ನ್ಯೂಸ್'' ಕಾರ್ಯಾಗಾರವನ್ನು ಆಯೋಜಿಸಿದೆ. ಇದರೊಂದಿಗೆ ಅಕಾಡೆಮಿಯು ಆಯೋಜಿಸಿದ್ದ ಮೊದಲ ಪತ್ರಿಕಾ ಛಾಯಾಗ್ರಹಣ ಸ್ಪರ್ಧೆಯ ಬಹುಮಾನ ವಿತರಣೆ ಹಾಗೂ ಸ್ಪರ್ಧೆಯಲ್ಲಿ ಭಾಗವಹಿಸಿದ್ದ ಛಾಯಾಚಿತ್ರಗಳ ಪ್ರದರ್ಶನ ನಡೆಯಲಿದೆ. ಛಾಯಾಚಿತ್ರ ಪ್ರದರ್ಶನವು ಮಾರ್ಚ್ 23 ಹಾಗೂ 24 ರಂದು ನಡೆಯಲಿದೆ. ಈ ಕಾರ್ಯಾಗಾರವನ್ನು ಕಾರ್ಮಿಕ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಅವರು ಉದ್ಘಾಟಿಸಲಿದ್ದಾರೆ. ಮುಖ್ಯಮಂತ್ರಿಯವರ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್ ಅಕಾಡೆಮಿಯ ಪತ್ರಿಕಾ ಛಾಯಾಗ್ರಹಣ ಸ್ಪರ್ಧಾ ವಿಜೇತರಿಗೆ ಬಹುಮಾನ ವಿತರಿಸಲಿದ್ದಾರೆ. ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಪತ್ರಿಕಾ ಛಾಯಾಗ್ರಾಹಕಿ ಶ್ರೀಮತಿ ಶಿಪ್ರಾ ದಾಸ್ ಪ್ರಧಾನ ಭಾಷಣ ಮಾಡುವರು. ಈ ಸಂದರ್ಭದಲ್ಲಿ ಪತ್ರಿಕಾ ಛಾಯಾಗ್ರಹಣದ ಪ್ರಸಕ್ತ ಸ್ವರೂಪ ಮತ್ತು ಸವಾಲುಗಳ ಕುರಿತು ಗೋಷ್ಠಿ ನಡೆಯಲಿದ್ದು, ಪತ್ರಿಕಾ ಛಾಯಾಗ್ರಾಹಕರಾದ ಶ್ರೀಮತಿ ಶಿಪ್ರಾ ದಾಸ್, ಭಾನು ಪ್ರಕಾಶ್ ಚಂದ್ರ, ವಿಶ್ವನಾಥ ಸುವರ್ಣ ಹಾಗೂ ಹಿರಿಯ ಪತ್ರಕರ್ತರಾದ ಮಲ್ಲಿಕಾರ್ಜುನ ಸಿದ್ದಣ್ಣವರ, ಬಂಡು ಕುಲಕರ್ಣಿ ಭಾಗವಹಿಸಲಿದ್ದಾರೆ. ಸಮಾರೋಪ ಸಮಾರಂಭದಲ್ಲಿ ವಿಧಾನ ಪರಿಷತ್ತಿನ ಸಭಾಪತಿ ಶ್ರೀ ಬಸವರಾಜ ಎಸ್. ಹೊರಟ್ಟಿ ಅವರು ಭಾಗವಹಿಸಲಿದ್ದಾರೆ ಎಂದು ಅಕಾಡೆಮಿ ಅಧ್ಯಕ್ಷರಾದ ಶ್ರೀಮತಿ ಆಯೇಶಾ ಖಾನಂ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕರ್ನಾಟಕ ಮಾಧ್ಯಮ ಅಕಾಡೆಮಿಯು ಮೊಟ್ಟಮೊದಲ ಬಾರಿಗೆ ಪತ್ರಿಕಾ ಛಾಯಾಗ್ರಾಹಕರಿಗಾಗಿ ಸುದ್ದಿ ಛಾಯಾಗ್ರಹಣ ಸ್ಪರ್ಧೆ ಏರ್ಪಡಿಸಿತ್ತು. ಇದರಲ್ಲಿ ರಾಜ್ಯಾದ್ಯಂತ 60 ಕ್ಕೂ ಹೆಚ್ಚು ಛಾಯಾಗ್ರಾಹಕರು ಭಾಗವಹಿಸಿದ್ದರು. ಅವರ ಛಾಯಾಚಿತ್ರಗಳನ್ನು ಕಾರ್ಯಕ್ರಮದ ದಿನ ಪ್ರದರ್ಶಿಸಲಾಗುತ್ತಿದೆ.

# ಚುನಾವಣಾ ಪ್ರಕ್ರಿಯೆ ಬಲಪಡಿಸಲು ಭಾರತೀಯ ಚುನಾವಣಾ ಆಯೋಗ ದಿಟ್ಟ ಹೆಜ್ಜೆ

**ಬೆಂಗಳೂರು:** ಭಾರತದ 26ನೇ ಮುಖ್ಯ ಚುನಾವಣಾ ಆಯುಕ್ತರಾಗಿ ಅಧಿಕಾರ ಸ್ವೀಕರಿಸಿದ ಜ್ಞಾನೇಶ್ ಕುಮಾರ್ ನೇತೃತ್ವದಲ್ಲಿ ಚುನಾವಣಾ ಆಯುಕ್ತರಾದ ಡಾ. ಸುಖಬೀರ್ ಸಿಂಗ್ ಸಂಧು ಮತ್ತು ಡಾ. ವಿವೇಕ್ ಜೋಶಿ ಅವರ ಜೊತೆಯಲ್ಲಿ ಒಂದು ತಿಂಗಳೊಳಗೆ ತಳಮಟ್ಟದಿಂದ ಬಿಎಲ್‌ಒ ಮಟ್ಟದವರೆಗೆ ಸಂಪೂರ್ಣ ಚುನಾವಣಾ ಚಟುವಟಿಕೆಗಳನ್ನು ಬಲಪಡಿಸಲು ದಿಟ್ಟ ಹೆಜ್ಜೆಯನ್ನು ಇಟ್ಟಿದ್ದು, ಸುಮಾರು 1 ಕೋಟಿ ಚುನಾವಣಾಧಿಕಾರಿಗಳ ಸಾಮರ್ಥ್ಯ ಬಲಪಡಿಸಲು ಡಿಜಿಟಲ್ ತರಬೇತಿ ನೀಡಲಾಗಿದೆ. ಮತದಾರರ ಪಟ್ಟಿಯಲ್ಲಿ ಹೆಸರುಗಳನ್ನು ಸೇರಿಸಲು ಮಾರ್ಗಸೂಚಿಗಳನ್ನು ಜಾರಿಗೆ ತಂದಿದ್ದು, ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ. ಅಲ್ಲದೇ ತಳಮಟ್ಟದಿಂದ ರಾಜಕೀಯ ಪಕ್ಷಗಳನ್ನು ಪ್ರಮುಖ ಪಾಲುದಾರರಾಗಿ ತೆಗದುಕೊಳ್ಳಲಾಗಿದೆ.




ಸುಮಾರು 100 ಕೋಟಿ ಮತದಾರರು ಪ್ರಜಾಪ್ರಭುತ್ವದ ಆಧಾರ ಸ್ತಂಭವಾಗಿ ನಿಂತಿದ್ದಾರೆ ಎಂದು ಆಯೋಗವು ಪುನರುಚ್ಚರಿಸುತ್ತದೆ. ಎಪಿಕ್ ಸಂಖ್ಯೆಯನ್ನು ಆಧಾರ್‌ನೊಂದಿಗೆ ಜೋಡಣೆ ಮಾಡಲು ತಜ್ಞರ ಸಲಹೆಗಳನ್ನು ಪಡೆದು ಈಗಾಗಲೇ ಈ ಬಗ್ಗೆ ಲಿಂಕ್ ಮಾಡಲು ಅಗತ್ಯ ಕ್ರಮಗಳನ್ನು ಕೈಗೊಂಡಿದೆ. ಈ ಸಂಬಂಧ ಭಾರತದ ವಿಶಿಷ್ಟ ಗುರುತಿನ ಪ್ರಾಧಿಕಾರ (ಗಖಆಂಖ) ಮತ್ತು ಭಾರತೀಯ ಚುನಾವಣಾ ಆಯೋಗದ ತಜ್ಞರ ನಡುವಿನ ತಾಂತ್ರಿಕ ಸಮಾಲೋಚನೆಗಳು ಶೀಘ್ರದಲ್ಲೇ ಪ್ರಾರಂಭವಾಗಲಿವೆ.

ಒಬ್ಬ ಮತದಾರರು ನಿಯೋಜಿತ ಮತಗಟ್ಟೆಯಲ್ಲಿ ಮಾತ್ರ ಮತ ಚಲಾಯಿಸಬಹುದು ಮತ್ತು ಬೇರೆಲ್ಲಿಯೂ ಚಲಾಯಿಸುವಂತಿಲ್ಲ. ದೇಶಾದ್ಯಂತ ಎಪಿಕ್ ಸಂಖ್ಯೆಗಳಲ್ಲಿ ನಕಲುಗಳನ್ನು ತೆಗೆದುಹಾಕಲು ಅಗತ್ಯ ಕ್ರಮ ವಹಿಸಿದ್ದು, ದಶಕಗಳ ಕಾಲದಿಂದ ಇರುವ ಸಮಸ್ಯೆಯನ್ನು 3 ತಿಂಗಳೊಳಗಾಗಿ ಕೊನೆಗೊಳಿಸಲು ಆಯೋಗವು ನಿರ್ಧರಿಸಿದೆ. ಜನನ ಮತ್ತು ಮರಣ ನೋಂದಣಿ ಅಧಿಕಾರಿಗಳೊಂದಿಗೆ ನಿಕಟ ಸಮನ್ವಯದೊಂದಿಗೆ ಮತದಾರರ ಪಟ್ಟಿಯ ನಿಯಮಿತ ನವೀಕರಣವನ್ನು ಬಲಪಡಿಸಲಾಗುವುದು. ಆಯೋಗವು ರಾಜಕೀಯ ಪಕ್ಷಗಳೊಂದಿಗಿನ ಸಂವಾದದಲ್ಲಿ ತೊಡಗಿದ್ದು, ಕರಡು ಮತದಾರರ ಪಟ್ಟಿಗೆ ಯಾವುದೇ ಸೇರ್ಪಡೆ ಅಥವಾ ಅಳಿಸುವಿಕೆಯು ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಸಂಬಂಧಿಸಿದ ಕಾನೂನು ನಿಬಂಧನೆಗಳ ಅಡಿಯಲ್ಲಿ ಮೇಲ್ಮನವಿಗಳ ಪ್ರಕ್ರಿಯೆಯಿಂದ ನಿಯಂತ್ರಿಸಲಾಗುವುದು ಎಂದು ಸ್ಪಷ್ಟಪಡಿಸಿದೆ.

1950 ರ ಜನಪ್ರತಿನಿಧಿ ಕಾಯ್ದೆಯಲ್ಲಿ ಎಲ್ಲಾ ರಾಜಕೀಯ ಪಕ್ಷಗಳಿಗೆ ಲಭ್ಯವಿದೆ. 2025 ರ ಜನವರಿ 6 ರಿಂದ 10 ರವರೆಗೆ ವಿಶೇಷ ಸಾರಾಂಶ ಪರಿಷ್ಕರಣೆ (ಎಸ್‌ಎಸ್‌ಆರ್) ಪೂರ್ಣಗೊಳಿಸಿದ ನಂತರ ಕೇವಲ 89 ಮೊದಲ ಮೇಲ್ಮನವಿಗಳು ಮತ್ತು ಏಕೈಕ ಎರಡನೇ ಮೇಲ್ಮನವಿಯನ್ನು ಮಾರ್ಚ್ 7, 2025 ರಂದು ಸಲ್ಲಿಸಲಾಗಿದೆ ಎಂದು ಭಾರತೀಯ ಚುನಾವಣಾ ಆಯೋಗವು ಸ್ಪಷ್ಟಪಡಿಸಿದೆ. ಎಲ್ಲಾ ಅರ್ಹ ನಾಗರಿಕರ 100% ದಾಖಲಾತಿಯನ್ನು ಖಚಿತಪಡಿಸಿಕೊಳ್ಳುವುದು, ಮತದಾನದ ಸುಲಭತೆಯನ್ನು ಖಚಿತಪಡಿಸಿಕೊಳ್ಳುವುದು ಮತ್ತು ಉತ್ತಮ ಮತದಾನದ ಅನುಭವವನ್ನು ನೀಡುವುದು ಭಾರತೀಯ ಚುನಾವಣಾ ಆಯೋಗದ ಪ್ರಮುಖ ಉದ್ದೇಶವಾಗಿದೆ. ಯಾವುದೇ ಮತಗಟ್ಟೆಯಲ್ಲಿ 1,200 ಕ್ಕಿಂತ ಹೆಚ್ಚು ಮತದಾರರು ಇರದಂತೆ ಮತ್ತು ಅವರು ಮತದಾರರ 2 ಕಿಲೋಮೀಟರ್ ವ್ಯಾಪ್ತಿಯಲ್ಲಿರುವುದನ್ನು ಖಚಿತಪಡಿಸಿಕೊಳ್ಳಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು. ದೂರದ ಗ್ರಾಮೀಣ ಮತಗಟ್ಟೆಯಲ್ಲೂ ಮೂಲ ಸೌಕರ್ಯಗಳನ್ನು ಒದಗಿಸಲಾಗುವುದು. ನಗರ ಮತದಾರರಲ್ಲಿ ನಿರಾಸಕ್ತಿ ಹೋಗಲಾಡಿಸಲು ಮತ್ತು ಪ್ರೋತ್ಸಾಹಿಸಲು ಹೆಚ್ಚಿನ ಭಾಗವಹಿಸುವಿಕೆ ಸಂಬಂಧಿಸಿದಂತೆ ಸಮೂಹ ಮಾಧ್ಯಮಗಳ ಮೂಲಕ ಪ್ರಚಾರ ಕೈಗೊಳ್ಳಲಾಗುವುದು.

ಸುಮಾರು 1 ಕೋಟಿ ಚುನಾವಣಾ ಸಿಬ್ಬಂದಿಯ ಸಮಗ್ರ ಮತ್ತು ನಿರಂತರ ಸಾಮರ್ಥ್ಯ ನಿರ್ಮಾಣದ ಪ್ರಮುಖ ಹೆಜ್ಜೆಯಾಗಿ, ಮಾರ್ಚ್ 4 ಮತ್ತು 5 ರಂದು ನವದೆಹಲಿಯ ಭಾರತೀಯ ಪ್ರಜಾಪ್ರಭುತ್ವ ನಿರ್ವಹಣಾ ಸಂಸ್ಥೆ (ಖಖಖಆಇಒ) ನಲ್ಲಿ ಎಲ್ಲಾ ರಾಜ್ಯಗಳು/ ಕೇಂದ್ರಾಡಳಿತ ಪ್ರದೇಶಗಳ ಸಿಇಒಗಳ ಎರಡು ದಿನಗಳ ಸಮ್ಮೇಳನವನ್ನು ನಡೆಸಲಾಯಿತು. ಇದರಲ್ಲಿ ಮೊದಲನೆಯದಾಗಿ, ಪ್ರತಿಯೊಂದು ರಾಜ್ಯ/ ಕೇಂದ್ರಾಡಳಿತ ಪ್ರದೇಶಗಳ ಜಿಲ್ಲಾ ಚುನಾವಣಾಧಿಕಾರಿಗಳು ಮತ್ತು ಚುನಾವಣಾ ನೋಂದಣಾಧಿಕಾರಿಗಳು ಭಾಗವಹಿಸಿದ್ದರು. ಸಂವಿಧಾನ, ಚುನಾವಣಾ ಕಾನೂನುಗಳು ಮತ್ತು ಭಾರತೀಯ ಚುನಾವಣಾ ಆಯೋಗ ಹೊರಡಿಸಿದ ಮಾರ್ಗಸೂಚಿಗಳ ಪ್ರಕಾರ ಅವರ ಜವಾಬ್ದಾರಿಗಳೊಂದಿಗೆ 28 ಮಧ್ಯಸ್ಥಗಾರರ ಸ್ಪಷ್ಟ ಮ್ಯಾಪಿಂಗ್‌ನೊಂದಿಗೆ ಇಡೀ ಚುನಾವಣಾ ಚಟುವಟಿಕೆಗಳನ್ನು ಶಕ್ತಿಯುತಗೊಳಿಸಲು ಸಮ್ಮೇಳನವು ಒತ್ತು ನೀಡಿದೆ.

ಚುನಾವಣಾ ಕೈಪಿಡಿಗಳು ಮತ್ತು ಸೂಚನೆಗಳಿಗಾಗಿ ಕೈಪಿಡಿಗಳನ್ನು ಇತ್ತೀಚಿನ ಬದಲಾವಣೆಗಳೊಂದಿಗೆ ಸಮನ್ವಯಗೊಳಿಸಲಾಗುತ್ತದೆ. ಬಹು ಭಾರತೀಯ ಭಾ?ಗಳಲ್ಲಿ ಡಿಜಿಟಲ್ ತರಬೇತಿ ಕಿಟ್‌ಗಳನ್ನು ಸುಲಭವಾಗಿ ಪಡೆದುಕೊಳ್ಳಲು ಮತ್ತು ಮುಂಚೂಣಿಯ ಕಾರ್ಯಕರ್ತರ ಪರಿಣಾಮಕಾರಿ ತರಬೇತಿಗಾಗಿ ಸಿದ್ಧಪಡಿಸಲಾಗುತ್ತದೆ. ಅನಿಮೇಟೆಡ್ ವೀಡಿಯೊಗಳು ಮತ್ತು ಇಂಟಿಗ್ರೇಟೆಡ್ ಡ್ಯಾಶ್‌ಬೋರ್ಡ್ ತರಬೇತಿಗೆ ಡಿಜಿಟಲ್ ಪುಶ್ ಅನ್ನು ಒದಗಿಸುತ್ತದೆ. ಮುಂದಿನ ದಿನಗಳಲ್ಲಿ ಬೂತ್ ಮಟ್ಟದ ಅಧಿಕಾರಿಗಳಿಗೆ ತರಬೇತಿ ನೀಡಲು ತರಬೇತಿ ಘಟಕವನ್ನು ಸಹ ರೂಪಿಸಲಾಗುತ್ತಿದೆ. ಚುನಾವಣಾ ಪ್ರಕ್ರಿಯೆಗಳ ಎಲ್ಲಾ ಅಂಶಗಳಲ್ಲಿ ರಾಜಕೀಯ ಪಕ್ಷಗಳ ಸಂಪೂರ್ಣ ಭಾಗವಹಿಸುವಿಕೆಯನ್ನು ಖಚಿತಪಡಿಸಿಕೊಳ್ಳಲು, ಭಾರತೀಯ ಚುನಾವಣಾ ಆಯೋಗದ ಮುಖ್ಯ ಆಯುಕ್ತರಾದ ಜ್ಞಾನೇಶ್ ಕುಮಾರ್ ಅವರು ಮಾರ್ಚ್ 4 ರಂದು ಜರುಗಿದ ಮುಖ್ಯ ಚುನಾವಣಾಧಿಕಾರಿಗಳ ಸಮ್ಮೇಳನದಲ್ಲಿ ಎಲ್ಲಾ 36 ಮುಖ್ಯ ಚುನಾವಣಾಧಿಕಾರಿಗಳು, 788 ಜಿಲ್ಲಾ ಚುನಾವಣಾಧಿಕಾರಿಗಳು, 4123 ಚುನಾವಣಾ ನೋಂದಣಾಧಿಕಾರಿಗಳು ನಿಯಮಿತವಾಗಿ ಸರ್ವಪಕ್ಷ ಸಭೆಗಳು ಮತ್ತು ಸಂವಾದಗಳನ್ನು ನಡೆಸುವಂತೆ ಸೂಚಿಸಲಾಗಿದೆ. ದೇಶದಾದ್ಯಂತ ನಡೆಯುವ ಇಂತಹ ಸಭೆಗಳು ತಳಮಟ್ಟದಲ್ಲಿಯೇ ರಾಜಕೀಯ ಪಕ್ಷಗಳು ಎತ್ತಿರುವ ಯಾವುದೇ ಮಹೋನ್ನತ ಮತ್ತು ಉದಯೋನ್ಮುಖ ಸಮಸ್ಯೆಗಳನ್ನು ಪರಿಹರಿಸಲು ಸಹಾಯ ಮಾಡುತ್ತದೆ. ಈ ಪ್ರಕ್ರಿಯೆಯು ಮಾರ್ಚ್ 31, 2025 ರೊಳಗೆ ಭಾರತದಾದ್ಯಂತ ಪೂರ್ಣಗೊಳ್ಳಲಿದೆ. ಮತದಾರರ ಪಟ್ಟಿಗೆ ಹಕ್ಕುಗಳು ಮತ್ತು ಆಕ್ಷೇಪಣೆಗಳು ಸೇರಿದಂತೆ ಚುನಾವಣಾ ಕಾನೂನುಗಳ ಪ್ರಕಾರ ಕಾರಣ ಪ್ರಕ್ರಿಯೆಗಳ ಕುರಿತು ರಾಜಕೀಯ ಪಕ್ಷದ ಪ್ರತಿನಿಧಿಗಳು ಮತ್ತು ಅವರ ನೇಮಕಗೊಂಡ ಬೂತ್ ಮಟ್ಟದ ಅಧಿಕಾರಿಗಳಿಗೆ ತರಬೇತಿ ನೀಡುವ ಆಯೋಗದ ಪ್ರಸ್ತಾಪವನ್ನು ರಾಜಕೀಯ ಪಕ್ಷಗಳು ಸ್ವಾಗತಿಸಿವೆ. ಭಾರತೀಯ ಚುನಾವಣಾ ಆಯೋಗವು ಎಲ್ಲಾ ರಾಜಕೀಯ ಪಕ್ಷಗಳಿಂದ ಚುನಾವಣೆಯ ನಡವಳಿಕೆಗೆ ಸಂಬಂಧಿಸಿದ ಎಲ್ಲಾ ವಿಷಯಗಳ ಬಗ್ಗೆ ಸಲಹೆಗಳನ್ನು ಆಹ್ವಾನಿಸಿದೆ. ಸಲಹೆಗಳನ್ನು 30 ಏಪ್ರಿಲ್, 2025 ರೊಳಗೆ ಕಳುಹಿಸಬಹುದು. ರಾಜಕೀಯ ಪಕ್ಷಗಳ ಪರಸ್ಪರ ಚರ್ಚೆಗೆ ಸಂಬಂಧಿಸಿದಂತೆ ಅವರಿಗೆ ಅನುಕೂಲವಾದ ಸಮಯದಲ್ಲಿ ದೆಹಲಿಯಲ್ಲಿ ಆಯೋಗವನ್ನು ಭೇಟಿ ಮಾಡಲು ಆಹ್ವಾನವನ್ನು ಸಹ ನೀಡಲಾಗಿದೆ.

## ಅರಿವು ಕಾರ್ಯಕ್ರಮ

**ಮೈಸೂರು:** ಬನ್ನೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಮೈಸೂರಿನ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಎಂ. ಮುನೀಂದ್ರಮ್ಮ ಅವರು ಭೇಟಿ ನೀಡಿ ತಂಬಾಕು ಹಾಗೂ ತಂಬಾಕು ಉತ್ಪನ್ನಗಳ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ, ತಂಬಾಕು ತ್ಯಜಿಸುವುದು ಹೇಗೆ ಎಂಬುದರ ಬಗ್ಗೆ ಹಾಗೂ ತಂಬಾಕು ತ್ಯಜಿಸುವುದರಿಂದ ಆಗುವ ಪ್ರಯೋಜನಗಳ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಿದರು. ಕರ್ನಾಟಕದಲ್ಲಿ ಸುಮಾರು 15 ಲಕ್ಷ ಕ್ಯಾನ್ಸರ್ ರೋಗಿಗಳಿದ್ದು ಇದಕ್ಕೆ ಪ್ರತಿವರ್ಷ 35000 ಸಾವಿರ ಹೊಸ ಕ್ಯಾನ್ಸರ್ ರೋಗಿಗಳು ಸೇರ್ಪಡೆ ಆಗುತ್ತಿದ್ದಾರೆ, ಇದರಲ್ಲಿ ಶೇಕಡಾ 40 ರಷ್ಟು ಗಂಡಸರು ಶೇಕಡಾ 25 ರಷ್ಟು ಹೆಂಗಸರು ತಂಬಾಕು ಸೇವನೆಯ ದುಷ್ಪರಿಣಾಮದಿಂದ ಉಂಟಾದ ಕ್ಯಾನ್ಸರ್ ರೋಗದಿಂದ ನರಳುತ್ತಿದ್ದಾರೆ. ಭಾರತದಲ್ಲಿ ಪ್ರತಿದಿನ ತಂಬಾಕು ಸೇವನೆಯಿಂದ 2200 ಜನರು ಸಾವನ್ನಪ್ಪುತ್ತಿದ್ದಾರೆ ಹಾಗೂ 250 ಜನರು ಹೃದಯ ಬೇನೆಗೆ ತುತ್ತಾಗುತ್ತಿದ್ದಾರೆ, ಹದಿ ಹರೆಯದವರ ವ್ಯಸನಕ್ಕೆ ಕಂಡುಬರುವ ನಡುವಳಿಕೆಗಳು ಧೂಮಪಾನ, ಬೀಡಿ, ಸಿಗರೆಟ್, ಗುಟ್ಕಾ, ನಿಕೋಟಿನ್, ಗಾಂಜಾ, ಅಫೀಮು ಸೇವನೆಯಿಂದಾಗುವ ಸಮಸ್ಯೆಗಳ ಬಗ್ಗೆ ವಿದ್ಯಾರ್ಥಿಗಳಿಗೆ ತಿಳಿಸಿದರು. ಹೆಣ್ಣು ಮಕ್ಕಳಿಗೆ ಸಾನಿಟರಿ ಪ್ಯಾಡ್ ಗಳ ಬಗ್ಗೆ ಮತ್ತು ಮುಟ್ಟಿನ ಶುಚಿತ್ವ ಹಾಗೂ ವೈಯಕ್ತಿಕ ಸಮಸ್ಯೆಗಳ ಬಗ್ಗೆ ಜಾಗೃತಿ ಮೂಡಿಸಿದರು. ಈ ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಹೆಚ್. ಸೀಗನಾಯಕ , ಡಾ.ಮಹದೇವನಾಯಕ್ , ಡಾ.ವಿನಯ್ ಕುಮಾರ್, ಹೀನ ಕೌಸರ್ ಹಾಗೂ ಸಮುದಾಯ ಆರೋಗ್ಯ ಅಧಿಕಾರಿಗಳಾದ ಜಿ. ಕೆ ಪ್ರವೀಣ್ ರವರು ಉಪಸ್ಥಿತರಿದ್ದರು.

## ಕೆ.ಎಸ್. ನರಸಿಂಹಸ್ವಾಮಿರವರ ಕಾವ್ಯ ಗಾಯನ ಮತ್ತು ಸಾಹಿತ್ಯ ಪ್ರಶಸ್ತಿ ಪ್ರದಾನ ಸಮಾರಂಭ

**ಮಂಡ್ಯ:** ಕೆ.ಎಸ್. ನರಸಿಂಹಸ್ವಾಮಿ ಟ್ರಸ್ಟ್ (ರಿ), ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಮಾರ್ಚ್ 23 ರಂದು ಕೆ.ಎಸ್. ನರಸಿಂಹಸ್ವಾಮಿರವರ ಕಾವ್ಯ ಗಾಯನ ಮತ್ತು ಸಾಹಿತ್ಯ ಪ್ರಶಸ್ತಿ ಪ್ರದಾನ ಸಮಾರಂಭ ಕಾರ್ಯಕ್ರಮವನ್ನು ಬೆಳಿಗ್ಗೆ 9:30 ಗಂಟೆಗೆ ನಾಲ್ವಡಿ ಕೃಷ್ಣರಾಜ ಒಡೆಯರ್ ಕಲಾ ಮಂದಿರದಲ್ಲಿ ಆಯೋಜಿಸಲಾಗಿದೆ. ಕೃಷಿ ಹಾಗೂ ಉಸ್ತುವಾರಿ ಸಚಿವರಾದ ಎನ್. ಚಲುವರಾಯಸ್ವಾಮಿಯವರು ಕಾರ್ಯಕ್ರಮ ಉದ್ಘಾಟಿಸಲಿದ್ದು, ಕೆ.ಎಸ್. ನರಸಿಂಹಸ್ವಾಮಿ ಟ್ರಸ್ಟ್‌ನ (ರಿ) ಅಧ್ಯಕ್ಷರಾದ ಡಾ.ಕಿಕ್ಕೇರಿ ಕೃಷ್ಣಮೂರ್ತಿ ಅವರು ಅಧ್ಯಕ್ಷತೆ ವಹಿಸಲಿದ್ದಾರೆ. ವಿಧಾನಸಭಾ ಶಾಸಕರಾದ ಪಿ.ರವಿಕುಮಾರ್ ಅವರು ಗೌರವ ಉಪಸ್ಥಿತಿ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಡಾ. ಕುಮಾರ ಅವರು, ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ನಂದಿನಿ. ಕೆ.ಆರ್, ಮೈಸೂರು ಸಕ್ಕರೆ ಕಂಪನಿ ನಿಯಮಿತ ಅಧ್ಯಕ್ಷರಾದ ಸಿ.ಡಿ ಗಂಗಾಧರ, ಆರಕ್ಷಕ ಅಧೀಕ್ಷಕರಾದ ಮಲ್ಲಿಕಾರ್ಜುನ ಬಾಲದಂಡಿ ಮತ್ತು ಕನ್ನಡ ಹಾಗೂ ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕರಾದ ವಿ.ಎನ್ ಮಲ್ಲಿಕಾರ್ಜುನಸ್ವಾಮಿ ಅವರು ಆಗಮಿಸಲಿದ್ದಾರೆ. ಸಾಹಿತ್ಯ ಪ್ರಶಸ್ತಿ ಹಾಗೂ ಕಾವ್ಯ ಗಾಯನ ಪ್ರಶಸ್ತಿ ನೀಡಲಿದ್ದು, ಪ್ರೊ.ಜಯಪ್ರಕಾಶ್ ಗೌಡ, ಡಾ. ನಾ. ದಾಮೋದರ ಶೆಟ್ಟಿ, ಸಂಗೀತಾ ಕಟ್ಟಿ ಮತ್ತು ರಮೇಶ್ ಚಂದ್ರ ಅವರು ಪ್ರಶಸ್ತಿ ಪುಸ್ಕೃತರಾಗಿದ್ದಾರೆ.

## ಪುಸ್ತಕ ಖರೀದಿಸುವಂತೆ ಮನವಿ

**ಚಿಕ್ಕಬಳ್ಳಾಪುರ:** 2021 ರ 'ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿ'ಯಿಂದ ಆಯ್ಕೆಯಾದ ಪುಸ್ತಕಗಳ ಆಯ್ಕೆ ಪಟ್ಟಿಯು ಬಿಡುಗಡೆಯಾಗಿರುತ್ತದೆ. ಆಸಕ್ತಿಯುಳ್ಳ ಲೇಖಕರು/ಲೇಖಕ ಪ್ರಕಾಶಕರು ಹಾಗೂ ಪುಸ್ತಕ ಮಾರಾಟಗಾರರು ಪುಸ್ತಕ ಖರೀದಿಸುವಂತೆ ಕೋರಿ ಮನವಿ ಪತ್ರಗಳನ್ನು ಮುಖ್ಯಗ್ರಂಥಾಲಯಾಧಿಕಾರಿಯವರ ಕಚೇರಿ, ಜಿಲ್ಲಾ ಕೇಂದ್ರ ಗ್ರಂಥಾಲಯ ಚಿಕ್ಕಬಳ್ಳಾಪುರ, ಇಲ್ಲಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08156-275088 ನ್ನು ಸಂಪರ್ಕಿಸಬಹುದೆಂದು ಮುಖ್ಯ ಗ್ರಂಥಾಲಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಾಹನ ಸಂಚಾರ ನಿರ್ಬಂಧ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ತಾಲ್ಲೂಕಿನ ನಂದಿಗಿರಿಧಾಮದ ಮೋಟಾರು ರಸ್ತೆಯ ಸರಪಳಿ 0.00 ರಿಂದ 7.70 ಕಿಮೀ ವರೆಗಿನ ರಸ್ತೆ ನವೀಕರಣ ಕಾಮಗಾರಿ ಕಾರ್ಯವನ್ನು ಕೈಗೊಳ್ಳುವ ಹಿನ್ನೆಲೆಯಲ್ಲಿ ಸದರಿ ರಸ್ತೆಯನ್ನು ಸಾರ್ವಜನಿಕರ ಹಿತದೃಷ್ಟಿಯಿಂದ ಮಾರ್ಚ್ 24 ರಿಂದ 25 ರವರೆಗೆ ಸಾರ್ವಜನಿಕರ ವಾಹನ ಸಂಚಾರಕ್ಕೆ ನಿರ್ಬಂಧಿಸಿ ಜಿಲ್ಲಾಧಿಕಾರಿಗಳು ಆದೇಶಿಸಿದ್ದಾರೆ ಎಂದು ಜಿಲ್ಲಾಧಿಕಾರಿಗಳ ಕಾರ್ಯಾಲಯ ಪ್ರಕಟಣೆಯಲ್ಲಿ ತಿಳಿಸಿದೆ.

## ಸಾರ್ವಜನಿಕರ ಕುಂದು ಕೊರತೆಗಳ ಸಭೆ

**ಚಿಕ್ಕಬಳ್ಳಾಪುರ:** ಜಿಲ್ಲೆಯ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರ ಅಧ್ಯಕ್ಷತೆಯಲ್ಲಿ ಮಾರ್ಚ್ 26 ರಂದು ಬೆಳಿಗ್ಗೆ 11:00 ಗಂಟೆಗೆ ಗೌರಿಬಿದನೂರು ತಾಲ್ಲೂಕಿಗೆ ಸಂಬಂಧಪಟ್ಟಂತೆ ಸಾರ್ವಜನಿಕರ ಕುಂದು ಕೊರತೆಗಳ ಸಭೆಯನ್ನು ಗೌರಿಬಿದನೂರು ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಸರ್ಕಾರಿ ಕಚೇರಿಗಳಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ಮಾಡದೆ ವಿಳಂಬ ನಿರ್ಲಕ್ಷ್ಯ ಮಾಡುತ್ತಿದ್ದಲ್ಲಿ ಮತ್ತು ಸರ್ಕಾರಿ ಯೋಜನೆಗಳ ಅನುಷ್ಠಾನದಲ್ಲಿ ಅಕ್ರಮಗಳನ್ನು ನಡೆಸಿ ಹಣ ದುರುಪಯೋಗಪಡಿಸಿದ್ದಲ್ಲಿ ಆ ಬಗ್ಗೆ ಸಾರ್ವಜನಿಕರು ನಿರ್ದಿಷ್ಟ ಮಾಹಿತಿಯೊಂದಿಗೆ ಸದರಿ ಸಭೆಗೆ ಹಾಜರಾಗಿ ದೂರು ಅರ್ಜಿ ಹಾಗೂ ಸಂಬಂಧಪಟ್ಟ ದಾಖಲೆಗಳನ್ನು ನೀಡಬಹುದೆಂದು ಚಿಕ್ಕಬಳ್ಳಾಪುರ ಜಿಲ್ಲೆಯ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ನಗರ ದೇವತೆ ಕೋಲಾರಮ್ಮನವರ ಬ್ರಹ್ಮರಥೋತ್ಸವ

**ಕೋಲಾರ:** ನಗರ ದೇವತೆ ಶ್ರೀ ಕೋಲಾರಮ್ಮನವರ ಬ್ರಹ್ಮರಥೋತ್ಸವ ಕಾರ್ಯಕ್ರಮವು ಮಾ. 22ರ ಶನಿವಾರ ಮಧ್ಯಾಹ್ನ ನೆರವೇರಲಿದೆ.



ಮಾ. 23 ರಂದು ಅಭಿಷೇಕ, ತದನಂತರ ಹೋಮಾದಿಗಳು, ಗಜವಾಹನೋತ್ಸವ ಪಲ್ಲಕ್ಕಿ, 24 ರಂದು ವಸಂತೋತ್ಸವ, ಹಂಸವಾಹನೋತ್ಸವ ಪಲ್ಲಕ್ಕಿ, ಧ್ವಜಾವರೋಹಣ, 25 ರಂದು ಅಭಿಷೇಕ, ಪ್ರಾಕಾರೋತ್ಸವ, ದ್ವದಶಾರಾಧನೆ, 26 ರಂದು ಕೈಲಾಸ ಪರ್ವತ ರಾವಣೋತ್ಸವ, ಶ್ರೀ ಕೋಲಾರಮ್ಮನವರ ಪಲ್ಲಕ್ಕಿ ಉತ್ಸವ ಸೇರಿದಂತೆ ಪೂಜಾ ಕಾರ್ಯಗಳು ತಹಸೀಲ್ದಾರ್ ಡಾ.ನಯನ, ಧಾರ್ಮಿಕ ದತ್ತಿ ಪ್ರಭಾರ ತಹಸೀಲ್ದಾರ್ ಎಸ್.ಶ್ರೀನಿವಾಸರೆಡ್ಡಿ, ಕಾರ್ಯನಿರ್ವಾಹಕ ಅಧಿಕಾರಿ ಡಾ.ಟಿ.ಸೆಲ್ವಮಣಿ, ಪೇಷ್ಕಾರ್ ವೀರಭದ್ರಯ್ಯ ನೇತೃತ್ವದಲ್ಲಿ ನಡೆಯಲಿವೆ.

ರಥೋತ್ಸವ ಕಾರ್ಯಕ್ರಮದಲ್ಲಿ ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವಿಯ ಕೃಪೆಗೆ ಪಾತ್ರರಾಗುವಂತೆ ಅರ್ಚಕ ಸಿ.ಸೋಮಶೇಖರ್ ದೀಕ್ಷಿತ್, ಆಗಮಿಕ ಚೌಡೇಪಲ್ಲಿ ಸ್ಥಾನಿಕಂ ರಾಜಶೇಖರದೀಕ್ಷಿತ್ ತಿಳಿಸಿದ್ದಾರೆ.

## ಅನಧಿಕೃತ ಗೈರುಹಾಜರಿ: ಕರ್ತವ್ಯದಿಂದ ವಜಾಗೊಂಡಿರುವ ದಂಡನಾದೇಶ

**ಕೋಲಾರ:** ಶ್ರೀ ಎಂ.ವೇಣುಗೋಪಾಲ್, ಪ್ರಥಮ ದರ್ಜೆ ಸಹಾಯಕರು, ಆದರ್ಶ ವಿದ್ಯಾಲಯ ಕಲ್ಲೂರು, ಶ್ರೀನಿವಾಸಪುರ ತಾಲ್ಲೂಕು ರವರು ಕರ್ತವ್ಯಕ್ಕೆ ಅನಧಿಕೃತ ಗೈರುಹಾಜರಿ ಸಂಬಂಧ ಸೇವೆಯಿಂದ ವಜಾ ಮಾಡಿರುವ ದಂಡನೆಯನ್ನು ಮಾನ್ಯ ಆಯುಕ್ತರು ಹೊರಡಿಸಿದ್ದು, ಶ್ರೀ ಎಂ ವೇಣುಗೋಪಾಲ್, ಯಾನಾದಹಳ್ಳಿ ಗ್ರಾಮ, ಹುತ್ತೂರು ಅಂಚೆ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ ಯವರಾದ ನಿಮ್ಮ ವಿಳಾಸಕ್ಕೆ ಮುದ್ದಾಂ ಜಾರಿ ಮಾಡಲು ಸೈಯದ್ ಅಫ್ಜಾನ್ 'ಡಿ ಗ್ರೂಪ್ ನೌಕರರು, ಉಪನಿರ್ದೇಶಕರ (ಆಡಳಿತ) ರವರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಕೋಲಾರ ಜಿಲ್ಲೆ ಇವರಿಗೆ ಸೂಚಿಸಲಾಗಿತ್ತು. ಅದರಂತೆ ಶ್ರೀ ಸೈಯದ್ ಅಫ್ಜಾನ್ 'ಡಿ ಗ್ರೂಪ್ ನೌಕರರು ರವರು ಉಪನಿರ್ದೇಶಕರ(ಆಡಳಿತ) ರವರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಕೋಲಾರ ಜಿಲ್ಲೆ ರವರು, ಶ್ರೀ ಎಂ.ವೇಣುಗೋಪಾಲ್, ಪ್ರ.ದ.ಸ, ರವರಿಗೆ ಸೇವೆಯಿಂದ ವಜಾ ಮಾಡುವ ದಂಡನೆಯನ್ನು ವಿಧಿಸಿರುವ ಆದೇಶದ ಮುದ್ದಾಂ ಜಾರಿ ಮಾಡಲು ನಿಮ್ಮ ಸ್ವಂತ ಸ್ಥಳವಾದ ಯಾನಾದಹಳ್ಳಿ ಗ್ರಾಮ, ಹುತ್ತೂರು ಅಂಚೆ, ಕೋಲಾರ ತಾಲ್ಲೂಕಿಗೆ ಭೇಟಿ ಮಾಡಲಾಗಿತ್ತು, ನೀವು ಸದರಿ ವಿಳಾಸದಲ್ಲಿ ಲಭ್ಯವಿಲ್ಲದ ಕಾರಣ ದಂಡನಾದೇಶವನ್ನು ಜಾರಿ ಮಾಡಲು ಸಾದ್ಯವಾಗಲಿಲ್ಲವಾದ್ದರಿಂದ, ಸಿ.ಸಿ.ಎ. ನಿಯಮ 28(ಎ) ರನ್ವಯ ಈ ಮೂಲಕ ಅಧಿಕೃತವಾಗಿ ದಂಡನಾದೇಶವನ್ನು ಪ್ರಚುರಪಡಿಸಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ(ಆಡಳಿತ) ಕೃಷ್ಣಮೂರ್ತಿ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದಾಖಲಾತಿ ಆಂದೋಲನ ಕಾರ್ಯಕ್ರಮ

**ಕೋಲಾರ:** ಪ್ರಸ್ತುತವಾಗಿ ಕೈಗಾರಿಕಾ ವಲಯದಲ್ಲಿ ಹೆಚ್ಚಾಗಿ ಬೇಡಿಕೆ ಇರುವ ಡಿಪ್ಲೊಮಾ ನಿಮ್ಮ ಜೀವನ ರೂಪಿಸಿಕೊಳ್ಳಲು ಸಹಕಾರಿಯಾಗುತ್ತದೆ. ಹಾಗಾಗಿ ವೃತ್ತಿಪರ ಡಿಪ್ಲೊಮಾ ಕೋರ್ಸುಗಳನ್ನು ಆಯ್ಕೆ ಮಾಡಿಕೊಳ್ಳಲು ಸರ್ಕಾರಿ ಪಾಲಿಟೆಕ್ನಿಕ್ ಮುಳಬಾಗಿಲು ಸಂಸ್ಥೆಯ ರಿಜಿಸ್ಟ್ರಾರ್ ಎಂ.ನಾಗವೇಣಿ ತಿಳಿಸಿದರು. ಸರ್ಕಾರಿ ಪಾಲಿಟೆಕ್ನಿಕ್ ಮುಳಬಾಗಿಲು ವತಿಯಿಂದ ಬೆಗ್ಲಿಹೊಸಹಳ್ಳಿ ಭೇಟಿ ನೀಡಿ ಎಸ್.ಎಸ್.ಎಲ್.ಸಿ. ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಡಿಪ್ಲೊಮಾ ಕೋರ್ಸುಗಳ ಬಗ್ಗೆ ಮಾಹಿತಿ ಮಾಹಿತಿ ನೀಡಿ ಮಾತನಾಡಿದರು. ಡಿಪ್ಲೊಮಾದಲ್ಲಿ ಕೋರ್ಸುಗಳು ಇತ್ತೀಚೆಗೆ ಅತಿ ಹೆಚ್ಚು ಬೇಡಿಕೆಯ ಹೊಂದಿದ್ದು ಸಿವಿಲ್ ಇಂಜಿನಿಯರಿಂಗ್, ಮೆಕಾನಿಕಲ್ ಇಂಜಿನಿಯರಿಂಗ್, ಕಂಪ್ಯೂಟರ್ ಇಂಜಿನಿಯರಿಂಗ್ ಹಾಗೂ ಎಲೆಕ್ಟ್ರಾನಿಕ್ ಇಂಜಿನಿಯರಿಂಗ್ ಕೋರ್ಸುಗಳನ್ನು ವಿದ್ಯಾಭ್ಯಾಸ ಮಾಡುವುದರಿಂದ ಮುಂದಿನ ಬಿ.ಇ. ಇಂಜಿನಿಯರಿಂಗ್ ಲ್ಯಾಟರಲ್ ಎಂಟ್ರಿ ಮುಖಾಂತರ ಪ್ರವೇಶ ಪಡೆಯಬಹುದು. ಕೆಲಸ ಮಾಡಲು ಇಚ್ಛಿಸುವವರು ಡಿಪ್ಲೊಮಾ ನಂತರ ಖಾಸಗಿ ಸಂಸ್ಥೆಗಳಲ್ಲಿ ಅತಿ ಹೆಚ್ಚು ಬೇಡಿಕೆಯನ್ನು ಸಹ ಹೊಂದಿದೆ ಎಂದು ತಿಳಿಸಿದರು. ದಾಖಲಾತಿ ಆಂದೋಲನ ಕಾರ್ಯಕ್ರಮದಲ್ಲಿ ಸಂಸ್ಥೆಯ ಉಪನ್ಯಾಸಕರಾದ ಶಾರದ, ದೀಪಾ, ಸುಜಾತ, ಎನ್.ಮುನಿರಾಜು, ಶಿಕ್ಷಕರು ಹಾಜರಿದ್ದರು. ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಗಾಯತ್ರಿ ವರ್ಗ ಹಾಜರಿದ್ದರು.



**ಪತ್ರಕರ್ತರ ಭವನದಲ್ಲಿ ಸಂಘದ ಅಧ್ಯಕ್ಷ ಬಿ.ವಿ.ಗೋಪಿನಾಥ್ ಅಧ್ಯಕ್ಷತೆ**

# ಕೋಲಾರದಲ್ಲಿ ಡಿ.ವಿ.ಗುಂಡಪ್ಪ ಸ್ಮರಣೆ

**ಕೋಲಾರ:** ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಿಂದ ಕೆ.ಯು.ಡಬ್ಲ್ಯೂ.ಜೆ ಸಂಸ್ಥಾಪಕ ಡಿ.ವಿ.ಗುಂಡಪ್ಪ (ಡಿ.ವಿ.ಜಿ) ಅವರ ಜಯಂತಿಯನ್ನು ನಗರದ ಪತ್ರಕರ್ತರ ಭವನದಲ್ಲಿ ಸಂಘದ ಅಧ್ಯಕ್ಷ ಬಿ.ವಿ.ಗೋಪಿನಾಥ್ ಅಧ್ಯಕ್ಷತೆಯಲ್ಲಿ ಸೋಮವಾರ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಪತ್ರಕರ್ತರು ಡಿವಿಜಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಸ್ಮರಿಸಿದರು.

ಡಿವಿಜಿ ಅವರ ಪ್ರಸಿದ್ಧ ಮಂಕುತಿಮ್ಮನ ಕಗ್ಗ ಸಾಹಿತ್ಯದ ಹುಲ್ಲಾಗು ಬೆಟ್ಟದಡಿ, ಮನೆಗೆ ಮಲ್ಲಿಗೆಯಾಗು, ಕಲ್ಲಾಗು ಕಷ್ಟಗಳ ಮಳೆಯ ವಿಧಿ ಸುರಿಯೆಟ ಬೆಲ್ಲ-ಸಕ್ಕರೆಯಾಗು ದೀನದುರ್ಬಲರಿಂಗೆಟ ಎಲ್ಲರೊಳಗೊಂದಾಗು ಮಂಕುತಿಮ್ಮ ಸೇರಿದಂತೆ ಕೆಲ ಸಾಲುಗಳನ್ನು ವಾಚನ ಮಾಡಿ ಅರ್ಥ ತಿಳಿದುಕೊಳ್ಳಲಾಯಿತು.



ಪತ್ರಕರ್ತ ಕೆ.ಓಂಕಾರ ಮೂರ್ತಿ ಮಾತನಾಡಿ, ಮನಸ್ಸಿನಲ್ಲಿ ಮೂಡುವ ಸಾವಿರಾರು ಪದಗಳನ್ನು ಡಿವಿಜಿ ಕೇವಲ ಮೂರು ಸಾಲಿನಲ್ಲಿ ಕಟ್ಟಿಕೊಡುತ್ತಿದ್ದರು. ಪತ್ರಕರ್ತರಾಗಿ, ಸಾಹಿತಿ, ಕವಿಯಾಗಿ ತಮ್ಮ ಛಾಪು ಮೂಡಿಸಿದ್ದಾರೆ. ಅವರು ಕೋಲಾರ ಜಿಲ್ಲೆಯವರು ಎಂಬುದು ನಮ್ಮೆಲ್ಲರ ಹೆಮ್ಮೆ. ಅವರು ಸ್ಥಾಪಿಸಿದ ಸಂಘ ಇಂದು ಉತ್ತಮ ಕೆಲಸಗಳಲ್ಲಿ ತೊಡಗಿದೆ. ಮತ್ತಷ್ಟು ಉತ್ತಮ ಕೆಲಸಗಳ ಮೂಲಕ ಅವರಿಗೆ ಗೌರವ ಸಲ್ಲಿಸಬೇಕಿದೆ. ಅವರ ಸಾಹಿತ್ಯವನ್ನು ಪತ್ರಕರ್ತರು ಓದಿ ಅರ್ಥೈಸಿಕೊಳ್ಳಬೇಕು ಎಂದ ಅವರು, ಡಿವಿಜಿ ಅವರ ಮಂಕುತಿಮ್ಮನ ಕಗ್ಗ ಜನಪ್ರಿಯ ಕೃತಿ. ಇಂದಿಗೂ ಎಂದೆಂದಿಗೂ ಅನ್ವಯ ಆಗುವ ಕೃತಿ ಎಂದು ಹೇಳಿದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಎಸ್.ಕೆ.ಚಂದ್ರಶೇಖರ್, ರಾಜ್ಯ ಕಾರ್ಯಕಾರಿಣಿ ಸದಸ್ಯರಾದ ಕೆ.ಎಸ್.ಗಣೇಶ್ ಮತ್ತು ವಿ.ಮುನಿರಾಜು, ಹಿರಿಯ ಪತ್ರಕರ್ತರಾದ ಕೆ.ಬಿ.ಜಗದೀಶ್, ಸಿ.ವಿ.ನಾಗರಾಜ್, ಬಿ.ಸುರೇಶ್, ಎಂ.ಡಿ.ಚಾಂದ್‌ಪಾಷ, ಸಚ್ಚಿದಾನಂದ, ಸರ್ವಜ್ಞಮೂರ್ತಿ, ಆಸಿಫ್ ಪಾಷ, ಸ್ಕಂದಕುಮಾರ್, ಕೆ.ಎಸ್.ಸುದರ್ಶನ್, ಎನ್.ಸತೀಶ್, ಮಾಮಿ ಪ್ರಕಾಶ್, ಶಮ್ಗರ್, ಸುನೀಲ್, ವಿಜಿಕುಮಾರ್, ಗೋಪಿ, ಕಾಂಗ್ರೆಸ್ ಮುಖಂಡ ಕೆ.ಜಯದೇವ ಹಾಗೂ ಪತ್ರಕರ್ತರು ಇದ್ದರು.

## ಹೆಚ್ಚಿದ ತಾಪಮಾನ ಸಮಯದಲ್ಲಿ ಮಾವು ಬೆಳೆಯ ನಿರ್ವಹಣಾ ಕ್ರಮಗಳು

**ಕೋಲಾರ:** ಮಾವಿನಲ್ಲಿ ಹೂವು ಬಿಟ್ಟಿರುವಾಗ ಹಾಗೂ ಪರಾಗಸ್ಪರ್ಷ ಸಮಯದಲ್ಲಿ ಯಾವುದೇ ಕಾರಣಕ್ಕೂ ಗಿಡಗಳಿಗೆ ನೀರುಣಿಸಬಾರದು. ಪರಾಗ ಸ್ಪರ್ಷ ಪೂರ್ಣಗೊಂಡು ಕಾಯಿ ಕಚ್ಚಿ, ಕಾಯಿಗಳು ಬಟಾಣಿಯಿಂದ ಗೋಲಿ ಗಾತ್ರದ ಹಂತದಲ್ಲಿದ್ದಾಗ ನೀರುಕೊಡಲು ಪ್ರಾರಂಭಿಸಬೇಕು.

ಮಾವಿನಲ್ಲಿ ಕಾಯಿ ಕಚ್ಚಿ, ಬೆಳವಣಿಗೆ ಹೊಂದಲು ಪ್ರಾರಂಭಿಸಿದ ನಂತರ ಕಾಯಿಗಳ ಉದುರುವಿಕೆಯನ್ನು ತಡೆಯಲು ಹಾಗೂ ಕಾಯಿಗಳ ಉತ್ತಮ ಬೆಳವಣಿಗೆಯನ್ನು ಉತ್ತೇಜಿಸಲು ಸ್ಥಿರವಾದ ಮಧ್ಯಮ ನೀರಾವರಿಯನ್ನು ನೀಡುವುದು ಉತ್ತಮ. ನಿಯಮಿತವಾಗಿ ಮಣ್ಣಿನ ತೇವಾಂಶವನ್ನು ಪರೀಕ್ಷಿಸಿ, ಮರಗಳಿಗೆ ನೀರಿನ ಲಭ್ಯತೆಯನ್ನು ಆಗಾಗೆ ಖಚಿತಪಡಿಸಿಕೊಳ್ಳುವುದು.

ಮಾವಿನಲ್ಲಿ ಕಾಯಿಗಳು ಉದುರದಂತೆ ಕಾಪಾಡಲು ಸಸ್ಯ ಬೆಳವಣಿಗೆ ಪ್ರಚೋದಕವಾದ ಪ್ಲಾನೋಫಿಕ್ಸ್ ಅನ್ನು 0.25 ಮಿ.ಲಿ. ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಿಸುವುದು. ಕಾಯಿಗಳ ಬೆಳವಣಿಗೆ ಹಂತದಲ್ಲಿ ಎರಡು ಬಾರಿ (ಗೋಲಿ ಆಕಾರ ಹಾಗೂ ಲಿಂಬೆ ಆಕಾರ) ಲಘುಪೋಷಕಾಂಶದ ಮಿಶ್ರಣವಾದ ಮಾವು ಸ್ಪೆಶಲ್ ಅನ್ನು ಪ್ರತಿ 10 ಲೀಟರ್ ನೀರಿಗೆ 50 ಗ್ರಾಂ. ನಂತೆ ಬೆರೆಸಿ, ಜೊತೆಗೆ ಒಂದು ಶ್ಯಾಂಪು/ಸೋಪು ದ್ರಾವಣ ಹಾಗೂ ಒಂದು ನಿಂಬೆಹಣ್ಣಿನ ರಸವನ್ನು ಬೆರೆಸಿ ಸಿಂಪರಣೆ ಮಾಡುವುದರಿಂದ ಪರಿಣಾಮಕಾರಿಯಾಗಿ ಕಾಯಿಗಳಿಗೆ ಅಂಟಿಕೊಳ್ಳುತ್ತವೆ. ಕೈಗೆಟುಕುವ ಹಂತದ ಸಣ್ಣ ಕಾಯಿಗಳಿಗೆ ಪೇಪರ್ ಕವರ್ ಹೊದಿಕೆ ಅಳವಡಿಸಿದಲ್ಲಿ ಉತ್ತಮ ಗುಣಮಟ್ಟದ ಹಣ್ಣುಗಳನ್ನು ಪಡೆಯಬಹುದಾಗಿದೆ. ಹಾಗೂ ನೇರ ಮಾರುಕಟ್ಟೆ ಸಂಪರ್ಕ ಹೊಂದಿರುವ ಬೆಳೆಗಾರರಿಗೆ ಇದು ಹೆಚ್ಚು ಲಾಭದಾಯಕವಾಗಿ ಪರಿಣಮಿಸುತ್ತದೆ ಎಂದು ಕೋಲಾರ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಸಾಹಸ ಸಂಸ್ಥೆ ಮತ್ತು ಜ್ಯೂನಿಪರ್ ನೆಟ್ವರ್ಕ್ ಸಹಯೋಗದಲ್ಲಿ ಸ್ವಚ್ಛತೆ



**ಕೋಲಾರ:** ತಾಲ್ಲೂಕಿನ ಅರಭಿಕೊತ್ತನೂರು ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿರುವ ಅರಭಿಕೊತ್ತನೂರು ಗ್ರಾಮದಲ್ಲಿ, ಸಾಹಸ ಸಂಸ್ಥೆ ಮತ್ತು ಜ್ಯೂನಿಪರ್ ನೆಟ್ವರ್ಕ್ ಸಹಯೋಗದಲ್ಲಿ ಒಂದು ಸ್ವಚ್ಛತಾ ಕಾರ್ಯಕ್ರಮವನ್ನು ಜರುಗಿಸಿತು.

ಸ್ಥಳೀಯ ಸಮುದಾಯದೊಳಗಿನ ಜನರಿಗೆ ಘನ ತ್ಯಾಜ್ಯ ಸ್ವಚ್ಛತೆ, ತ್ಯಾಜ್ಯ ವಿಂಗಡಣೆ ಹಾಗೂ ವಿಲೇವಾರಿ ಬಗ್ಗೆ ಅರಿವು ಮೂಡಿಸಲು, ಅವರ ಮನೆಮನೆಗೆ ತೆರಳಿ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಯಿತು.ಈ ಕಾರ್ಯಕ್ರಮವು ತ್ಯಾಜ್ಯ ವಿಂಗಡನೆ ಮತ್ತು ವಿಲೇವಾರಿ ಕುರಿತ ಅರಿವು ನೀಡಲು, ಜನರನ್ನು ಹೆಚ್ಚು ಜವಾಬ್ದಾರಿತ್ವದಿಂದ ನಡವಳಿಕೆ ಮಾಡಿಸುವಂತೆ ಪ್ರೇರೇಪಿಸಿತು.

ಗ್ರಾಮಸ್ಥರಿಗೆ ಕಸದ ಸರಿಯಾದ ವಿಂಗಡಣೆ ಬಗ್ಗೆ ಮತ್ತು ಅದರ ಪರಿಣಾಮಕಾರಿ ನಿರ್ವಹಣೆ ಕುರಿತ ಮಾಹಿತಿಗಳನ್ನು ನೀಡಿ, ಸ್ವಚ್ಛತೆಯನ್ನು ಗುರಿಯಾಗಿಸಿದ ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿದರು.

ಈ ಕಾರ್ಯಕ್ರಮದಲ್ಲಿ, ಗ್ರಾಮದಲ್ಲಿ ಕಸದ ಬ್ಲಾಕ್ ಸ್ಪಾಟ್ಗಳನ್ನು ಪತ್ತೆಹಚ್ಚಿ ಸ್ವಚ್ಛತೆಮಾಡುವ ಕಾರ್ಯ ಕೈಗೊಳ್ಳಲಾಯಿತು. ಈ ಕಾರ್ಯಕ್ರಮದಲ್ಲಿ ಜ್ಯೂನಿಪರ್ ನೆಟ್ವರ್ಕ್ ಮತ್ತು ಸಾಹಸ ಸಂಸ್ಥೆಯ ಸಿಬ್ಬಂದಿಗಳು ಹಾಗೂ ಗ್ರಾಮ ಪಂಚಾಯಿತಿಯ ಸಿಬ್ಬಂದಿಗಳು ಭಾಗವಹಿಸಿದ್ದರು.



**ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಬೆಂಗಳೂರು ನಗರ ಜಿಲ್ಲೆ ಹಾಗೂ ರಾಷ್ಟ್ರೀಯ ವಿಪತ್ತು ನಿರ್ವಹಣಾ ತಂಡ ಸಹಯೋಗದಲ್ಲಿ ಇಂದು ಯಲಹಂಕ ತಾಲೂಕಿನ ಸರ್ಕಾರಿ ಪದವಿ ಕಾಲೇಜು ಆವರಣದಲ್ಲಿ ಆಯೋಜಿಸಲಾಗಿದ್ದ ಕಟ್ಟಡ ಕುಸಿದ ಸಂದರ್ಭದಲ್ಲಿ ಮುಂಜಾಗ್ರತಾ ಕ್ರಮ ಕೈಗೊಳ್ಳುವ ಕುರಿತು ತುರ್ತು ಅಣುಕು ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿತ್ತು. ಇದೆ ಸಂದರ್ಭದಲ್ಲಿ ಬೆಂಗಳೂರು ನಗರ ಅಪರ ಜಿಲ್ಲಾಧಿಕಾರಿಗಳು ಡಾ. ಜಗದೀಶ್ ಕೆ ನಾಯ್ಕ, ಯಲಹಂಕ ತಾಲೂಕಿನ ಸರ್ಕಾರಿ ಪದವಿ ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಗೀತಾ. ಡಿ.ಎನ್, ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಉಪ ಕಮೆಂಡೆಂಟ್ ಅಖಿಲೇಶ್ ಚೌಬೆ, ಅಗ್ನಿಶಾಮಕ ಅಧಿಕಾರಿ ಮಂಜುನಾಥ್, ತಾಲ್ಲೂಕು ಮಟ್ಟದ ಅಧಿಕಾರಿಗಳು ಸೇರಿದಂತೆ ಕಾಲೇಜಿನ ಉಪನ್ಯಾಸಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.**

## ಫ್ಯಾಷನ್ ಹೆಸರಿನಲ್ಲಿ ದುಶ್ಚಟಗಳಿಗೆ ಬಲಿಯಾಗದಿರಿ

**ಬೆಂಗಳೂರು ಗ್ರಾಮಾಂತರ:** ಮಾದಕ ವಸ್ತುಗಳ ವ್ಯಸನ ಮಾನಸಿಕ ಹಾಗೂ ದೈಹಿಕ ಕಾಯಿಲೆಯಾಗಿದ್ದು, ಮಾದಕ ವಸ್ತುಗಳ ಸೇವನೆಗೆ ಒಳಗಾದರೆ ಅದರಿಂದ ಹೊರಬರುವುದು ಕಷ್ಟ. ಇದು ಮಾನವನ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ ಇದರ ವಿರುದ್ಧ ಯುವಜನರಲ್ಲಿ ಅರಿವು ಮೂಡಿಸುವುದು ಅಗತ್ಯವಿದೆ ಎಂದು ದೇವನಹಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಮಂಜಯ್ಯ ಅವರು ತಿಳಿಸಿದರು.

ದೇವನಹಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಜ್ಯ ಮದ್ಯಪಾನ ಸಂಯಮ ಮಂಡಳಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಸಹಯೋಗದಲ್ಲಿ ಆಯೋಜಿಸಿದ್ದ ಮದ್ಯ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಅರಿವು ಜಾಥಾ ಹಾಗೂ ವಿಚಾರ ಸಂಕಿರಣ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಮಾದಕ ವಸ್ತುಗಳ ಸೇವನೆಯಿಂದ ವ್ಯಕ್ತಿಯ ಮೇಲೆ ಮಾನಸಿಕವಾಗಿ, ದೈಹಿಕವಾಗಿ ದುಷ್ಪರಿಣಾಮಗಳು ಉಂಟಾಗುತ್ತವೆ. ಮದ್ಯ, ತಂಬಾಕು, ಬೀಡಿ, ಸಿಗರೇಟ್, ಗುಟ್ಕಾ, ಗಾಂಜಾ, ಅಫೀಮು, ನೋವು ನಿವಾರಕ ಹಾಗೂ ನಿದ್ರಾಜನಕ ಮಾತ್ರೆಗಳು ಮಾದಕ ವಸ್ತುಗಳಾಗಿವೆ. ಇವುಗಳ ಸೇವನೆಯಿಂದ ಮೆದುಳಿನಲ್ಲಿ ಅಸ್ಪಷ್ಟತೆ ಉಂಟಾಗುತ್ತದೆ. ತನ್ನ ಮೇಲೆ ನಿಯಂತ್ರಣ ಕಳೆದುಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗುತ್ತದೆ ಯುವಕರು ಇಂಥ ಚಟಗಳಿಂದ ದೂರವಿರಬೇಕು ಎಂದರು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದ ಕ್ಷೇತ್ರ ಆರೋಗ್ಯ ರಕ್ಷಣಾಧಿಕಾರಿ ಜಯಲಕ್ಷ್ಮಿ ಅವರು ಮಾತನಾಡಿ ಮದ್ಯಪಾನ, ಧೂಮಪಾನದಂತಹ ದುಶ್ಚಟಗಳಿಗೆ ಹದಿಹರೆಯದ ವಯಸ್ಸಿನವರು ಒಳಗಾಗುತ್ತಾರೆ. ಯುವಜನತೆಯು ಸಂತೋಷ, ಗೆಳೆಯರ ಒತ್ತಡ, ನೋವು ನಿವಾರಣೆ ನೆಪ, ಆಧುನಿಕ ಜೀವನ ಶೈಲಿ ಅನುಕರುಣೆ ಮಾಡಲು ವ್ಯಸನಕ್ಕೆ ತುತ್ತಾಗುತ್ತಾರೆ. ಇದರಿಂದ ,ಉದ್ಯೋಗದಲ್ಲಿ ತೊಂದರೆ, ಕೌಟುಂಬಿಕ ಸಮಸ್ಯೆಗಳು, ಆತ್ಮಹತ್ಯೆ, ಕಾನೂನು ಬಾಹಿರ ಕೃತ್ಯಗಳು, ದೈಹಿಕ, ಮಾನಸಿಕ ಕಾಯಿಲೆಗಳು, ರಸ್ತೆ ಅಪಘಾತಗಳು ಸಂಭವಿಸುತ್ತವೆ. ಹೀಗಾಗಿ ಯುವಕರು ಇಂಥ ದುಶ್ಚಟಗಳಿಂದ ದೂರವಿರಬೇಕು ಎಂದರು.

ಕಾರ್ಯಕ್ರಮಕ್ಕೂ ಮುನ್ನ ಮದ್ಯ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತ ಅರಿವು ಜಾಥಾ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪ ನಿರ್ದೇಶಕರಾದ ಅಶೋಕ ಕುಮಾರ್ ಡಿ, ದೈಹಿಕ ಶಿಕ್ಷಕರಾದ ರವಿ ಸೇರಿದಂತೆ ಅಧಿಕಾರಿಗಳು ಮತ್ತು ಕಾಲೇಜು ಉಪನ್ಯಾಸಕರು ಹಾಗೂ ಕಾಲೇಜು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸಾಲು ಗಿಡಗಳಿಗೆ ನೀರು ಹಾಕುವ ಕಾರ್ಯಕ್ಕೆ ಚಾಲನೆ




**ಚಾಮರಾಜನಗರ:** ಬಿಸಿಲಿನ ತಾಪವನ್ನು ಕಡಿಮೆ ಮಾಡಿಕೊಳ್ಳಲು ಗಿಡ,ಮರಗಳನ್ನು ಬೆಳೆಸುವುದು ಪ್ರಸಕ್ತ ಸನ್ನಿವೇಶದಲ್ಲಿ ಅತ್ಯಗತ್ಯವಾಗಿದೆ ಎಂದು ಪತಂಜಲಿ ಯೋಗ ಶಿಕ್ಷಣ ಸಮಿತಿ ಅಧ್ಯಕ್ಷರಾದ ಹೆಚ್. ಜಿ.ಕುಮಾರಸ್ವಾಮಿ ತಿಳಿಸಿದರು.

ನಗರದ ಬಿ.ಆರ್.ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಪತಂಜಲಿ ಯೋಗ ಶಿಕ್ಷಣ ಸಮಿತಿ ಮತ್ತು ಪತಂಜಲಿ ಯೋಗ ಅನ್ವೇಷಣೆ ಕೇಂದ್ರ, ಎನ್. ಎಸ್.ಎಸ್ ಯುನಿಟ್ ವತಿಯಿಂದ ಸಾಲು ಗಿಡಗಳಿಗೆ ನೀರು ಹಾಕುವ ಕಾರ್ಯಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ನಮ್ಮ ಸಂಸ್ಥೆಯು ಯೋಗದ ಶಿಕ್ಷಣದ ಜೊತೆಗೆ ಸಾರ್ವಜಕವಾಗಿ ಅನುಕೂಲವಾಗುವ ನಿಟ್ಟಿನಲ್ಲಿ ವಿವಿಧ ಸೇವೆಗಳನ್ನು ಮಾಡುತ್ತಾ ಬಂದಿದೆ. ಸಾಲುಮರದ ವೆಂಕಟೇಶ್ ಅವರು ನಗರ ಸೇರಿದಂತೆ ವಿವಿದೆಡೆ ಸಾಲುಗಿಡಗಳನ್ನು ಬೆಳೆಸುವ ಕಾರ್ಯ ಮಾಡುತ್ತಿದ್ದಾರೆ. ಈ ಸಾಲು ಗಿಡಗಳು ಬೆಳೆಯಲು ನೀರಿನ ಅಗತ್ಯ ವಿರುತ್ತದೆ. ಆದ್ದರಿಂದ ನಮ್ಮ ಸಮಿತಿ ವತಿಯಿಂದ ಒಂದು ಟ್ಯಾಂಕರ್ ನೀರನ್ನು ಜಿಲ್ಲಾ ಕ್ರೀಡಾಂಗಣದಲ್ಲಿ ಬೆಳೆಸಲಾಗುತ್ತಿರುವ ಗಿಡಗಳಿಗೆ ನೀರಾಕುವ ಕೆಲಸ ಮಾಡುತ್ತಿದ್ದೇವೆ ಎಂದರು.

ಪ್ರತಿಯೊಬ್ಬರು ನಿಮ್ಮ ಮನೆ,ಅಂಗಡಿಗಳ ಮುಂದೆ ಇರುವ ಗಿಡಗಳಿಗೆ ನೀರು ಹಾಕುವ ಮೂಲಕ ಬೆಳೆಸಬೇಕು ಆ ಮೂಲಕ ಉತ್ತಮ ಗಾಳಿ, ವಾತಾವರಣ ಸೃಷ್ಠಿ ಮಾಡಬೇಕು ಎಂದು ಸಲಹೆ ನೀಡಿದರು.

ಸಾಲುಮರದ ವೆಂಕಟೇಶ್ ಮಾತನಾಡಿ, ಬೇಸಿಗೆಯಲ್ಲಿ ಗಿಡಗಳಿಗೆ ಕಡ್ಡಾಯವಾಗಿ ನೀರನ್ನು ಹಾಕಬೇಕಾಗುತ್ತದೆ. ಸಾರ್ವಜನಿಕರು ಪರಿಸರ ಉಳಿಸುವ ನಿಟ್ಟಿನಲ್ಲಿ ನಮ್ಮ ಜೊತೆ ಕೈ ಜೋಡಿಸಬೇಕು ಎಂದು ಮನವಿ ಮಾಡಿದರು.

ಜಿಲ್ಲಾ ಸಂಚಾಲಕ ನಿಜಗುಣ ಮಾತನಾಡಿ ಚಾಮರಾಜನಗರ ಪಟ್ಟಣದಲ್ಲಿ 5,ಶಾಖೆಗಳಲ್ಲಿ ಉಚಿತವಾಗಿ ಯೋಗ ಶಿಕ್ಷಣವನ್ನು ಹೇಳಿಕೊಡಲಾಗುತ್ತಿದೆ. ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ತಿಳಿಸಿದರು. ಪತಂಜಲಿ ಯೋಗ ಶಿಕ್ಷಣ ಸಮಿತಿ ಸದಸ್ಯರಾದ ಲೋಕೇಶ್, ಶ್ರೀಕಾಂತ, ಗೌರಿ, ನಾಗಮಣಿ, ಲಕ್ಷ್ಮಿ, ಅಶ್ವಿನಿ,ನಂದಿನಿ, ಸುಕನ್ಯಾ, ಶುಭ, ಶಂಕರಮ್ಮ, ಮಮತ, ಕಲಾ ಹಾಗೂ ಇನ್ನು ಮುಂತಾದವರು ಇದ್ದರು.

## ಪ.ಪಂಗಡದ ಇಂಜಿನಿಯರಿಂಗ್ ಪದವೀಧರರಿಗೆ ಶಿಷ್ಯವೇತನ/ತರಬೇತಿಗೆ ಅರ್ಜಿ ಆಹ್ವಾನ

**ಬೆಂಗಳೂರು ಗ್ರಾಮಾಂತರ :** ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ IISC, IIT ಮತ್ತು NIT ಮೂಲಕ Artitifical Inteligence and Machine Learning ವೃತ್ತಿಪರ ತರಬೇತಿ ಕೋರ್ಸ್ ಗಳಲ್ಲಿ ಭಾಗವಹಿಸುವ ಪರಿಶಿಷ್ಟ ಪಂಗಡದ 200 ಇಂಜಿನಿಯರಿಂಗ್ ಪದವೀಧರರಿಗೆ ಶಿಷ್ಯವೇತನ/ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

6 ರಿಂದ 12 ತಿಂಗಳ ಅವಧಿಯ ವೃತ್ತಿಪರ ತರಬೇತಿ ಕೋರ್ಸ್ ಗಳಲ್ಲಿ ಭಾಗವಹಿಸುವ ಪರಿಶಿಷ್ಟ ಪಂಗಡದ 200 ಇಂಜಿನಿಯರಿಂಗ್ ಪದವೀಧರರಿಗೆ ಮಾಸಿಕ ರೂ.15.000/-ಗಳ ಶಿಷ್ಯವೇತನ /ತರಬೇತಿ ನೀಡುವ ಸಂಬಂಧ ಪರಿಶಿಷ್ಟ ಪಂಗಡದ ಯುವಕ/ಯುವತಿಯರಿಗೆ ಶಿಷ್ಯವೇತನ ನೀಡಲಾಗುತ್ತದೆ.

ಅಭ್ಯರ್ಥಿಯು ಕರ್ನಾಟಕ ರಾಜ್ಯದ ಮೂಲ ನಿವಾಸಿಯಾಗಿರಬೇಕು ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು. ರಾಜ್ಯ/ಕೇಂದ್ರ ಸರ್ಕಾರದಿಂದ ಮಾನ್ಯತೆ ಪಡೆದಿರುವ ವಿಶ್ವವಿದ್ಯಾಲಗಳಲ್ಲಿ ಬಿ.ಇ/ಬಿ.ಟೆಕ್ ಕೋರ್ಸ್ಗಳನ್ನು ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು ಶಿಷ್ಯವೇತನಕ್ಕೆ ಅರ್ಹರಾಗಿರುತ್ತಾರೆ. ಯೋಜನೆಯಡಿ ಶಿಷ್ಯವೇತನ ಪಡೆಯಲು ಪದವಿ ಪೂರೈಸಿದ 5 ವರ್ಷದ ಒಳಗೆ ಅರ್ಜಿಯನ್ನು ಸಲ್ಲಿಸತಕ್ಕದ್ದು. ಅಭ್ಯರ್ಥಿಯು ಬಿ.ಇ/ಬಿ. ಟೆಕ್ ಕೋರ್ಸ್ಗಳಲ್ಲಿ ಕನಿಷ್ಟ ಶೇ.55% ರಷ್ಟು ಕಡ್ಡಾಯವಾಗಿ ಅಂಕ ಗಳಿಸಿರಬೇಕು ಕೋರ್ಸ್ ಅವಧಿಯು ಗರಿಷ್ಠ 2 ವಾರಗಳಾಗಿರುತ್ತದೆ. ಅಭ್ಯರ್ಥಿಯ ಕುಟುಂಬ ಆದಾಯ ರೂ.5.00 ಲಕ್ಷಗಳನ್ನು ಮೀರಿರಬಾರದು. ಮೂಲನಿವಾಸಿ ಮತ್ತು ಅಲೆಮಾರಿ/ ಅರೆ ಅಲೆಮಾರಿ ಸೂಕ್ಷ್ಮ/ ಅತೀ ಸೂಕ್ಷ್ಮ ಪರಿಶಿಷ್ಟ ಪಂಗಡದ ಸಮುದಾಯದ ವಿದ್ಯಾರ್ಥಿಗೆ ಪ್ರಥಮ ಆದ್ಯತೆ ನೀಡಲಾಗುತ್ತದೆ. IISc IIT ಮತ್ತು NITಸಂಸ್ಥೆಗಳ ಹೊರತುಪಡಿಸಿ ಬೇರೆ ವಿದ್ಯಾಸಂಸ್ಥೆಗಳಲ್ಲಿ ತರಬೇತಿ ಪಡೆಯಲು ಅಭ್ಯರ್ಥಿಗಳಿಗೆ ಶಿಷ್ಯವೇತನ ಪಡೆಯಲು ಅರ್ಹರಿರುವುದಿಲ್ಲ. ಅರ್ಜಿ ಸಲ್ಲಿಸಲು ಆನ್ಲೈನ್ ಮುಖಾಂತರ ಅವಕಾಶವಿರುವುದಿಲ್ಲ. ಅರ್ಜಿ ಸಲ್ಲಿಸಲು ಕೊನೆಯ ಏಪ್ರಿಲ್ 11 ಕೊನೆಯ ದಿನ, ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಅರ್ಜಿ ನಮೂನೆ ಮತ್ತು ವಿವರಗಳನ್ನು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ದೂ ಸಂ- 080-29787448 ಹಾಗೂ ಆಯಾ ತಾಲ್ಲೂಕಿನ ಸಹಾಯಕ ನಿರ್ದೇಶಕರ ಕಛೇರಿ, ಸಮಾಜ ಕಲ್ಯಾಣ ಇಲಾಖೆ ದೇವನಹಳ್ಳಿ, ದೊಡ್ಡಬಳ್ಳಾಪುರ, ಹೊಸಕೋಟೆ ಹಾಗೂ ನೆಲಮಂಗಲ ತಾಲ್ಲೂಕುಗಳಲ್ಲಿ ಪಡೆಯಬಹುದಾಗಿದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಜೆ ಟಿಪ್ಸ್

## ತಡೆರಹಿತ ನೆಟ್ ವರ್ಕ್ ನೀಡಲು ಮುಂದಾದ ಏರ್‌ಟೆಲ್

ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್) ಪಂದ್ಯಗಳ ತಯಾರಿಯ ನಿಟ್ಟಿನಲ್ಲಿ, ಭಾರ್ತಿ ಏರ್ಟೆಲ್ ಅವರು ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಸಮಗ್ರ ವ್ಯವಸ್ಥೆಗಳನ್ನು ಮಾಡಿದ್ದಾರೆ. ಇವರ ಈ ಪ್ರಯತ್ನಗಳು ಪಂದ್ಯಗಳ ಸಮಯದಲ್ಲಿ ಸೇರಬಹುದಾದ ಸುಮಾರು 100,000 ಕ್ರಿಕೆಟಿಂಗ್ ಅಭಿಮಾನಿಗಳ ನಿರೀಕ್ಷಿತ ಗುಂಪಿಗೆ ತಡೆರಹಿತ ನೆಟ್‌ವರ್ಕ್ ಅನುಭವ ಒದಗಿಸುವುದನ್ನು ಖಚಿತಪಡಿಸುತ್ತದೆ.

ಏರ್ಟೆಲ್, ಕ್ರೀಡಾಂಗಣದ ಸುತ್ತಲೂ ಅಸ್ತಿತ್ವದಲ್ಲಿರುವ ತನ್ನ ಎಲ್ಲಾ ತಾಣಗಳ ಪ್ರಸಾರ ಕ್ಷಮತೆಯನ್ನು ವರ್ಧಿಸಿದೆ ಹಾಗೂ ಕ್ರೀಡಾಂಗಣದ ಒಳಗಿನ ಎರಡು ಸೆಲ್ ಆನ್ ವೀಲ್ಸ್ (ಫಾಔಖ) ತಾಣಗಳೊಂದಿಗೆ ಒಂದು ಮ್ಯಾಕ್ರೋವನ್ನು ಆಯಕಟ್ಟಿನ ಸ್ಥಳದಲ್ಲಿ ಸ್ಥಾಪಿಸಿದೆ. ಈ ವರ್ಧನೆಯು ಪಂದ್ಯಗಳಿಗೆ ಹಾಜರಾಗುವ ಏರ್‌ಟೆಲ್ ಗ್ರಾಹಕರಿಗೆ ಧ್ವನಿ ಮತ್ತು ಡೇಟಾ ಸಂಪರ್ಕವನ್ನು ಗಮನಾರ್ಹವಾಗಿ ಸುಧಾರಿಸುತ್ತದೆ. ಹೆಚ್ಚಿನ ಪ್ರಮಾಣದ ಪ್ರೇಕ್ಷಕರು ಬರುವ ನಿರೀಕ್ಷೆ ಇದ್ದು, ಅದಕ್ಕೆ ಅನುಗುಣವಾಗಿ ನೆಟ್‌ವರ್ಕ್ ನವೀಕರಣಗಳನ್ನು ಕಾರ್ಯತಂತ್ರದ ಒಂದು ಭಾಗವಾಗಿ ಯೋಜಿಸಲಾಗಿದೆ.

ಸದರಿ ಸಿದ್ಧತೆಯ ಕುರಿತು ಮಾತನಾಡಿದ ರಜನೀಶ್ ವರ್ಮಾ, ಭಾರ್ತಿ ಏರ್‌ಟೆಲ್, ಕರ್ನಾಟಕ ಅವರು ತಿಳಿಸಿದರು ಎಂ.ಚಿನ್ನಸ್ವಾಮಿ ಕ್ರೀಡಾಂಗಣವು ಬಹುನಿರೀಕ್ಷಿತ ಕ್ರಿಕೆಟ್ ಪಂದ್ಯಾವಳಿಯನ್ನು ಆಯೋಜಿಸಲು ತಯಾರುಗೊಳ್ಳುತ್ತಿದ್ದಂತೆ, ನಿರೀಕ್ಷಿತ ಪ್ರೇಕ್ಷಕರನ್ನು ನಿರ್ವಹಿಸುವ ಸಲುವಾಗಿ ನಾವು ನಮ್ಮ ಮೊಬೈಲ್ ನೆಟ್‌ವರ್ಕ್ ಅನ್ನು ಬಲಪಡಿಸಿದ್ದೇವೆ. ಪ್ರೇಕ್ಷಕರು ತಡೆರಹಿತ ಸಂಪರ್ಕವನ್ನು ಎದುರುನೋಡಬಹುದು, ಅವುಗಳ ಮೂಲಕ ಸಂಪರ್ಕ ಮಾಡಬಹುದು ಹಾಗೂಉತ್ಸಾಹವನ್ನು ಲೈವ್ ಆಗಿ ಹಂಚಿಕೊಳ್ಳಬಹುದು.

## ನಿಮಗಿದು ಗೊತ್ತೇ?

ಎಂ. ವೆಂಕಟೇಶ್ ಶೇಷಾದ್ರಿ

61. 'ಹಯವದನ' ಅಂಕಿತನಾಮವನ್ನು ಹೊಂದಿದ್ದ ಖ್ಯಾತ ಕೀರ್ತನಕಾರರ ಹೆಸರೇನು ?

## ಪಾಕ ಶಾಲೆ

## ಟೊಮೆಟೊ ಸಲಾಡ್



### ಬೇಕಿರುವ ಸಾಮಗ್ರಿ

1 ದೊಡ್ಡ ಈರುಳ್ಳಿ, 2 ದೊಡ್ಡ ಟೊಮ್ಯಾಟೊ, 1 ಚಮಚ ಕತ್ತರಿಸಿದ ಕೊತ್ತಂಬರಿ ಸೊಪ್ಪು, ಸಣ್ಣಗೆ ಹೆಚ್ಚಿದ ಹಸಿರು ಮೆಣಸಿನಕಾಯಿ, ರುಚಿಗೆ ತಕ್ಕಷ್ಟು ಉಪ್ಪು, 2 ಟೀಸ್ಪೂನ್ ಎಣ್ಣೆ, 1 ಕೆಂಪು ಮೆಣಸಿನಕಾಯಿ, 1/4 ಟೀಸ್ಪೂನ್ ಸಾಸಿವೆ.

### ಮಾಡುವ ವಿಧಾನ

ಈರುಳ್ಳಿಯನ್ನು ನುಣ್ಣಗೆ ಕತ್ತರಿಸಿ ಒಂದು ಪಾತ್ರೆಯಲ್ಲಿ ತೆಗೆದುಕೊಳ್ಳಿ. ಸಣ್ಣಗೆ ಹೆಚ್ಚಿದ ಟೊಮೆಟೊ ಸೇರಿಸಿ. ಸಣ್ಣಗೆ ಹೆಚ್ಚಿದ ಕೊತ್ತಂಬರಿ ಸೊಪ್ಪು, ಹಸಿರು ಮೆಣಸಿನಕಾಯಿ ಮತ್ತು ಉಪ್ಪು ಸೇರಿಸಿ. ಚೆನ್ನಾಗಿ ಮಿಶ್ರಣ ಮಾಡಿ ಎಣ್ಣೆ, ಕೆಂಪು ಮೆಣಸಿನಕಾಯಿ ಮತ್ತು ಸಾಸಿವೆ ಸೇರಿಸಿ ಒಗ್ಗರಣೆ ಮಾಡಿಕೊಳ್ಳಿ. ಬಿಸಿ ಅನ್ನದೊಂದಿಗೆ ಬಡಿಸಿ ಅಥವಾ ನಿಮ್ಮ ಊಟದ ಜೊತೆಗೆ ತಾಜಾ ಬಟ್ಟಲು ಸಲಾಡ್ ಸೇವಿಸಿ.

## ರಿಲಯನ್ಸ್ ಟ್ರೆಂಡ್ಸ್ ಸಮ್ಮರ್ ಕಲೆಕ್ಷನ್ ಬಿಡುಗಡೆ ಮಾಡಿದ ಸೂಪರ್‌ಸ್ಟಾರ್ ಮಹೇಶ್ ಬಾಬು, ಪುತ್ರಿ ಸಿತಾರಾ



ಭಾರತದ ಪ್ರಮುಖ ಫ್ಯಾಷನ್ ತಾಣ ರಿಲಯನ್ಸ್ ಟ್ರೆಂಡ್ಸ್ ಹೊಸ ಸಮ್ಮರ್-ಒಕೇಶನ್ ಉಡುಪು ಕಲೆಕ್ಷನ್ ಅನ್ನು ಬಿಡುಗಡೆ ಮಾಡಿದೆ. ಈ ಹೊಸ ಕಲೆಕ್ಷನ್‌ನಲ್ಲಿ ಸೂಪರ್ ಸ್ಟಾರ್ ಮಹೇಶ್ ಬಾಬು ಮತ್ತು ಅವರ ಪುತ್ರಿ ಸಿತಾರಾ ಕಾಣಿಸಿಕೊಂಡಿದ್ದಾರೆ. ಈ ಬೇಸಿಗೆ ಮತ್ತು ರಜೆ ಸೀಸನ್‌ನಲ್ಲಿ ಕುಟುಂಬದ ಎಲ್ಲರಿಗೂ ಹೊಂದಿಕೆಯಾಗುವ ಉಡುಪುಗಳು ಈ ಕಲೆಕ್ಷನ್‌ನಲ್ಲಿವೆ.

ಈ ಹೊಸ ಕಲೆಕ್ಷನ್ ಅನ್ನು ಪ್ರಚಾರ ಮಾಡುವುದಕ್ಕಾಗಿ ರಿಲಯನ್ಸ್ ಟ್ರೆಂಡ್ಸ್ ಹೊಸ ಅಭಿಯಾನ 'ನ್ಯೂ ಟೈಮ್ಸ್. ನ್ಯೂ ಟ್ರೆಂಡ್ಸ್' ಎಂಬ ಥೀಮ್ ಅನ್ನು ಸೃಜಿಸಿದೆ. ಹೊಸ ಕಲೆಕ್ಷನ್‌ನಲ್ಲಿರುವ ಉಡುಪುಗಳನ್ನು ಪ್ರದರ್ಶಿಸಲಾಗುತ್ತದೆ. ಅಲ್ಲದೆ, ಬ್ರ್ಯಾಂಡ್‌ನ ಹೊಸ ಲುಕ್, ಫೀಲ್ ಮತ್ತು ಆಟಿಟ್ಯೂಡ್ ಅನ್ನು ಇದು ಪ್ರದರ್ಶಿಸಲಿದೆ.

ಅಷ್ಟೇ ಅಲ್ಲ, ಸೂಪರ್ ಸ್ಟಾರ್ ಮಹೇಶ್ ಬಾಬು ಮತ್ತು ಅವರ ಪುತ್ರಿ ಸಿತಾರಾ ಅವರನ್ನೊಳಗೊಂಡ ಹೊಸ ವೀಡಿಯೋ ಜಾಹೀರಾತನ್ನೂ ಕೂಡಾ ಬಿಡುಗಡೆ ಮಾಡಿದೆ. ಇದರಲ್ಲಿ ಕೂಲ್ ಕಲೆಕ್ಷನ್ಸ್, ವಾವ್ ವೆಸ್ಟರ್ನ್ಸ್ ಮತ್ತು ಪಾರ್ಟಿ ಎಥ್ನಿಕ್ಸ್ ಕಲೆಕ್ಷನ್‌ಗಳನ್ನು ಪ್ರದರ್ಶಿಸಲಾಗಿದೆ. ಹೊಸ ಕಲೆಕ್ಷನ್‌ನಲ್ಲಿ ಭಾರತದ ಸಾಂಪ್ರದಾಯಿಕ ಶ್ರೀಮಂತಿಕೆಯು ಪ್ರದರ್ಶನಗೊಂಡಿದೆ. ಬೇಸಿಗೆ ಮತ್ತು ರಜೆಗಾಗಿ ವಿಶಿಷ್ಟ ಶಾಪಿಂಗ್ ಅನುಭವವನ್ನು ಇದು ನೀಡಲಿದೆ. ಅಷ್ಟೇ ಅಲ್ಲ, ಇಡೀ ವರ್ಷವೂ ರಿಲಯನ್ಸ್ ಟ್ರೆಂಡ್‌ನಲ್ಲಿ ಶಾಪಿಂಗ್ ಮಾಡುವುದಕ್ಕೆ ಅತ್ಯಂತ ಆಹ್ಲಾದಕರವಾಗಿರುತ್ತದೆ. ಯಾಕೆಂದರೆ, ಇಲ್ಲಿ ವಿವಿಧ ಶ್ರೇಣಿಯ ಕಲೆಕ್ಷನ್‌ಗಳಿದ್ದು, ಎಲ್ಲ ಸನ್ನಿವೇಶ ಮತ್ತು ಸೀಸನ್‌ಗೆ ಸೂಕ್ತವಾದ ಉಡುಪುಗಳಿವೆ. ಉತ್ತಮ ಗುಣಮಟ್ಟ ಹಾಗೂ ಅನ್ವೇಷಣೆಗೆ ಹೆಚ್ಚಿನ ಒತ್ತು ನೀಡಿರುವ ರಿಲಯನ್ಸ್ ಟ್ರೆಂಡ್ಸ್ ಫ್ಯಾಷನ್ ಉದ್ಯಮದಲ್ಲಿ ಹೊಸ ಮಾನದಂಡವನ್ನು ನಿರ್ಮಿಸಿದೆ. ರಿಲಯನ್ಸ್ ಸ್ಟೋರ್‌ನಲ್ಲಿ ಪುರುಷರು, ಮಹಿಳೆಯರು ಮತ್ತು ಮಕ್ಕಳ ವಿಭಾಗದಲ್ಲಿ, ಆಧುನಿಕ ಹಾಗೂ ಸಾಂಪ್ರದಾಯಿಕ ಸೇರಿದಂತೆ ವಿವಿಧ ರೀತಿಯ ಉಡುಪುಗಳಿವೆ.




## ಹೆಲ್ತ್ ಟಿಪ್ಸ್

## ಬೇವಿನ ಪ್ರಯೋಜನ



ಬೇವಿನ ಎಲೆಗಳಲ್ಲಿ ಪ್ರಬಲ ಬ್ಯಾಕ್ಟೀರಿಯಾ ನಿರೋಧಕ ಗುಣಗಳಿವೆ. ಇದು ಸೋಂಕುಗಳು, ಉರಿಯೂತ ಮತ್ತು ಯಾವುದೇ ರೀತಿಯ ಚರ್ಮದ ಸಮಸ್ಯೆಗಳಿಗೆ ಅದ್ಭುತವಾದ ಶಮನ ನೀಡುತ್ತದೆ. ಕೀಟಗಳ ಕಡಿತ, ತುರಿಕೆ, ಎಕ್ಸಿಮಾ, ಹುಳಕಡ್ಡಿ ಮತ್ತು ಕೆಲವು ಸೌಮ್ಯ ಚರ್ಮದ ಕಾಯಿಲೆಗಳಿಗೆ ಚಿಕಿತ್ಸೆ ನೀಡಲು ಬೇವಿನ ಎಲೆಗಳು ಮತ್ತು ಅರಿಶಿನ ಅರೆದ ಲೇಪವನ್ನು ಬಳಸಬಹುದಾದರೂ, ಎಲೆಗಳನ್ನು ಅಗಿಯುವುದರಿಂದ ನಿಮಗೆ ಹೆಚ್ಚಿನ ಪೋಷಣೆ, ಶುದ್ಧೀಕರಿಸಿದ ಮತ್ತು ಕಾಂತಿಯುಕ್ತ ತ್ವಚೆಯನ್ನು ಪಡೆಯಬಹುದು. ನೀಡುತ್ತದೆ.

ಒಂದು ವೇಳೆ ಕಹಿ ನಿಮಗೆ ಸಹಿಸಲು ಇಷ್ಟವಿಲ್ಲದಿದ್ದರೆ, ಅವುಗಳನ್ನು ಜೇನುತುಪ್ಪದೊಂದಿಗೆ ಬೆರೆಸಿ ಬೇವಿನ ಎಲೆಗಳನ್ನು ಕುದಿಸಿ ದ್ರಾವಣವನ್ನು ಮಾಡಿ ಮತ್ತು ತಿಳಿ ನೀರನ್ನು ಕುಡಿಯಿರಿ. ಇದು ನಿಮ್ಮ ಮೊಡವೆ ಮತ್ತು ಗಾಢ ಕಲೆಗಳ ಸಮಸ್ಯೆಗಳಿಗೂ ಚಿಕಿತ್ಸೆ ನೀಡುತ್ತದೆ.

ಬೇವಿನ ಎಲೆಗಳನ್ನು ಅಗಿಯುವುದರಿಂದ ನಿಮ್ಮ ಕೂದಲಿಗೂ ಹೆಚ್ಚಿನ ಪ್ರಯೋಜನ ದೊರಕುತ್ತದೆ. ಬೇವಿನಲ್ಲಿ ಅಧಿಕ ಪ್ರಮಾಣದ ಆಂಟಿಆಕ್ಸಿಡೆಂಟ್‌ಗಳಿವೆ. ಕ್ಯಾನ್ಸರ್ ಕಾರಕ ಫ್ರೀ ರ್‍ಯಾಡಿಕಲ್ ಎಂಬ ಕಣಗಳಿಂದ ಉಂಟಾಗುವ ಉತ್ಕರ್ಷಣಶೀಲ ಒತ್ತಡದಿಂದ ನೆತ್ತಿಯನ್ನು ರಕ್ಷಿಸುತ್ತದೆ.

ಬೇವಿನ ಎಲೆಗಳು ಆರೋಗ್ಯಕರ ಕೋಶ ವಿಭಜನೆಯನ್ನು ಉತ್ತೇಜಿಸುತ್ತದೆ ಮತ್ತು ನಿಮ್ಮ ನೆತ್ತಿಯ ಪ್ರದೇಶದ ಸುತ್ತಲಿನ ಕೂದಲುಗಳ ಬುಡದಿಂದ ಕೂದಲ ಬೆಳವಣಿಗೆಯನ್ನು ಬೆಂಬಲಿಸುತ್ತದೆ. ನಿಮ್ಮ ಕೂದಲನ್ನು ಬೇಯಿಸಿದ ಬೇವಿನ ನೀರಿನಿಂದ ತೊಳೆಯುವ ಮೂಲಕ ತಲೆಹೊಟ್ಟು ಮತ್ತು ಅಪೌಷ್ಟಿಕತೆ, ಘಾಸಿಗೊಂಡ ಕೂದಲನ್ನು ಸರಿಪಡಿಸುವುದು ಒಂದು ಸಾಂಪ್ರದಾಯಿಕ ವಿಧಾನವಾಗಿದೆ.

ಬೇವಿನ ಎಲೆಗಳು ಶಿಲೀಂಧ್ರ ನಿರೋಧಕ ಗುಣಲಕ್ಷಣಗಳನ್ನು ಹೊಂದಿವೆ, ಇದು ತಲೆಹೊಟ್ಟಿಗೆ ಕಾರಣವಾಗುವ ಮಲಸೆಜಿಯಾ ಎಂಬ ಶಿಲೀಂಧ್ರಗಳ ವಿರುದ್ಧ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುತ್ತದೆ. ಇದರ ಅಪಾರ ಗುಣಪಡಿಸುವ ಗುಣಲಕ್ಷಣಗಳಿಂದಾಗಿ ಬೇವಿಗೆ ತಲೆಗೂದಲ ರಕ್ಷಕ ಎಂಬ ಅನ್ವರ್ಥನಾಮವನ್ನೂ ನೀಡಿದೆ.

ಬೇವಿನ ಎಲೆಗಳು ಕಣ್ಣಿಗೆ ಹೇಗೆ ಒಳ್ಳೆಯದು ಎಂಬುದನ್ನು ಆಯುರ್ವೇದ ಹೀಗೆ ವಿವರಿಸುತ್ತದೆ. ಬೇವಿನ ಜಗಿಯುವಿಕೆಯಿಂದ ನಿಮ್ಮ ದೃಷ್ಟಿ ಸುಧಾರಿಸುತ್ತದೆ. ಯಾವುದೇ ರೀತಿಯ ಕಿರಿಕಿರಿ, ದಣಿವು ಅಥವಾ ಕೆಂಪಗಾಗಿರುವ ಕಣ್ಣುಗಳಿಗೆ ಚಿಕಿತ್ಸೆ ನೀಡಲು ನೀವು ಕೆಲವು ಬೇವಿನ ಎಲೆಗಳನ್ನು ಕುದಿಸಿ, ಉರಿ ಆರಿಸಿ ನೀರು ಸಂಪೂರ್ಣವಾಗಿ ತಣ್ಣಗಾಗಲು ಬಿಡಿ ಮತ್ತು ನಂತರ ಅದನ್ನು ಬಳಸಿ ನಿಮ್ಮ ಕಣ್ಣುಗಳನ್ನು ತೊಳೆಯಿರಿ.

## ಮುಖದ ಆರೈಕೆಗೆ ನಿಂಬೆಹಣ್ಣು

### ಬ್ಯೂಟಿ ಟಿಪ್ಸ್



**ಸತ್ತ ಚರ್ಮವನ್ನು ತೆಗೆದು ಹಾಕುವುದು:** ನಿಂಬೆ ರಸವು ಗ್ಲೈಕೋಲಿಕ್ ಆಮ್ಲದಂತಹ ಆಲ್ಫಾ- ಹೈಡ್ರಾಕ್ಸಿ ಆಮ್ಲಗಳನ್ನು ಹೊಂದಿರುತ್ತದೆ. ಈ ಆಮ್ಲಗಳು ಜೀವಕೋಶಗಳ ಉತ್ಪಾದನೆಯನ್ನು ಹೆಚ್ಚಿಸುವುದರಿಂದ ಹಾಗೂ ಸತ್ತ ಕೋಶಗಳನ್ನು ಹೊರಹಾಕುವುದರಿಂದ ಇವನ್ನು ಸಾಮಾನ್ಯವಾಗಿ ತ್ವಚೆಯ ಆರೈಕೆಯಲ್ಲಿ ಬಳಸಲಾಗುತ್ತದೆ. ಹೀಗಾಗಿ ತ್ವಚೆಯ ಕಾಂತಿಯನ್ನು ಹೆಚ್ಚಿಸಲು ಅನೇಕರು ನಿಂಬೆರಸವನ್ನೇ ಬಳಸುತ್ತಾರೆ.

**ಮೊಡವೆ ನಿವಾರಕ:** ನಿಂಬೆ ರಸವು ಅದರಲ್ಲಿರುವ ಆಮ್ಲೀಯ ಮಟ್ಟದ ಕಾರಣದಿಂದ ಸಂಕೋಚನ ಗುಣಗಳನ್ನು ಹೊಂದಿದೆ. ಕಡಿಮೆ ಪಿಎಚ್ ಮಟ್ಟ ಹೊಂದಿರುವ ವಸ್ತುಗಳು ಉರಿಯೂತ ಮತ್ತು ಮೊಡವೆಗಳಿಗೆ ಕಾರಣವಾಗಬಲ್ಲ ಜಿಡ್ಡಿನ ಅಂಶವನ್ನು ಕಡಿಮೆ ಮಾಡುತ್ತವೆ. ಅಲ್ಲದೆ ಒಂದು ರೀತಿಯ ಅಲ್ಫಾ ಹೈಡ್ರಾಕ್ಸಿ ಆಸಿಡ್ ಆಗಿರುವ ಸಿಟ್ರಿಕ್ ಆ?ಯಸಿಡ್, ಮೊಡವೆಗಳಿಗೆ ಕಾರಣವಾಗಬಲ್ಲ ಸತ್ತ ಜೀವಕೋಶಗಳನ್ನು ಹೊರಹಾಕುತ್ತದೆ.

ಕೊಲಾಜೆನ್ ಉತ್ಪಾದನೆಯನ್ನು ಹೆಚ್ಚಿಸುತ್ತದೆ:ತ್ವಚೆಯ ರಚನೆಯಲ್ಲಿನ ಮುಖ್ಯ ಪ್ರೋಟೀನ್ ಆಗಿರುವ ಕೊಲಾಜೆನ್ ತಯಾರಾಗಲು ಶರೀರಕ್ಕೆ ವಿಟಮಿನ್ ಸಿ ಬಹಳ ಅಗತ್ಯವಿದೆ. ವಿಟಮಿನ್ ಸಿ ಭರಿತ ಪದಾರ್ಥಗಳನ್ನು ಹೆಚ್ಚಾಗಿ ಸೇವಿಸುವುದರಿಂದ ನಿಮ್ಮ ದೇಹಕ್ಕೆ ಪೋಷಕಾಂಶ ದೊರೆತು ಕೊಲಾಜೆನ್ ಉತ್ಪಾದನೆಗೆ ಸಹಾಯವಾಗುತ್ತದೆ.

ಕಪ್ಪುಕಲೆಗಳು ಅಥವಾ ಕೂದಲುಗಳ ಹೋಳೆಯುವಿಕೆ:ಸಿಟ್ರಸ್ ಹಣ್ಣಾದ ನಿಂಬೆಹಣ್ಣು ಮುಖದ ಮೇಲೆ ವಯಸ್ಸಿನ ಸುಕ್ಕು, ಕಲೆಗಳಾಗುವುದನ್ನು ಕಡಿಮೆ ಮಾಡುತ್ತದೆ ಹಾಗೂ ಮುಖದ ಮೇಲೆ ರೋಮಗಳು ಬೆಳೆಯದಂತೆ ಮಾಡುತ್ತದೆ.

ಹೊಟ್ಟು ನಿವಾರಣೆ:ತಲೆಯಲ್ಲಿನ ಹೊಟ್ಟು ನಿವಾರಣೆಗಾಗಿ ನಿಂಬೆಹಣ್ಣನ್ನು ಹಲವಾರು ವರ್ಷಗಳಿಂದ ಬಳಸಲಾಗುತ್ತಿದೆ. ತಲೆ ಹೊಟ್ಟಿನಿಂದ ತ್ವಚೆಯ ಮೇಲಾಗುವ ಕಲೆಗಳನ್ನು ಸಹ ನಿಂಬೆ ರಸ ಹೋಗಲಾಡಿಸಬಲ್ಲದು.

**ಆಂಟಿ ಆಕ್ಸಿಡೆಂಟ್‌ಗಳಿಂದ ಸಮೃದ್ಧ:** ವಿಟಮಿನ್ ಸಿ ಪ್ರಬಲವಾದ ಆಂಟಿ ಆಕ್ಸಿಡೆಂಟ್ ಆಗಿದೆ. ಅಂದರೆ ಇದು ಆಕ್ಸಿಡೇಟಿವ್ ಒತ್ತಡದ ವಿರುದ್ಧ ಹೋರಾಡಲು ಸಹಾಯ ಮಾಡುತ್ತದೆ. ಆಕ್ಸಿಡೇಟಿವ್ ಒತ್ತಡವು ಉರಿಯೂತ, ಕುಗ್ಗುವಿಕೆ ಮತ್ತು ವೇಗವಾಗಿ ಚರ್ಮದ ವಯಸ್ಸಾಗುವಿಕೆಗೆ ಕಾರಣವಾಗಬಹುದಾದ್ದರಿಂದ ನಿಂಬೆ ಹಣ್ಣಿನ ಈ ಗುಣ ಗಮನಾರ್ಹವಾಗಿದೆ. ನಿಂಬೆ ರಸ ವಿಟಮಿನ್ ಸಿ ಹೊಂದಿರುವುದರಿಂದ ಈ ಪರಿಣಾಮಗಳನ್ನು ತಡೆಯಲು ಸಹಾಯ ಮಾಡುತ್ತದೆ.

## ಏಕತ್ವಂ ಹೋಳಿ ಸಂಗೀತ ಉತ್ಸವ







ಸಂಗೀತದಲ್ಲಿ ಮಹಿಳೆಯರ ಆಚರಣೆ.ಏಕತ್ವಂ ಹೋಳಿ ಸಂಗೀತ ಉತ್ಸವ 2025, ಅಸಾಧಾರಣ ಮಹಿಳಾ ಕಲೆಯನ್ನು ಪ್ರದರ್ಶಿಸುವ ಎಲ್ಲಾ ಮಹಿಳಾ ಕಲಾವಿದರ ಸಾಲನ್ನು ಒಳಗೊಂಡಿದೆ.

ಈ ಉತ್ಸವದ ಸೀಸನ್ ಕಲಾವಿದರಾದ ಎಚ್ ಅಮೃತ ಶೆಣೈ, ದೇಬೊಪ್ರಿಯಾ ಚಟರ್ಜಿ, ಸುಚಿಸ್ಮಿತಾ, ಕಲ್ಪನಾ ಕಿಶೋರ್, ಶ್ರೇಯಾ ಕೊಳತ್ತಾಯ, ಶ್ರೀಜಾ ರಾಜೇಂದ್ರನ್, ಶ್ರೀ ರಂಜನಿ ಸಂತಾನಗೋಪಾಲನ್, ಸಂಗೀತ ಕಟ್ಟಿ ಕುಲಕರ್ಣಿ ಮತ್ತು ಕಂಚನಾ ಸಹೋದರಿಯರನ್ನು ಪ್ರಸ್ತುತಪಡಿಸುತ್ತದೆ.

ಏಕತ್ವಂ, ಎಂಟ್ರಸ್ಟ್ ಫೌಂಡೇಶನ್ ಉಪಕ್ರಮ, ಉದಯೋನ್ಮುಖ ಕಲಾವಿದರಿಂದ ಹಿಡಿದು ಮಾಸ್ಟರ್ಸ್ ವರೆಗಿನ ಸಂಗೀತ ಪ್ರತಿಭೆಯನ್ನು ಪೋಷಿಸುತ್ತದೆ, ವೈವಿಧ್ಯಮಯ ಪ್ರಕಾರಗಳಲ್ಲಿ ಸಂಪ್ರದಾಯ ಮತ್ತು ನಾವೀನ್ಯತೆಯನ್ನು ಬೆಸೆಯುತ್ತದೆ. 2015 ರಿಂದ, ನಾವು ಸಂಗೀತ ಮತ್ತು ಸಂಸ್ಕೃತಿಯನ್ನು ಆಚರಿಸಿದ್ದೇವೆ, ವಾರ್ಷಿಕ ಏಕತ್ವಂ ಹೋಳಿ ಸಂಗೀತ ಉತ್ಸವದಲ್ಲಿ ಪರಾಕಾಷ್ಠೆಗೊಂಡಿದೆ.

ಏಕತ್ವಂ, ಎಂಟ್ರಸ್ಟ್ ಫೌಂಡೇಶನ್‌ನ ಉಪಕ್ರಮ, ಮಾರ್ಚ್ 22, 23, 29 ಮತ್ತು 30, 2025 ರಂದು ಬೆಂಗಳೂರು ಗಾಯನ ಸಮಾಜ ಮತ್ತು ಪಾಥಿ ಸಭಾಂಗಣ, ಬಸವನಗುಡಿಯಲ್ಲಿ ವಾರ್ಷಿಕ ಏಕತ್ವಂ ಹೋಳಿ ಸಂಗೀತ ಉತ್ಸವವನ್ನು ಪ್ರಸ್ತುತಪಡಿಸುತ್ತದೆ. ಈ ಉತ್ಸವವು ಬಣ್ಣ ಮತ್ತು ಸಂಗೀತದ ಹಬ್ಬವನ್ನು ಆಚರಿಸುತ್ತದೆ ಮತ್ತು ಪ್ರದರ್ಶಕರು, ರಸಿಕರು, ವಿಮರ್ಶಕರು ಮತ್ತು ಮಾರ್ಗದರ್ಶಕರನ್ನು ಒಟ್ಟುಗೂಡಿಸುತ್ತದೆ. ಸಂಗೀತ ಪ್ರಿಯರನ್ನು ರಂಜಿಸಲು ಕರ್ನಾಟಕ ಶಾಸ್ತ್ರೀಯ ಗಾಯನ, ಹಿಂದೂಸ್ತಾನಿ ಕೊಳಲು ಯುಗಳ, ಕರ್ನಾಟಕ ವಾದ್ಯಗಳ ಸಮೂಹ ಮತ್ತು ಹಿಂದೂಸ್ತಾನಿ ಗಾಯನ ಇರುತ್ತದೆ.

Venues:
Date: March 22 – 23, 2025
The Bangalore GayanaSamaja, Krishna Rajendra Road, Basavanagudi, Bangalore
Date: March 29 - 30, 2025
PathiSabhangana, Basavanagudi
Timing: 4 PM & 6.30 PM (all 4 days)
4 PM shows - Entry is free for all
6.30 PM – ticketed event – tickets available on www. bookmyshow.com

ಏಕತ್ವಂ ಭಾರತೀಯ ಶಾಸ್ತ್ರೀಯ ಸಂಗೀತ ಮತ್ತು ಸಾಂಸ್ಕೃತಿಕ ಪರಂಪರೆಯ ಸಂರಕ್ಷಣೆ, ಪ್ರಚಾರ ಮತ್ತು ಆಚರಣೆಯಲ್ಲಿ ದಾರಿದೀಪವಾಗಿ ನಿಂತಿದೆ. ಸಂಪ್ರದಾಯದಲ್ಲಿ ಬೇರೂರಿದೆ, ಆದರೆ ನಾವೀನ್ಯತೆಯಿಂದ ಉತ್ತೇಜಿಸಲ್ಪಟ್ಟಿದೆ, ನಾವು ಉದಯೋನ್ಮುಖ ಕಲಾವಿದರಿಗೆ ವೇದಿಕೆಯನ್ನು ಒದಗಿಸುತ್ತಿದ್ದೇವೆ ಮತ್ತು ಸಮಕಾಲೀನ ಮತ್ತು ಸಮ್ಮಿಳನ ಸಂಗೀತ ಸೇರಿದಂತೆ ವೈವಿಧ್ಯಮಯ ಪ್ರಕಾರಗಳಲ್ಲಿ ಹಿರಿಯ ಕಲಾವಿದರ ನವೀನ ಕೃತಿಗಳನ್ನು ಬೆಂಬಲಿಸುತ್ತಿದ್ದೇವೆ ಮತ್ತು ಪ್ರದರ್ಶಿಸುತ್ತಿದ್ದೇವೆ.

2024 ರಲ್ಲಿ, ಏಕತ್ವಂ ಸಂಗೀತ ಶಾಸ್ತ್ರ ರತ್ನ ಮೈಸೂರು ವಾಸುದೇವಾಚಾರ್ ಪ್ರಶಸ್ತಿ ಮತ್ತು ಶ್ರೀಮತಿ. ಗಂಗೂಬಾಯಿ ಹಾನಗಲ್ ಹೆಸರಿನಲ್ಲಿ ಕರ್ನಾಟಕ ಮತ್ತು ಹಿಂದೂಸ್ತಾನಿ ಸಂಗೀತದ ದಂತಕಥೆಗಳನ್ನು ಆಚರಿಸಲು ಪ್ರಶಸ್ತಿಗಳನ್ನು ಸ್ಥಾಪಿಸಿತು. ಈ ವರ್ಷ, ಸಂಗೀತ ಶಾಸ್ತ್ರ ರತ್ನ ಮೈಸೂರು ವಾಸುದೇವಾಚಾರ್ ಶ್ರೇಷ್ಠತಾ ಪ್ರಶಸ್ತಿಯನ್ನು ವಿದ್ವಾನ್ ಆರ್ ಎ ರಾಮಮಣಿ ಅವರಿಗೆ ನೀಡಲಾಗುವುದು ಮತ್ತು ಶ್ರೀಮತಿ. ಗಂಗೂಬಾಯಿ ಹಾನಗಲ್ ಶ್ರೇಷ್ಠತಾ ಪ್ರಶಸ್ತಿಯನ್ನು ವಿದ್ವಾನ್ ಜಯಶ್ರೀ ರಮೇಶ್ ಪಟಣೇಕರ್ ಅವರಿಗೆ ನೀಡಲಾಗುವುದು.

ಸಂಜೆ 4 ಗಂಟೆಯ ಪ್ರದರ್ಶನಗಳು ಉಚಿತ ಪ್ರವೇಶ ಮತ್ತು ಸಂಜೆ 6.30 ಗಂಟೆಯ ಪ್ರದರ್ಶನಗಳು ಟಿಕೆಟ್ ಹೊಂದಿರುತ್ತದೆ.

ರಾಜಮೋಹನ್ ಕೃಷ್ಣನ್ ಸ್ಥಾಪಿಸಿದ ಏಕತ್ವಂ, ಹೋಳಿ ಸಂಗೀತ ಉತ್ಸವದ 5 ನೇ ಆವೃತ್ತಿಯನ್ನು ಅನಾವರಣಗೊಳಿಸಲು ಸಂತೋಷಪಡುತ್ತದೆ. ಹಿಂದಿನ ಆವೃತ್ತಿಗಳಲ್ಲಿ, ಏಕತ್ವಂ ವಿದ್ವಾನ್ ಜಯಂತಿ ಕುಮರೇಶ್, ವಿದ್ವಾನ್ ರಂಜನಿ ಗಾಯತ್ರಿ, ಪಂಡಿತ್ ವೆಂಕಟೇಶ್ ಕುಮಾರ್, ವಿದ್ವಾನ್ ಅಭಿಷೇಕ್ ರಘುರಾಮ್, ವಿದ್ವಾನ್ ಸಂದೀಪ್ ನಾರಾಯಣ್, ವಿದ್ವಾನ್ ಅಪೂರ್ವ ಗೋಖಲೆ ಮುಂತಾದ ಪ್ರಖ್ಯಾತ ಕಲಾವಿದರನ್ನು ಪ್ರದರ್ಶಿಸಿದೆ.

ಸಮುದಾಯ ಕಲ್ಯಾಣಕ್ಕೆ ತನ್ನ ಬದ್ಧತೆಗೆ ಅನುಗುಣವಾಗಿ, ಹಿರಿಯ ನಾಗರಿಕರ ಜನಸಂಖ್ಯೆಯ ಕ್ಷಿಪ್ರ ಬೆಳವಣಿಗೆಗೆ ಪ್ರತಿಕ್ರಿಯೆಯಾಗಿ ಕೇರಳದಲ್ಲಿ ಹಿರಿಯ ನಾಗರಿಕರ ಆರೈಕೆ ಸೌಲಭ್ಯವನ್ನು ಸ್ಥಾಪಿಸಲು ಏಕತ್ವಂ ತನ್ನ ಆರಂಭಿಕ ಪ್ರಯತ್ನಗಳನ್ನು ಪ್ರಾರಂಭಿಸಿದೆ. ಈ ಸೌಲಭ್ಯವು ನಿವಾಸಿಗಳಿಗೆ ಒಡನಾಟ, ಗೌಪ್ಯತೆ ಮತ್ತು ಆರಾಮವನ್ನು ನೀಡುತ್ತದೆ, ಜೊತೆಗೆ ಅವರಿಗೆ ಅಗತ್ಯವಿರುವ ಮೇಲ್ವಿಚಾರಣೆಯನ್ನು ನೀಡುತ್ತದೆ.

ಎಲ್ಲಾ ಕೊಡುಗೆಗಳು ಸೆಕ್ಷನ್ 80(G) ಮತ್ತು 12(G) ಅಡಿಯಲ್ಲಿ ತೆರಿಗೆಯಿಂದ ವಿನಾಯಿತಿ ಪಡೆದಿವೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಅನಾರೋಗ್ಯ ಸಮಸ್ಯೆಗಳು, ಮಕ್ಕಳಿಂದ ತೊಂದರೆ, ಹಿರಿಯ ವ್ಯಕ್ತಿಗಳ ಶಾಪಕ್ಕೆ ಗುರಿಯಾಗುವಿರಿ

**ವೃಷಭ:** ರೋಗ ಬಾಧೆ ಮುಕ್ತಿ, ಕುಟುಂಬದಲ್ಲಿ ವಾಗ್ವಾದಗಳು, ಪಾಲುದಾರಿಕೆಯಲ್ಲಿ ಆರ್ಥಿಕ ಸಂಕಷ್ಟಗಳು

**ಮಿಥುನ:** ಸಂಕಷ್ಟಕ್ಕೆ ಸಿಲುಕುವಿರಿ, ಶುಭಕಾರ್ಯಗಳು ಮುಂದೂಡಿಕೆ, ಅನಾರೋಗ್ಯ ಸಮಸ್ಯೆಗಳು

**ಕಟಕ:** ಮಾನಸಿಕ ಕಿರಿಕಿರಿ ಮತ್ತು ತೊಂದರೆ, ಆರ್ಥಿಕ ಸಂಕಷ್ಟಗಳಿಂದ ಮುಕ್ತಿ, ಸರ್ಕಾರಿ ಕೆಲಸದಲ್ಲಿ ಅನುಕೂಲ

**ಸಿಂಹ:** ಮಕ್ಕಳಿಂದ ಕಿರಿಕಿರಿ, ಅನಾರೋಗ್ಯ ಸಮಸ್ಯೆ, ಕೆಲಸಕಾರ್ಯಗಳಲ್ಲಿ ವಿಘ್ನ.

**ಕನ್ಯಾ:** ಉದ್ಯೋಗ ಲಾಭ, ಸಾಲಗಾರರಿಂದ ಮುಕ್ತಿ, ಶತ್ರು ದಮನ, ತಂತ್ರ ಬಾಧೆಗಳಿಗೆ ಗುರುಗಳಿಂದ ಮಾರ್ಗದರ್ಶನ

**ತುಲಾ:** ನಿದ್ರಾಭಂಗ, ಉದ್ಯೋಗ ಒತ್ತಡಗಳು, ಕಾಲು ನೋವು, ಮಂದತ್ವ, ವೈರಾಗ್ಯದ ಭಾವ ಅಧಿಕ

**ವೃಶ್ಚಿಕ:** ಆಕಸ್ಮಿಕ ಅವಘಡಗಳಿಂದ ಅಧಿಕ ಖರ್ಚು, ಸ್ಥಿರಾಸ್ತಿ ಭೂಮಿ ವಾಹನ ಖರೀದಿಯಲ್ಲಿ ಮೋಸ, ಕೆಲಸಕಾರ್ಯಗಳಲ್ಲಿ ಸೋಮಾರಿತನ

**ಧನಸ್ಸು:** ಕುಟುಂಬದಲ್ಲಿ ಕಿರಿಕಿರಿ ಮತ್ತು ಕಲಹ, ಪ್ರಯಾಣಕ್ಕೆ ಅಡೆತಡೆ, ಅವಮಾನಗಳಿಗೆ ಗುರಿಯಾಗುವ ಸಂದರ್ಭ

**ಮಕರ:** ವ್ಯವಹಾರ ಸ್ಥಳದಲ್ಲಿ ಕಿರಿಕಿರಿ, ಆರ್ಥಿಕ ಸಹಾಯ, ದಾಯಾದಿ ಕಲಹ, ಕೋರ್ಟ್ ಕೇಸುಗಳಲ್ಲಿ ಜಯ

**ಕುಂಭ:** ಪಿತ್ರಾರ್ಜಿತ ಆಸ್ತಿಯಿಂದ ಲಾಭ, ಉದ್ಯೋಗ ಬದಲಾವಣೆಗೆ ಅಡೆತಡೆ, ದಾಂಪತ್ಯದಲ್ಲಿ ವಿರಸ.

**ಮೀನ:** ಆಕಸ್ಮಿಕ ಅವಘಡಗಳಿಂದ ಮಾನಸಿಕ ಕಿರಿಕಿರಿ, ಕಬ್ಬಿಣದ ವಸ್ತುಗಳಿಂದ ಪೆಟ್ಟು, ಕೆಲಸ ಕಾರ್ಯಗಳಿಗೆ ಅಡೆತಡೆ, ಮಾನಸಿಕ ನೆಮ್ಮದಿ ಭಂಗ

## ವಿಶ್ವ ಗಣಿತ ದಿನ




ಈ ವರ್ಷ ಮಾರ್ಚ್ 22 ರಂದು ವಿಶ್ವ ಗಣಿತ ದಿನವನ್ನು ಆಚರಿಸಲಾಗುತ್ತದೆ! 3ಕ ಲರ್ನಿಂಗ್ 2007 ರಲ್ಲಿ ಸ್ಥಾಪಿಸಿದಾಗಿನಿಂದ, ವಿಶ್ವ ಗಣಿತ ದಿನದ ಜನಪ್ರಿಯತೆ ವೇಗವಾಗಿ ಹೆಚ್ಚಾಗಿದೆ. ಈ ದಿನವು ಜಾಗತಿಕವಾಗಿ ವಿದ್ಯಾರ್ಥಿಗಳು ಪ್ರಮಾಣಿತ ದಿನನಿತ್ಯದ ಗಣಿತ ಪಾಠಗಳಿಂದ ವಿರಾಮ ತೆಗೆದುಕೊಳ್ಳುವಂತೆ ಪ್ರೋತ್ಸಾಹಿಸುತ್ತದೆ. ಬದಲಾಗಿ, ಅವರು ಸ್ಪರ್ಧಾತ್ಮಕ ಗಣಿತ-ವಿಷಯದ ಆಟಗಳಲ್ಲಿ ಭಾಗವಹಿಸಬಹುದು, ಬಹುಮಾನಗಳು ಮತ್ತು ವಿದ್ಯಾರ್ಥಿವೇತನಗಳನ್ನು ಗೆಲ್ಲುವ ಅವಕಾಶವನ್ನು ನೀಡುತ್ತದೆ!

2007 ರಲ್ಲಿ ಡಿಜಿಟಲ್ ಕಲಿಕಾ ಸಂಪನ್ಮೂಲ 3ಕ ಲರ್ನಿಂಗ್‌ನಿಂದ ರಚಿಸಲ್ಪಟ್ಟ ವಿಶ್ವ ಗಣಿತ ದಿನವು ಪ್ರಪಂಚದಾದ್ಯಂತದ ವಿದ್ಯಾರ್ಥಿಗಳು ಮಾನಸಿಕ ಗಣಿತ ಸಮಸ್ಯೆಗಳ ಸುತ್ತ ಕೇಂದ್ರೀಕೃತವಾದ ಆನ್‌ಲೈನ್ ಸ್ಪರ್ಧಾತ್ಮಕ ಆಟಗಳಲ್ಲಿ ತೊಡಗಿಸಿಕೊಳ್ಳಲು ಪ್ರೋತ್ಸಾಹಿಸುತ್ತದೆ. ಅಂಕಗಣಿತ ಮತ್ತು ಸಮಸ್ಯೆ ಪರಿಹಾರದಲ್ಲಿ ನಿಖರತೆ ಮತ್ತು ವಿಶ್ವಾಸವನ್ನು ಸುಧಾರಿಸುವ ಉದ್ದೇಶದಿಂದ ವೇದಿಕೆಯ ಆಟಗಳು 4-16 ವರ್ಷ ವಯಸ್ಸಿನ ವಿದ್ಯಾರ್ಥಿಗಳನ್ನು ಗುರಿಯಾಗಿರಿಸಿಕೊಂಡಿವೆ.

ವಿಶ್ವ ಗಣಿತ ದಿನದಂದು ಭಾಗವಹಿಸಲು ತಮ್ಮ ಮಕ್ಕಳನ್ನು ನೋಂದಾಯಿಸಿಕೊಳ್ಳಲು, ಶಿಕ್ಷಕರು ಮತ್ತು ಪೋಷಕರು ಅಧಿಕೃತ ವಿಶ್ವ ಗಣಿತ ದಿನದ ವೆಬ್‌ಸೈಟ್‌ಗೆ ಹೋಗಿ ನೋಂದಾಯಿಸಿಕೊಳ್ಳಬಹುದು. ಇದು ಉಚಿತ! ಎಲ್ಲಾ ವಿಷಯಗಳಲ್ಲಿ ಹೆಚ್ಚಿನ ಉತ್ತಮ ಗಣಿತ ಮತ್ತು ಶೈಕ್ಷಣಿಕ ಸಂಪನ್ಮೂಲಗಳಿಗಾಗಿ, ಶಿಕ್ಷಕರು ಮತ್ತು ಪೋಷಕರು 3ಕ ಲರ್ನಿಂಗ್‌ನ ಸೈಟ್‌ಗೆ ಲಾಗಿನ್ ಆಗಬಹುದು ಮತ್ತು ಚಂದಾದಾರಿಕೆಯನ್ನು ಖರೀದಿಸಬಹುದು.

ನಿಮ್ಮ ದಿನದಲ್ಲಿ 30 ನಿಮಿಷದಿಂದ ಒಂದು ಗಂಟೆಯವರೆಗೆ ಗಣಿತವನ್ನು ಅಭ್ಯಾಸ ಮಾಡುವ ಮೂಲಕ ನಿಮ್ಮ ಮಗುವಿನ ಗಣಿತವನ್ನು ಸುಧಾರಿಸಲು ಸಹಾಯ ಮಾಡಿ. ಇದು ನಿಮ್ಮ ಮಗುವಿನ ಬೆಳವಣಿಗೆಗೆ ಒಳ್ಳೆಯದು ಮಾತ್ರವಲ್ಲದೆ, ನಿಮ್ಮ ಮೆದುಳನ್ನು ಸಕ್ರಿಯವಾಗಿ, ಆರೋಗ್ಯಕರವಾಗಿ ಮತ್ತು ಬಲವಾಗಿಡಲು ಸಹಾಯ ಮಾಡುತ್ತದೆ!

# ದೆಹಲಿ ಹೈಕೋರ್ಟ್ ನ್ಯಾ ಯಶವಂತ್ ವರ್ಮಾ ನಿವಾಸದಲ್ಲಿ ಅಪಾರ ಪ್ರಮಾಣದ ನಗದು ಪತ್ತೆ

**ನವದೆಹಲಿ:** ದೆಹಲಿ ಹೈಕೋರ್ಟ್ ನ್ಯಾಯಮೂರ್ತಿ ಯಶವಂತ್ ವರ್ಮಾ ಅವರ ಸರಕಾರಿ ಬಂಗಲೆಯಲ್ಲಿ ಕಾಣಿಸಿಕೊಂಡ ಬೆಂಕಿ ಅವಘಡದ ವೇಳೆ ಭಾರಿ ಪ್ರಮಾಣದಹಣ ಪತ್ತೆಯಾಗಿದೆ ಎಂದು ಎಎನ್ಐ ವರದಿ ಮಾಡಿದೆ.

ಈಗ ಈ ಘಟನೆಯ ವಿಚಾರವಾಗಿಸುಪ್ರೀಂಕೋರ್ಟ್ ನ ಭಾರತದ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ನೇತೃತ್ವದ ಕೊಲಿಜಿಯಂ ಗುರುವಾರ ಸಭೆ ಸೇರಿನ್ಯಾಯಮೂರ್ತಿ ವರ್ಮಾ ಅವರನ್ನು ಅಲಹಾಬಾದ್ ಹೈಕೋರ್ಟ್‌ಗೆ ವರ್ಗಾಹಿಸುವ ಬಗ್ಗೆಕೇಂದ್ರ ಸರ್ಕಾರಕ್ಕೆಶಿಫಾರಸುಗಳನ್ನು ಮಾಡಿತು.



ನ್ಯಾಯಮೂರ್ತಿ ವರ್ಮಾ ಅವರ ನಿವಾಸದಲ್ಲಿ ಬೆಂಕಿ ಅವಘಡದ ಸಂದರ್ಭದಲ್ಲಿ ಭಾರಿ ನಗದು ಪತ್ತೆಯಾಗಿರುವ ಕುರಿತಾದ ವರದಿ ಬಂದ ನಂತರ, ಸುಪ್ರೀಂ ಕೋರ್ಟ್ ಕೊಲಿಜಿಯಂ ಸಭೆ ಸೇರಿ ಅವರನ್ನು ವರ್ಗಾಯಿಸಲು ಸರ್ವಾನುಮತದ ನಿರ್ಧಾರ ಕೈಗೊಂಡಿದೆ. ಆದರೆ, ಕೊಲಿಜಿಯಂನ ಈ ನಿರ್ಣಯವನ್ನು ಇನ್ನೂ ಸುಪ್ರೀಂ ಕೋರ್ಟ್ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿಲ್ಲ.

ನ್ಯಾಯಮೂರ್ತಿ ವರ್ಮಾ ಅವರು ಅಕ್ಟೋಬರ್ 2021ರಲ್ಲಿ ದೆಹಲಿ ಹೈಕೋರ್ಟ್ ನ್ಯಾಯಾಧೀಶರಾಗಿ ಪ್ರಮಾಣ ವಚನ ಸ್ವೀಕರಿಸಿದರು.ಅದಕ್ಕೂ ಮೊದಲು ಅವರನ್ನುಅಕ್ಟೋಬರ್ 13, 2014ರಂದು ಅಲಹಾಬಾದ್ ಹೈಕೋರ್ಟ್‌ನಲ್ಲಿ ನ್ಯಾಯಾಧೀಶರನ್ನಾಗಿನೇಮಿಸಲಾಗಿತ್ತು.

# ಸೋತ ನಾಯಕರಿಗೆ ಪಕ್ಷ ಬಲಗೊಳಿಸುವ ಜವಾಬ್ದಾರಿ ನೀಡಿದ ಎಎಪಿ

**ನವದೆಹಲಿ:** ಕಳೆದ ತಿಂಗಳು ನಡೆದ ದೆಹಲಿ ಚುನಾವಣೆಯಲ್ಲಿ ಸೋಲು ಕಂಡ ಆಮ್ ಆದ್ಮಿ ಪಕ್ಷ (ಎಎಪಿ) ಇದೀಗ ಪಕ್ಷ ಸಂಘಟನೆಗೆ ಒತ್ತು ನೀಡಲು ಮುಂದಾಗಿದ್ದು, ರಾಜ್ಯಗಳ ಉಸ್ತುವಾರಿ ಹೊಣೆಯನ್ನು ಹಲವು ನಾಯಕರಿಗೆ ಹಂಚಿದೆ. ಕ್ಷೇತ್ರ ಗೆಲ್ಲುವಲ್ಲಿ ವಿಫಲರಾದ ಎಎಪಿ ಪ್ರಮುಖ ನಾಯಕರಿಗೆ ಇದೀಗ ಪಕ್ಷದ ಬಲಗೊಳಿಸುವ ಹೊಸ ಜವಾಬ್ದಾರಿ ನೀಡುವ ಮೂಲಕ ಸಕ್ರಿಯರನ್ನಾಗಿಸಿದೆ.

ದೆಹಲಿ ಘಟಕದ ನೂತನ ಅಧ್ಯಕ್ಷರಾಗಿ ಮಾಜಿ ಸಚಿವ ಸೌರಭ್ ಭಾರದ್ವಾಜ್ ನೇಮಕವಾಗಿದ್ದು, ಹಿರಿಯ ನಾಯಕ ಮನೀಶ್ ಸಿಡೋಡಿಯಾಗೆ ಪಂಜಾಬ್‌ನ ಉಸ್ತುವಾರಿ ನೀಡಲಾಗಿದೆ.

ಗೋಪಾಲ್ ರಾಯ್ ಅವರನ್ನು ಹುದ್ದೆಯಿಂದ ಕೆಳಗಿಳಿಸಿ ಭಾರದ್ವಾಜ್‌ಗೆ ಸ್ಥಾನ ನೀಡಲಾಗಿದೆ. ಇನ್ನು ಇಡೀ ದೇಶದಲ್ಲಿ ಎಎಪಿ ಸರ್ಕಾರ ಅಸ್ತಿತ್ವದಲ್ಲಿರುವ ಏಕೈಕ ರಾಜ್ಯವಾಗಿರುವ ಪಂಜಾಬ್ ರಾಜ್ಯದ ಎಎಪಿ ಉಸ್ತುವಾರಿ ಹೊಣೆಯನ್ನು ಸಿಸೋಡಿಯಾಗೆ ವಹಿಸಲಾಗಿದೆ.

ಎಎಪಿ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ ನಿವಾಸದಲ್ಲಿ ಸಾಗಿದ ಎಎಪಿಯ ರಾಜಕೀಯ ವಿಚಾರಗಳ ಸಮಿತಿ (ಪಿಎಸಿ)ಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ.ಈ ಪದಾಧಿಕರಗಳ ಪಟ್ಟಿ ಬಿಡುಗಡೆ ಬೆನ್ನಲ್ಲೇ ಮಾತನಾಡಿರುವ ಎಎಪಿ ಪ್ರಧಾನ ಕಾರ್ಯದರ್ಶಿ (ಸಂಘಟನೆ) ಸಂದೀಪ್ ಪಠಾಕ್, ಸಭೆಯಲ್ಲಿ ಹಲವು ಬದಲಾವಣೆಗಳನ್ನು ಮಾಡಲಾಗಿದೆ. ಗೋಪಾಲ್ ರೈ ಅವರಿಗೆ ಗುಜರಾಜ್ ಹೊಣೆ ಹೊರಿಸಲಾಗಿದ್ದು, ಅಲ್ಲಿ ನಮ್ಮ ಪಕ್ಷದ ನೆಲೆಯನ್ನು ವಿಸ್ತರಿಸುವ ಗುರಿ ಹೊಂದಿದ್ದೇವೆ ಎಂದು ತಿಳಿಸಿದ್ದಾರೆ.

# ಇಸ್ರೇಲ್ ಶಿನ್ ಬೆಟ್ ಗುಪ್ತಚರ ಸಂಸ್ಥೆಯ ಮುಖ್ಯಸ್ಥ ರೋನೆನ್ ಬಾರ್ ವಜಾ

**ಜೆರುಸಲೇಂ:** ಇಸ್ರೇಲ್‌ನ ದೇಶೀಯ ಗುಪ್ತಚರ ಸಂಸ್ಥೆ ಶಿನ್ ಬೆಟ್?ನ ಮುಖ್ಯಸ್ಥರನ್ನು ಸೋಮವಾರ ವಜಾಗೊಳಿಸಲಾಗಿದೆ. ಅಕ್ಟೋಬರ್ 7, 2023ರ ಘಟನೆಯ ನಂತರ ಅವರು ನನ್ನ ನಂಬಿಕೆಯನ್ನು ಉಳಿಸಿಕೊಂಡಿಲ್ಲ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಹೇಳಿದ ಕೆಲವೇ ದಿನಗಳ ನಂತರ ಈ ಬೆಳವಣಿಗೆ ನಡೆದಿದೆ. ಐಎಸ್ಎ ನಿರ್ದೇಶಕ ರೋನೆನ್ ಬಾರ್ ಅವರ ಅಧಿಕಾರಾವಧಿಯನ್ನು ಕೊನೆಗೊಳಿಸುವ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಪ್ರಸ್ತಾಪವನ್ನು ಸರ್ಕಾರ ಸರ್ವಾನುಮತದಿಂದ ಅನುಮೋದಿಸಿದೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ. ಈ ಹುದ್ದೆಗೆ ಹೊಸಬರನ್ನು ನೇಮಕ ಮಾಡಿದ ನಂತರ ಅಥವಾ ಏಪ್ರಿಲ್ 10 ರೊಳಗೆ ಅವರು ತಮ್ಮ ಹುದ್ದೆಯನ್ನು ತ್ಯಜಿಸಲಿದ್ದಾರೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ. 1993 ರಲ್ಲಿ ಏಜೆನ್ಸಿಗೆ ಸೇರಿದ ಬಾರ್ ಅವರನ್ನು ವಜಾಗೊಳಿಸಲು ನಿರಂತರ ನಂಬಿಕೆಯ ಕೊರತೆ ಕಾರಣ ಎಂದು ನೆತನ್ಯಾಹು ಭಾನುವಾರ ಹೇಳಿದ್ದರು. ಮುಂದಿನ ವರ್ಷ ಅಧಿಕಾರಾವಧಿ ಕೊನೆಗೊಳ್ಳಲಿದ್ದ ಬಾರ್ ಅವರನ್ನು ಹಿಂದಿನ ಇಸ್ರೇಲ್ ಸರ್ಕಾರವು ಅಕ್ಟೋಬರ್ 2021 ರಲ್ಲಿ ಶಿನ್ ಬೆಟ್ ಮುಖ್ಯಸ್ಥರನ್ನಾಗಿ ನೇಮಿಸಿತ್ತು. ಗಾಜಾದಲ್ಲಿ ಯುದ್ಧ ಆರಂಭವಾಗಲು ಕಾರಣವಾದ ಅಕ್ಟೋಬರ್?ನ ಹಮಾಸ್ ದಾಳಿಯ ಮೊದಲೇ ಬಾರ್? ಹಾಗೂ ನೆತನ್ಯಾಹು ಮಧ್ಯದ ಸಂಬಂಧ ಹದಗೆಟ್ಟಿತ್ತು. ವಿಶೇಷವಾಗಿ ದೇಶದಲ್ಲಿ ಜನರ ಮಧ್ಯೆ ಭಿನ್ನಾಭಿಪ್ರಾಯ ಹುಟ್ಟುಹಾಕಿದ ಉದ್ದೇಶಿತ ನ್ಯಾಯಾಂಗ ಸುಧಾರಣೆಗಳ ವಿಚಾರದಲ್ಲಿ ಇಬ್ಬರ ಸಂಬಂಧ ಹಳಸಿತ್ತು. ಹಮಾಸ್ ದಾಳಿಯ ಬಗ್ಗೆ ಮಾರ್ಚ್? 4 ರಂದು ಶಿನ್ ಬೆಟ್ ಆಂತರಿಕ ವರದಿಯನ್ನು ಬಿಡುಗಡೆ ಮಾಡಿದ ನಂತರ ಇಬ್ಬರ ಮಧ್ಯದ ಕಂದಕ ಮತ್ತಷ್ಟು ದೊಡ್ಡದಾಗಿತ್ತು.





## ಬ್ರಿಟಿಷ್ ಕೌನ್ಸಿಲ್ ಮತ್ತು ಮೈಕ್ರೋಸಾಫ್ಟ್ ಇಂಡಿಯಾದಿಂದ ಯುವಜನರ ಸಬಲೀಕರಣ

ಶೈಕ್ಷಣಿಕ ಅವಕಾಶಗಳು ಮತ್ತು ಸಾಂಸ್ಕೃತಿಕ ವಿನಿಮಯಕ್ಕಾಗಿ ಯುಕೆ ಅಂತಾರಾಷ್ಟ್ರೀಯ ಸಂಘಟನೆಯಾದ ಬ್ರಿಟಿಷ್ ಕೌನ್ಸಿಲ್ ಮೈಕ್ರೋಸಾಫ್ಟ್ ಇಂಡಿಯಾದೊಂದಿಗಿನ ಪಾಲುದಾರಿಕೆಯಲ್ಲಿ ಇತ್ತೀಚಿಗೆ ಬೆಂಗಳೂರಿನಲ್ಲಿ ಒಂದು ಗಮನಾರ್ಹ ಕಾರ್ಯಕ್ರಮವನ್ನು ಆಯೋಜಿಸಿತ್ತು. ಬ್ರಿಟಿಷ್ ಕೌನ್ಸಿಲ್ ಮತ್ತು ಮೈಕ್ರೋಸಾಫ್ಟ್ ಇಂಡಿಯಾ ನಡುವಿನ ಮೂರು ವರ್ಷಗಳ ಪರಿವರ್ತಕ ಪಾಲುದಾರಿಕೆಯಾದ 'ಇಂಗ್ಲಿಷ್ ಸ್ಕಿಲ್ಸ್ ಫಾರ್ ಯೂಥ್' ಪ್ರೋಗ್ರಾಮ್ ನ ಗಮನಾರ್ಹ ಪ್ರಗತಿಯನ್ನು ಈ ಕಾರ್ಯಕ್ರಮ ಆಚರಿಸಿತು. ಇದರಲ್ಲಿ 18–25 ವರ್ಷ ವಯಸ್ಸಿನ ಯುವಜನರ ಅದರಲ್ಲೂ ವಿಶೇಷವಾಗಿ ಕರ್ನಾಟಕದಾದ್ಯಂತದ ಸರ್ಕಾರಿ ಎಂಜಿನಿಯರಿಂಗ್ ಕಾಲೇಜುಗಳ ವಿದ್ಯಾರ್ಥಿಗಳ ಉದ್ಯೋಗಾವಕಾಶಗಳಿಗಾಗಿ ತಮ್ಮ ಇಂಗ್ಲಿಷ್ ಭಾಷೆ ಮತ್ತು ಸಂವಹನ ಕೌಶಲ್ಯವನ್ನು ಹೆಚ್ಚಿಸುವ ಮೂಲಕ ಅವರನ್ನು ಸಬಲೀಕರಣಗೊಳಿಸುವ ಗುರಿಯನ್ನು ಈ ಕಾರ್ಯಕ್ರಮ ಹೊಂದಿತ್ತು. ಇದುವರೆಗೆ, ಈ ಉಪಕ್ರಮವು ಭಾರತದಾದ್ಯಂತ 11095 ವಿದ್ಯಾರ್ಥಿಗಳು ಮತ್ತು 114 ಸಿಬ್ಬಂದಿ ಸದಸ್ಯರನ್ನು ಯಶಸ್ವಿಯಾಗಿ ತಲುಪಿದೆ.

2023ರಲ್ಲಿ, ಬ್ರಿಟಿಷ್ ಕೌನ್ಸಿಲ್ ಮತ್ತು ಮೈಕ್ರೋಸಾಫ್ಟ್ ಇಂಡಿಯಾ 'ಇಂಗ್ಲಿಷ್ ಸ್ಕಿಲ್ಸ್ ಫಾರ್ ಯೂಥ್' ಹೆಸರಿನ ಮೂರು-ವರ್ಷದ ಪಾಲುದಾರಿಕೆಯನ್ನು ಔಪಚಾರಿಕೆಗೊಳಿಸಲು ಒಂದು ಒಪ್ಪಂದಕ್ಕೆ ಸಹಿ ಹಾಕಿತು. ಈ ಅತ್ಯುತ್ತಮ ಉಪಕ್ರಮವು ಭಾರತದಾದ್ಯಂತ ಸಾಮಾಜಿಕ-ಆರ್ಥಿಕವಾಗಿ ಹಿಂದುಳಿದ ಸಮುದಾಯಗಳಿಂದ ಯುವ ಜನರು ಅದರಲ್ಲೂ ವಿಶೇಷವಾಗಿ ಮಹಿಳೆಯರಿಗಾಗಿ ಜೀವನ ಅವಕಾಶಗಳನ್ನು ಸುಧಾರಿಸುವ ಉದ್ದೇಶ ಹೊಂದಿದೆ.

ಬೆಂಗಳೂರಿನ ಲಕ್ಸರ್ ಕಚೇರಿಯಲ್ಲಿರುವ ಮೈಕ್ರೋಸಾಫ್ಟ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ನಲ್ಲಿ ನಡೆದ ಕಾರ್ಯಕ್ರಮವು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ವಿದ್ಯಾರ್ಥಿಗಳು, ಸಿಬ್ಬಂದಿ ವರ್ಗದವರು ಮತ್ತು ಕರ್ನಾಟಕ ಸರ್ಕಾರ, ಮೈಕ್ರೋಸಾಫ್ಟ್, ಬ್ರಿಟಿಷ್ ಕೌನ್ಸಿಲ್ ಮತ್ತು ಬ್ರಿಟಿಷ್ ಡೆಪ್ಯುಟಿ ಹೈ ಕಮಿಷನ್ ನ ಹಿರಿಯ ಮಧ್ಯಸ್ಥಿಗಾರರನ್ನು ಒಟ್ಟುಗೂಡಿಸಿತ್ತು. ಈ ಕಾರ್ಯಕ್ರಮವು ಯೋಜನೆಯ ಸಾಧನೆಗಳು ಮತ್ತು ಸಮುದಾಯದಲ್ಲಿನ ಅದರ ಧನಾತ್ಮಕ ಪರಿಣಾಮಗಳನ್ನು ಪ್ರದರ್ಶಿಸಲು ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ.



# ಕಾಂಗ್ರೆಸ್ ಜಿಲ್ಲಾ ಮುಖ್ಯಸ್ಥರೊಂದಿಗೆ ಸಂವಾದ ನಡೆಸಲಿರುವ ರಾಹುಲ್ ಗಾಂಧಿ

**ನವದೆಹಲಿ:** ರಾಷ್ಟ್ರಮಟ್ಟದಲ್ಲಿ ಹಳೆಯ ಪಕ್ಷವನ್ನು ಪುನರುಜ್ಜೀವನಗೊಳಿಸಲು ಕಾಂಗ್ರೆಸ್?ನ ವಾಸ್ತವತೆಯ ಬಗ್ಗೆ ತಿಳಿದುಕೊಳ್ಳಲು ಕಾಂಗ್ರೆಸ್ ನಾಯಕ ಹಾಗೂ ಸಂಸದ ರಾಹುಲ್ ಗಾಂಧಿ ನೇರವಾಗಿ ಜಿಲ್ಲಾ ಘಟಕಗಳ ಮುಖ್ಯಸ್ಥರಿಂದ ಮಾಹಿತಿ ಸಂಗ್ರಹಿಸಲು ನಿರ್ಧರಿಸಿದ್ದಾರೆ. ಮಾರ್ಚ್ 27, 28 ಮತ್ತು ಏಪ್ರಿಲ್ 3 ರಂದು ದೇಶದ 750 ಕ್ಕೂ ಹೆಚ್ಚು ಜಿಲ್ಲಾ ಘಟಕದ ಮುಖ್ಯಸ್ಥರ ಜೊತೆಗೆ ರಾಹುಲ್ ಗಾಂಧಿ ಮಾತನಾಡಲಿದ್ದಾರೆ.

ಸುಮಾರು 250 ಜನರ ಬ್ಯಾಚ್‌ಗಳಲ್ಲಿ ನಡೆಯಲಿರುವ ಸಂವಾದಕ್ಕೂ ಮುನ್ನ, ವಿವಿಧ ರಾಜ್ಯ ಘಟಕಗಳು ಜಿಲ್ಲಾ ಮಟ್ಟದಲ್ಲಿ ಖಾಲಿ ಇರುವ ಹುದ್ದೆಗಳನ್ನು ಸಕ್ರಿಯವಾಗಿ ಭರ್ತಿ ಮಾಡುತ್ತಿವೆ.

ಮೂರು ದಿನಗಳ ಮಾಜಿ ಸಂವಾದದಲ್ಲಿ ಕಾಂಗ್ರೆಸ್‌ನ ಅಧ್ಯಕ್ಷ ಸ್ಥಳೀಯ ತಂಡದ ಮುಖ್ಯಸ್ಥರಿಂದ ಪ್ರಮುಖ ಪ್ರತಿಕ್ರಿಯೆಗಳನ್ನು ಪಡೆಯಲಿದ್ದಾರೆ. ಉತ್ತರ ಪ್ರದೇಶ, ಬಿಹಾರ, ಪಶ್ಚಿಮ ಬಂಗಾಳ, ಮಧ್ಯಪ್ರದೇಶ, ಮಹಾರಾಷ್ಟ್ರ ಮತ್ತು ಗುಜರಾತ್?ನಂತಹ ದೊಡ್ಡ ರಾಜ್ಯಗಳಲ್ಲಿ ಪಕ್ಷ ತನ್ನನ್ನು ತಾನು ಪುನರುಜ್ಜೀವನಗೊಳಿಸಲು ಇದು ಸಹಕಾರಿ ಆಗಲಿದೆ. ಗಾಂಧಿ ಕುಟುಂಬದ ತವರು ರಾಜ್ಯವಾದ ಉತ್ತರ ಪ್ರದೇಶದಲ್ಲಿ ಕಾಂಗ್ರೆಸ್ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ ಅವರು, ಎಲ್ಲಾ ರಾಜ್ಯ ತಂಡಗಳನ್ನು ವಿಸರ್ಜಿಸಿದ್ದರು. ಆದಾದ ತಿಂಗಳುಗಳ ನಂತರ ಪಕ್ಷವು ಇತ್ತೀಚೆಗೆ ಎಲ್ಲಾ 750 ಜಿಲ್ಲೆಗಳಲ್ಲಿ ಜಿಲ್ಲಾ ಘಟಕಗಳ ಮುಖ್ಯಸ್ಥರನ್ನು ನೇಮಕ ಮಾಡಿದೆ.

ಉತ್ತರ ಪ್ರದೇಶದ 403 ಶಾಸಕರಲ್ಲಿ ಕೇವಲ 2 ಕಾಂಗ್ರೆಸ್ ಶಾಸಕರು ಮತ್ತು 80 ಸಂಸದರಲ್ಲಿ 6 ಜನ ಮಾತ್ರ ಕಾಂಗ್ರೆಸ್‌ನಿಂದ ಆಯ್ಕೆ ಆಗಿದ್ದಾರೆ. ಇದು ಆ ರಾಜ್ಯದಲ್ಲಿ ಪಕ್ಷ ಸಂಘಟನೆಗೆ ಬಹಳ ಹಿಂದಿನಿಂದಲೂ ಸಮಸ್ಯೆಯಾಗಿತ್ತು. ಬಿಜೆಪಿ ಆಡಳಿತವಿರುವ ರಾಜ್ಯದಲ್ಲಿ ಕಳೆದುಹೋದ ನೆಲೆಯನ್ನು ಉಳಿಸಿಕೊಳ್ಳಲು ಉತ್ಸುಕರಾಗಿರುವ 6 ಸಂಸದರಲ್ಲಿ ಒಬ್ಬರಾದ ರಾಹುಲ್, ಸಾಂಸ್ಥಿಕ ಪುನಾರಚನೆಯ ಮೇಲ್ವಿಚಾರಣೆ ನಡೆಸುತ್ತಿದ್ದಾರೆ.

# ಹಿಂದೂಗಳಿಗೆ ಮಾತ್ರ ಉದ್ಯೋಗ: ಸಿಎಂ

**ತಿರುಮಲ:** ತಿರುಮಲ ದೇವಸ್ಥಾನದಲ್ಲಿ ಹಿಂದೂಗಳಿಗೆ ಮಾತ್ರ ಉದ್ಯೋಗ ನೀಡಬೇಕು ಎಂದು ಆಂಧ್ರಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಶುಕ್ರವಾರ ಹೇಳಿದ್ದಾರೆ.



ತಿರುಮಲ ದೇವಸ್ಥಾನದಲ್ಲಿ ಕೆಲಸಕ್ಕೆ ಹಿಂದೂಗಳನ್ನು ಮಾತ್ರ ನೇಮಿಸಬೇಕು. ಪ್ರಸ್ತುತ ಅಲ್ಲಿ ಕೆಲಸ ಮಾಡುತ್ತಿರುವ ಇತರ ಧರ್ಮೀಯರನ್ನು ಅವರ ಭಾವನೆಗಳಿಗೆ ಧಕ್ಕೆಯಾಗದಂತೆ ಅವರನ್ನು ಇತರ ಸ್ಥಳಗಳಿಗೆ ಸ್ಥಳಾಂತರಿಸಲಾಗುವುದು ಎಂದು ಸಿಎಂ ಹೇಳಿದರು.

ದೇಶದ ಎಲ್ಲಾ ರಾಜ್ಯಗಳ ರಾಜಧಾನಿಗಳಲ್ಲಿ ವೆಂಕಟೇಶ್ವರ ಸ್ವಾಮಿ ದೇವಾಲಯಗಳನ್ನು ನಿರ್ಮಿಸುವ ಯೋಜನೆಯನ್ನು ಅವರು ಇದೇ ಸಂದರ್ಭದಲ್ಲಿ ಘೋಷಿಸಿದರು. ಇದಲ್ಲದೆ, ವಿಶ್ವಾದ್ಯಂತದ ಭಗವಾನ್ ವೆಂಕಟೇಶ್ವರನ ಆಸ್ತಿಗಳನ್ನು ರಕ್ಷಿಸಲು ಪವಿತ್ರ ದಾರ ಕಟ್ಟಿಕೊಂಡಿರುವುದಾಗಿ ಅವರು ತಿಳಿಸಿದರು. ವಿದೇಶಗಳಲ್ಲಿಯೂ ವೆಂಕಟೇಶ್ವರನ ದೇವಾಲಯಗಳು ಸ್ಥಾಪನೆಯಾಗಬೇಕೆಂಬುದು ಅನೇಕ ಭಕ್ತರ ಅಭಿಲಾಷೆಯಾಗಿದೆ ಎಂದು ಅವರು ಹೇಳಿದರು.

ತಿರುಮಲದ ಏಳು ಬೆಟ್ಟಗಳ ಪ್ರದೇಶದ ಬಳಿ ವಾಣಿಜ್ಯ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಮಾತನಾಡಿದ ನಾಯ್ಡು, ಬೆಟ್ಟಕ್ಕೆ ಹೊಂದಿಕೊಂಡಿರುವ ಪ್ರದೇಶದಲ್ಲಿ ಈ ಹಿಂದೆ ಮುಮ್ತಾಜ್ ಹೋಟೆಲ್ ಆರಂಭಿಸಲು ಅನುಮತಿ ನೀಡಲಾಗಿತ್ತು. ಆದರೆ 35.32 ಎಕರೆ ಭೂಮಿಯಲ್ಲಿ ಯೋಜಿಸಲಾಗಿದ್ದ, ಹೋಟೆಲ್‌ಗೆ ನೀಡಲಾಗಿದ್ದ ಅನುಮತಿಯನ್ನು ರದ್ದುಗೊಳಿಸಲು ಸರ್ಕಾರ ಈಗ ನಿರ್ಧರಿಸಿದೆ. ಈ ಹೋಟೆಲ್ ಶಾಕಾಹಾರಿ ಆಹಾರವನ್ನು ಮಾತ್ರ ನೀಡಲು ಉದ್ದೇಶಿಸಿದ್ದರೂ, ಈ ಪ್ರದೇಶದಲ್ಲಿ ಯಾವುದೇ ಖಾಸಗಿ ವ್ಯಕ್ತಿಗಳಿಗೆ ವಾಣಿಜ್ಯ ಚಟುವಟಿಕೆಯ ಅವಕಾಶ ನೀಡಲಾಗುವುದಿಲ್ಲ. ಏಳು ಬೆಟ್ಟಗಳ ಬಳಿ ಯಾವುದೇ ವಾಣಿಜ್ಯೀಕರಣ ಇರಬಾರದು ಎಂದು ಹೇಳಿದರು.

# ಎನ್‌ಕೌಂಟರ್‌ನಲ್ಲಿ 10 ಭಯೋತ್ಪಾದಕರು ಸಾವು!

**ಪೇಶಾವರ್:** ಪಾಕಿಸ್ತಾನದ ಪ್ರಕ್ಷುಬ್ಧ ಖೈಬರ್ ಪಖ್ತುಂಖ್ವಾದಲ್ಲಿ 10 ಭಯೋತ್ಪಾದಕರನ್ನು ಹತ್ಯೆ ಮಾಡಿರುವುದಾಗಿ ಪಾಕಿಸ್ತಾನ ಸೇನೆ ಹೇಳಿಕೊಂಡಿದೆ. ದೇಶದ ವಾಯುವ್ಯ ಪ್ರಾಂತ್ಯದ ಖೈಬರ್ ಪಖ್ತುನ್ಖ್ವಾದಲ್ಲಿ ಗುರುವಾರ ನಡೆದ ಎನ್‌ಕೌಂಟರ್‌ನಲ್ಲಿ ನಿಷೇಧಿತ ಸಂಘಟನೆಗೆ ಸೇರಿದ ಕನಿಷ್ಠ ಏಳು ಉಗ್ರರು ಸಾವನ್ನಪ್ಪಿದ್ದಾರೆ ಎಂದು ಮೂಲಗಳು ತಿಳಿಸಿವೆ. ಈ ಕಾರ್ಯಾಚರಣೆಯ ಸಮಯದಲ್ಲಿ ಪಾಕಿಸ್ತಾನಿ ಸೇನಾ ಕ್ಯಾಪ್ಟನ್ ಕೂಡ ಸಾವನ್ನಪ್ಪಿದ್ದಾರೆ. ಗುಪ್ತಚರ ಮಾಹಿತಿಯ ಆಧಾರದ ಮೇಲೆ ದಕ್ಷಿಣ ವಜೀರಿಸ್ತಾನದ ಗಡಿಯಲ್ಲಿರುವ ಡೇರಾ ಇಸ್ಮಾಯಿಲ್ ಖಾನ್ ಜಿಲ್ಲೆಯ ಕರ್ರಿ ಮಲಾಂಗ್ ಪ್ರದೇಶದಲ್ಲಿ ಈ ಕಾರ್ಯಾಚರಣೆ ನಡೆಸಲಾಗಿದೆ ಎಂದು ಹೇಳಲಾಗುತ್ತಿದೆ. ಪಾಕಿಸ್ತಾನ ಸೇನೆಯ ಪ್ರಕಾರ, ಕಾರ್ಯಾಚರಣೆಯಲ್ಲಿ ಇನ್ನೂ ಮೂವರು ಸೈನಿಕರು ಗಾಯಗೊಂಡಿದ್ದಾರೆ. ಏತನ್ಮಧ್ಯೆ, ಪಾಕಿಸ್ತಾನ ಸರಣಿ ಭಯೋತ್ಪಾದಕ ಘಟನೆಗಳನ್ನು ಎದುರಿಸುತ್ತಿದೆ. ಇತ್ತೀಚೆಗೆ, ಪಾಕಿಸ್ತಾನದ ಕ್ವೆಟ್ಟಾದಲ್ಲಿ ನಡೆದ ರೈಲು ಅಪಹರಣ ಘಟನೆಯು ಕೋಲಾಹಲವನ್ನು ಸೃಷ್ಟಿಸಿತು. ಇದರಲ್ಲಿ ಬಲೂಚಿಸ್ತಾನ್ ಲಿಬರೇಶನ್ ಆರ್ಮಿ (ಬಿಎಲ್‌ಎ) 400ಕ್ಕೂ ಹೆಚ್ಚು ಪಾಕಿಸ್ತಾನಿ ಪ್ರಯಾಣಿಕರು ಸೇರಿದಂತೆ ಇಡೀ ರೈಲನ್ನು ಅಪಹರಿಸಿತು. ಘಟನೆಯ ಬಗ್ಗೆ ಬಿಎಲ್‌ಎ ಮತ್ತು ಪಾಕಿಸ್ತಾನ ಸೇನೆಯಿಂದ ವಿಭಿನ್ನ ಹೇಳಿಕೆಗಳು ಬಂದಿದ್ದವು. ಪಾಕಿಸ್ತಾನ ಸೇನೆಯು 33 ಭಯೋತ್ಪಾದಕರನ್ನು ಕೊಂದು ಬಹುತೇಕ ಎಲ್ಲಾ ಒತ್ತೆಯಾಳುಗಳನ್ನು ರಕ್ಷಿಸಿದೆ ಎಂದು ಹೇಳಿತ್ತು. ದಾಳಿಯಲ್ಲಿ 27 ಪಾಕ್ ಸೈನಿಕರು ಮೃತಪಟ್ಟಿದ್ದರು ಎಂದು ಸೇನೆ ಹೇಳಿತ್ತು. ಆದರೆ 214 ಒತ್ತೆಯಾಳುಗಳೊಂದಿಗೆ ಹಲವಾರು ಪಾಕಿಸ್ತಾನಿ ಸೈನಿಕರನ್ನು ಹತ್ಯೆ ಮಾಡಿರುವುದಾಗಿ ಬಿಎಲ್‌ಎ ಹೇಳಿಕೊಂಡಿದೆ.

# ಸಂಬಳ ಕಡಿತದಿಂದ ರೊಚ್ಚಿಗೆದ್ದ ಡ್ರೈವರ್; ಮಿನಿ ಬಸ್‌ಗೆ ಬೆಂಕಿ ಹಚ್ಚಿ ಪ್ರತೀಕಾರ; ನಾಲ್ವರ ಸಜೀವ ದಹನ

**ಪುಣೆ:** ವೇತನ ಕಡಿತಗೊಳಿಸಿದ್ದಕ್ಕೆ ಅಸಮಾಧಾನಗೊಂಡಿದ್ದ ಚಾಲಕನೊಬ್ಬ ತಾನು ಕೆಲಸ ಮಾಡುತ್ತಿದ್ದ ಖಾಸಗಿ ಸಂಸ್ಥೆಯ ಮಿನಿಬಸ್ ಗೆ ಬೆಂಕಿ ಹಚ್ಚಿ ನಾಲ್ವರು ಉದ್ಯೋಗಿಗಳನ್ನು ಕೊಂದಿರುವ ಘಟನೆ ಪುಣೆ ಬಳಿ ನಡೆದಿದೆ. ಬೆಂಕಿ ಆಕಸ್ಮಿಕವಲ್ಲ, ವಿಧ್ವಂಸಕ ಕೃತ್ಯ ಎಂದು ತನಿಖೆಯಿಂದ ತಿಳಿದುಬಂದಿದೆ. ಚಾಲಕ ಕೆಲ ಸಿಬ್ಬಂದಿಯೊಂದಿಗೆ ಜಗಳವಾಡಿ, ವಿಧ್ವಂಸಕ ಕೃತ್ಯವೆಸಗಿದ್ದಾನೆ ಎಂದು ಪಿಂಪ್ರಿ ಚಿಂಚ್‌ವಾಡ್ ನ ಉಪ ಪೊಲೀಸ್ ಆಯುಕ್ತ ವಿಶಾಲ್ ಗಾಯಕ್‌ವಾಡ್ ತಿಳಿಸಿದ್ದಾರೆ. ಕೆಲವು ಉದ್ಯೋಗಿಗಳೊಂದಿಗೆ ಜಗಳ ಮಾಡಿಕೊಂಡಿದ್ದ ಚಾಲಕ ಜನಾರ್ದನ್ ಹಂಬರ್ಡೇಕರ್ ಸೇಡು ತೀರಿಸಿಕೊಳ್ಳಲು ಬಯಸಿದ್ದ. ಅಲ್ಲದೇ ಸಂಬಳ ಕಡಿತದ ಕಾರಣ ಸಂಸ್ಥೆಯ ವಿರುದ್ಧವೂ ಅಸಮಾಧಾನಗೊಂಡಿದ್ದ ಎನ್ನಲಾಗಿದೆ. ಬಸ್ ನಲ್ಲಿ ಸಿಲುಕಿ ಸಜೀವ ದಹನವಾದ ನಾಲ್ವರಲ್ಲಿ ಆತ ದ್ವೇಷ ಸಾಧಿಸುತ್ತಿದ್ದ ನೌಕರರು ಇರಲಿಲ್ಲ ಎಂದು ಡಿಸಿಪಿ ತಿಳಿಸಿದ್ದಾರೆ. ತನ್ನ 14 ಉದ್ಯೋಗಿಗಳನ್ನು ಕೆಲಸದ ಸ್ಥಳಕ್ಕೆ ಕರೆದೊಯ್ಯುತ್ತಿದ್ದ ವ್ಯೋಮಾ ಗ್ರಾಫಿಕ್ಸ್ ಒಡೆತನದ ಬಸ್‌ಗೆ ಪುಣೆ ನಗರದ ಸಮೀಪದ ಹಿಂಜಾವಾಡಿ ಪ್ರದೇಶದಲ್ಲಿ ಬೆಂಕಿ ಹೊತ್ತಿಕೊಂಡಿದೆ. ಗುರುವಾರ ಬಸ್ ಹಿಂಜವಾಡಿ ಬಳಿ ಬರುತ್ತಿದ್ದಂತೆ ಬೆಂಕಿಕಡ್ಡಿ ಹಚ್ಚಿ ಬಟ್ಟೆಗೆ ಬೆಂಕಿ ಹಚ್ಚಿದ್ದಾನೆ ಎಂದು ಡಿಸಿಪಿ ತಿಳಿಸಿದ್ದಾರೆ.

# ಇಂಡೋನೇಷ್ಯಾದ ಮೌಂಟ್ ಲೆವೊಟೊಬಿ ಜ್ವಾಲಾಮುಖಿ ಸ್ಫೋಟ

**ಜಕಾರ್ತಾ:** ಇಂಡೋನೇಷ್ಯಾದ ದಕ್ಷಿಣ - ಮಧ್ಯ ಭಾಗದಲ್ಲಿರುವ ಮೌಂಟ್ ಲೆವೊಟೊಬಿ ಲಾಕಿ ಲಾಕಿ ಜ್ವಾಲಾಮುಖಿ ಶುಕ್ರವಾರ ಮೂರು ಬಾರಿ ಸ್ಫೋಟಗೊಂಡಿದ್ದು, ಆಕಾಶದಲ್ಲಿ 8,000 ಮೀಟರ್ ಎತ್ತರದವರೆಗೆ ಬೂದಿಯ ಹೊಗೆ ಚಿಮ್ಮಿದೆ. ಪೂರ್ವ ನುಸಾ ತೆಂಗರಾ ಪ್ರಾಂತ್ಯದ ದೂರದ ದ್ವೀಪ ಫ್ಲೋರೆಸ್?ನಲ್ಲಿರುವ ಜ್ವಾಲಾಮುಖಿಯಲ್ಲಿ ನೂರಾರು ಭೂಕಂಪಗಳು ಸಂಭವಿಸಿವೆ ಮತ್ತು ಕಳೆದ ಏಳು ದಿನಗಳಲ್ಲಿ ಸಕ್ರಿಯ ಜ್ವಾಲಾಮುಖಿ ಚಟುವಟಿಕೆ ಗಮನಾರ್ಹವಾಗಿ ಹೆಚ್ಚಾಗಿದೆ.



ಗುರುವಾರ ತಡರಾತ್ರಿ ಮತ್ತು ಶುಕ್ರವಾರ ಮುಂಜಾನೆ ಮೂರು ಸ್ಫೋಟಗಳ ನಂತರ, ಜ್ವಾಲಾಮುಖಿ ಹಗಲಿನಲ್ಲಿ ಶಾಂತವಾಗಿತ್ತು. ವುಲಾಂಗಿಟಾಂಗ್?ನ ವೀಕ್ಷಣಾ ಪೋಸ್ಟ್?ನ ಮೇಲ್ವಿಚಾರಣೆ ವರದಿಯ ಪ್ರಕಾರ ಹಗಲಿನಲ್ಲಿ ಭೂಕಂಪನಗಳು ಕಡಿಮೆಯಾಗಿವೆ.

ಅಧಿಕಾರಿಗಳು ಸ್ಫೋಟದ ಎಚ್ಚರಿಕೆಯನ್ನು ಅತ್ಯುನ್ನತ ಮಟ್ಟಕ್ಕೆ ಏರಿಸಿದ್ದು, ಅಪಾಯದ ವಲಯವನ್ನು ಕುಳಿಯಿಂದ 7 ಕಿಲೋಮೀಟರ್ ನಿಂದ 8 ಕಿಲೋಮೀಟರ್ ಗೆ ವಿಸ್ತರಿಸಿದ್ದಾರೆ. ಪ್ರಸ್ತುತ ಈ ಪ್ರದೇಶದಿಂದ ನಿವಾಸಿಗಳನ್ನು ಸ್ಥಳಾಂತರಿಸಿರುವ ಬಗ್ಗೆ ಯಾವುದೇ ವರದಿಗಳು ಬಂದಿಲ್ಲ. ಸ್ಫೋಟದಿಂದಾಗಿ ಹಲವಾರು ವಿಮಾನಯಾನ ಸಂಸ್ಥೆಗಳು ಆಸ್ಟ್ರೇಲಿಯಾ ಮತ್ತು ಇಂಡೋನೇಷ್ಯಾದ ಪ್ರವಾಸಿ ದ್ವೀಪ ಬಾಲಿ ನಡುವಿನ ವಿಮಾನಗಳನ್ನು ರದ್ದುಗೊಳಿಸಿವೆ. ಇದರಿಂದ ದ್ವೀಪಕ್ಕೆ ಇತರ ಅಂತಾರಾಷ್ಟ್ರೀಯ ಮತ್ತು ದೇಶೀಯ ವಿಮಾನಗಳ ಆಗಮನ ವಿಳಂಬವಾಗಿವೆ.

ಭಾರಿ ಮಳೆಯಾಗುವ ಹಾಗೂ ಮಳೆ ನೀರಿನ ಮೂಲಕ ಜ್ವಾಲಾಮುಖಿಯ ಲಾವಾ ಹರಿದು ಬರುವ ಅಪಾಯವಿದೆ ಎಂದು ಇಂಡೋನೇಷ್ಯಾದ ಭೂವಿಜ್ಞಾನ ಸಂಸ್ಥೆ ಜನರಿಗೆ ಎಚ್ಚರಿಕೆ ನೀಡಿದೆ.

# ಸುಡಾನ್ ರಾಜಧಾನಿ ಖಾರ್ಟೂಮ್ ಮರು ವಶಪಡಿಸಿಕೊಂಡ ಸೇನೆ

**ಖಾರ್ಟೂಮ್:** ಸುಮಾರು 2 ವರ್ಷಗಳ ಹೋರಾಟದ ಬಳಿಕ ಸುಡಾನ್ ರಾಜಧಾನಿ ಖಾರ್ಟೂಮ್‌ನಲ್ಲಿ ಅರೆ ಸೇನಾಪಡೆಯ ಹಿಡಿತದಲ್ಲಿದ್ದ ಕೊನೆಯ ಭದ್ರಕೋಟೆ ರಿಪಬ್ಲಿಕನ್ ಅರಮನೆಯನ್ನು ತನ್ನ ಪಡೆ ವಶಕ್ಕೆ ಪಡೆದಿದ್ದು ಇದರೊಂದಿಗೆ ರಾಜಧಾನಿ ಖಾರ್ಟೂಮ್ ಅನ್ನು ಸಂಪೂರ್ಣ ಮರು ವಶಪಡಿಸಿಕೊಂಡಿರುವುದಾಗಿ ಸುಡಾನ್ ನ ಮಿಲಿಟರಿ ಹೇಳಿದೆ.

ನೈಲ್ ನದಿಯ ದಡದಲ್ಲಿರುವ ರಿಪಬ್ಲಿಕನ್ ಅರಮನೆ ಸೇನಾ ಮುಖ್ಯಸ್ಥ ಜ। ಅಬ್ದುಲ್ ಫತಾಹ್ ಬುರ್ಹಾನ್ ನೇತೃತ್ವದ ಮಿಲಿಟರಿಯ ವಶಕ್ಕೆ ಬಂದಿದ್ದು ಜ। ಮುಹಮ್ಮದ್ ಹಮ್ದನ್ ಡಗಾಲೊ ನೇತೃತ್ವದ ಅರೆ ಸೇನಾಪಡೆ ರ್‍ಯಾಪಿಡ್ ಸಪೋರ್ಟ್ ಫೋರ್ಸಸ್ ಸುಡಾನ್ ರಾಜಧಾನಿಯಿಂದ ಪಲಾಯನ ಮಾಡಿರುವುದಾಗಿ ವರದಿಯಾಗಿದೆ. ಕಳೆದ ಕೆಲ ದಿನಗಳಿಂದ ಸುಡಾನ್ ಮಿಲಿಟರಿ ಗಮನಾರ್ಹ ಮುನ್ನಡೆ ಸಾಧಿಸಿದ್ದು ಅರೆ ಸೇನಾಪಡೆಯ ಹಲವು ಭದ್ರಕೋಟೆಗಳನ್ನು ವಶಕ್ಕೆ ಪಡೆದುಕೊಂಡಿದೆ.



# ಮೀರತ್ ಕೊಲೆ ಪ್ರಕರಣದ ರಹಸ್ಯ ಬಯಲು

**ಲಕ್ನೋ:** ಮೀರತ್‌ನಲ್ಲಿ ಇತ್ತೀಚೆಗೆ ನಡೆದ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸ್ಫೋಟಕ ರಹಸ್ಯವೊಂದು ಬೆಳಕಿಗೆ ಬಂದಿದೆ. ಇದು ಪತ್ನಿಯ ಕ್ರೂರ ಮನಸ್ಥಿತಿಯನ್ನು ಬಹಿರಂಗಪಡಿಸಿದೆ.



ಹೌದು ಎರಡು ದಿನಗಳ ಹಿಂದೆಯಷ್ಟೇ ಮರ್ಚೆಂಟ್ ನೇವಿ ಅಧಿಕಾರಿ ಸೌರಭ್ ರಜಪೂತ್ ಅವರ ಪತ್ನಿ ಮುಸ್ಕಾನ್ ರಸ್ತೋಗಿ ತನ್ನ ಪ್ರಿಯಕರ ಸಾಹಿಲ್ ಶುಕ್ಲಾ ಜೊತೆಗೆ ಸೇರಿ ಪತ್ನಿಯನ್ನ ಹತ್ಯೆ ಮಾಡಿದ್ದಳು. ದೇಹವನ್ನು ಪೀಸ್ ಪೀಸ್ ಮಾಡಿ, ಡ್ರಮ್‌ನಲ್ಲಿ ತುಂಬಿ ಸಿಮೆಂಟ್ ಹಾಕಿ ಮುಚ್ಚಿಟ್ಟಿದ್ದಳು. ನಿನ್ನೆಯಷ್ಟೇ ಪ್ರಿಯಕರನೊಂದಿಗೆ ಸೇರಿ ಶವ ಸಾಗಿಸುತ್ತಿದ್ದ ಸಿಸಿಟಿವಿ ದೃಶ್ಯಾವಳಿ ವೈರಲ್ ಆಗಿತ್ತು. ಇದೀಗ ಕೊಲೆಯ ಮತ್ತೊಂದು ರಹಸ್ಯ ಬಯಲಾಗಿದೆ. ಪತ್ನಿ ಮುಸ್ಕಾನ್, ಪತಿಯ ಹತ್ಯೆಗೈದು ತಲೆ ಕಡಿದಿರುವುದಾಗಿ ಒಪ್ಪಿಕೊಂಡಿದ್ದಾಳೆ ಎಂದು ಮೀರತ್‌ನ ಪೊಲೀಸ್ ಅಧಿಕಾರಿ ಚೌಧರಿ ಚರಣ್ ಸಿಂಗ್ ತಿಳಿಸಿದ್ದಾರೆ.

ಬುಧವಾರ ಇಬ್ಬರನ್ನೂ ಜಿಲ್ಲಾ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿತ್ತು. ವಾದ - ಪ್ರತಿವಾದಗಳನ್ನು ಆಲಿಸಿದ ಬಳಿಕ ಕೋರ್ಟ್ 14 ದಿನಗಳ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ. ಇನ್ನೂ ಕೋರ್ಟ್‌ನಿಂದ ಕರೆದೊಯ್ಯುವ ವೇಳೆ ಇಬ್ಬರ ಮೇಲೆ ವಕೀಲರ ಗುಂಪೇ ಮುಸ್ಕಾನ್, ಸಾಹಿಲ್ ಮೇಲೆ ಹಲ್ಲೆಗೆ ಯತ್ನಿಸಿದ ಪ್ರಸಂಗವೂ ನಡೆದಿತ್ತು.

ಮುಸ್ಕಾನ್, ಸಾಹಿಲ್ ಒಂದೇ ಶಾಲೆಯಲ್ಲಿ ಓದಿದ್ದರು. ತಮ್ಮ ಶಾಲೆಯ ವಾಟ್ಸಪ್ ಗ್ರೂಪ್‌ನಲ್ಲಿದ್ದ ಇವರು 2019ರಿಂದಲೂ ಪ್ರೀತಿಸಲು ಶುರು ಮಾಡಿದ್ದರು. ಕೆಲ ದಿನಗಳ ಹಿಂದೆ ಮೀರತ್‌ನ ಮಾಲ್‌ನಲ್ಲಿ ನಡೆದ ಪಾರ್ಟಿ ವೇಳೆ ಭೇಟಿಯಾಗಿದ್ದರು. ಬಳಿಕ ಇಬ್ಬರ ಪ್ರೇಮ ಮತ್ತಷ್ಟು ಗಟ್ಟಿಯಾಗಿತ್ತು. ಈ ಸಂಬಂಧಕ್ಕೆ ಸೌರಭ್ ಅಡ್ಡಿಯಾಗುತ್ತಾನೆಂದು ಮುಗಿಸುವ ಪ್ಲ್ಯಾನ್ ಮಾಡಿದರು. ಕೊಂದ ನಂತರ ಸ್ನಾನ ಕೊಠಡಿಗೆ ಅವನ ಮೃತದೇಹವನ್ನು ಎಳೆದೊಯ್ದು, ರೇಜರ್‌ನಿಂದ ತಲೆ ಕಡಿದಿದ್ದರು. ಕೈಗಳನ್ನು ಕಟ್ಟಿ ಹಾಕಿ, ದೇಹವನ್ನು ತುಂಡು ತುಂಡಾಗಿ ಕತ್ತರಿಸಿದ್ದರು. ಬಳಿಕ ಅದನ್ನು ಪ್ಲಾಸ್ಟಿಕ್ ಚೀಲಗಳಲ್ಲಿ ತುಂಬಿಸಿ ಡಬಲ್ ಬೆಡ್‌ಬಾಕ್ಸ್‌ನಲ್ಲಿಟ್ಟು ಅದರ ಮೇಲೆಯೇ ಪತ್ನಿ ನಿದ್ರೆ ಮಾಡಿದ್ದರು. ಅತ್ತ ಸಾಹಿಲ್ ಅವನ ಕೈಗಳನ್ನು ತನ್ನ ಮನೆಗೆ ತೆಗೆದುಕೊಂಡು ಹೋಗಿ, ಬೆಡ್ ರೂಮ್‌ನಲ್ಲಿಟ್ಟುಕೊಂಡಿದ್ದ.

# ಮಧ್ಯಾಹ್ನದೂಟದಲ್ಲಿ ಕೊಬ್ಬು, ತೈಲ ಪ್ರಮಾಣ ಇಳಿಸುವ ಕೇಂದ್ರದ ಸೂಚನೆಗೆ ವಿರೋಧ

**ಹೊಸದಿಲ್ಲಿ:** ಪ್ರಧಾನಮಂತ್ರಿ ಪೋಷಣ್ ಶಕ್ತಿ ನಿರ್ಮಾಣ್ ಯೋಜನೆಯಡಿ ಸರಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿ ನೀಡಲಾಗುವ ಮಧ್ಯಾಹ್ನದೂಟದಲ್ಲಿ ತೈಲ ಬಳಕೆಯನ್ನು ಕಡಿಮೆಗೊಳಿಸಲು ಕೇಂದ್ರ ಸರಕಾರವು ಒತ್ತು ನೀಡುತ್ತಿರುವುದು ಅವೈಜ್ಞಾನಿಕವೆಂದು ಆಹಾರ ಹಾಗೂ ಪೌಷ್ಟಿಕತೆಗಾಗಿನ ಕಾರ್ಯಕರ್ತರ ಸಂಘಟನೆ ' ಆಹಾರದ ಹಕ್ಕು ಅಭಿಯಾನ' ಹೇಳಿದೆ.



ಮಕ್ಕಳಿಗೆ ಆರೋಗ್ಯಪೂರ್ಣವಾದ ಕೊಬ್ಬು ಹಾಗೂ ತೈಲವನ್ನು ಹೆಚ್ಚಿನ ಪ್ರಮಾಣದಲ್ಲಿ ಒದಗಿಸುವ ಅಗತ್ಯವಿದೆ ಎಂದು ಕಾರ್ಯಕರ್ತರು ಪ್ರತಿಪಾದಿಸಿದ್ದಾರೆ. '' ನಮ್ಮ ಅನುಭವದ ಪ್ರಕಾರ, ಬಡ ಸಮುದಾಯಗಳಲ್ಲಿ ಶಿಫಾರಸುಮಾಡಲ್ಪಟ್ಟ ಪ್ರಮಾಣದಲ್ಲಿ ಕೊಬ್ಬು ಹಾಗೂ ತೈಲ ಲಭ್ಯವಾಗುತ್ತಿಲ್ಲ ಎಂದು ಅವರು ಹೇಳಿದ್ದಾರೆ.

ಹೀಗಾಗಿ ದೇಶದ ಬಹುತೇಕ ಭಾಗಗಳಲ್ಲಿ ಮಕ್ಕಳು ಹಾಗೂ ವಯಸ್ಕರು ಹೆಚ್ಚಿನ ಪ್ರಮಾಣದಲ್ಲಿ ಆರೋಗ್ಯಕರ ಕೊಬ್ಬು ಹಾಗೂ ತೈಲವನ್ನು ಸೇವಿಸಬೇಕಾಗಿದೆ ಎಂದು ಹೇಳಿಕೆ ತಿಳಿಸಿದೆ. ಪ್ರಧಾನಮಂತ್ರಿ ಪೋಷಣ್ ಶಕ್ತಿ ನಿರ್ಮಾಣ ಕಾರ್ಯಕ್ರಮದಡಿ ಜಾರಿಗೊಳಿಸಲಾದ ಮಧ್ಯಾಹ್ನದೂಟ ಕಾರ್ಯಕ್ರಮದಲ್ಲಿ ಅಡುಗೆ ತೈಲದ ಬಳಕೆಯನ್ನು ಶೇಕಡ 10ರಷ್ಟು ಕಡಿಮೆಗೊಳಿಸಬೇಕೆಂದು ಕೇಂದ್ರ ಶಿಕ್ಷಣ ಸಚಿವಾಲಯವು ಮಾರ್ಚ್ 15ರಂದು ಸೂಚನೆಯನ್ನು ನೀಡಿತ್ತು.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಕನ್ನಡದಲ್ಲಿ ಸಿನಿಮಾ ಮಾಡಲಿದ್ದಾರೆ ತಮಿಳಿನ ಖ್ಯಾತ ನಿರ್ದೇಶಕ ಗೌತಮ್

ಖ್ಯಾತ ನಿರ್ದೇಶಕ ಗೌತಮ್ ವಾಸುದೇವ್ ಮೆನನ್ ತಮಿಳು ಸೇರಿದಂತೆ ಬಹುಭಾಷೆಗಳಲ್ಲಿ ನಿರ್ದೇಶನ ಮಾಡಿ ಸೈ ಎನಿಸಿಕೊಂಡಿದ್ದಾರೆ. ಇದೀಗ ಕನ್ನಡದಲ್ಲಿ ಸಿನಿಮಾ ನಿರ್ದೇಶನ ಮಾಡುವ ಪ್ಲ್ಯಾನ್ ಅನ್ನು ನಿರ್ದೇಶಕ ಸಂದರ್ಶನವೊಂದರಲ್ಲಿ ಹಂಚಿಕೊಂಡಿದ್ದಾರೆ.

ಸಂದರ್ಶನವೊಂದರಲ್ಲಿ ಡೈರೆಕ್ಟರ್ ಗೌತಮ್ ಮಾತನಾಡಿ, ಈ ವರ್ಷ ನಾನು ಕನ್ನಡ ಸಿನಿಮಾ ಮಾಡುವ ಆಲೋಚನೆ ಹೊಂದಿದ್ದೇನೆ. ದೊಡ್ಡ ಸಿನಿಮಾ ನಿರ್ಮಿಸುವ ಪ್ಲ್ಯಾನ್‌ಯಿದೆ ಎಂದಿದ್ದಾರೆ. ದಕ್ಷಿಣದ ಜೊತೆಗೆ ಬಾಲಿವುಡ್‌ನಲ್ಲೂ ನಾನು ಹೆಚ್ಚಿನ ಸಿನಿಮಾಗಳನ್ನು ಮಾಡಿದ್ದೇನೆ. ನಾನು ಯಾವಾಗಲೂ ಭಾಷೆಯ ಗಡಿ ದಾಟಲು ಇಷ್ಟಪಡುತ್ತೇನೆ. ಈಗ ನಾನು ಕನ್ನಡದಲ್ಲಿ ಸಿನಿಮಾ ಮಾಡಲು ಗುರಿ ಇಟ್ಟುಕೊಂಡಿದ್ದೇನೆ ಎಂದಿದ್ದಾರೆ.



ಕನ್ನಡ ನಾನು ಮಾತನಾಡುವ ಭಾಷೆಯಲ್ಲ. ಆದರೆ ನನಗೆ ಗೊತ್ತಿಲ್ಲದ ಭಾಷೆಯಲ್ಲಿ ಸಿನಿಮಾ ಮಾಡುವ ಸವಾಲನ್ನು ಸ್ವೀಕರಿಸಲು ರೆಡಿಯಾಗಿದ್ದೇನೆ ಎಂದು ಕನ್ನಡ ಸಿನಿಮಾ ಮಾಡುವ ಬಗ್ಗೆ ಇಂಗಿತ ವ್ಯಕ್ತಪಡಿಸಿದ್ದಾರೆ. ಹಾಗಾಗಿ ಸ್ಯಾಂಡಲ್‌ವುಡ್‌ನ ಯಾವ ನಟರೊಂದಿಗೆ ಅವರು ಸಿನಿಮಾ ಮಾಡಲಿದ್ದಾರೆ ಎಂದು ಅಭಿಮಾನಿಗಳು ಕುತೂಹಲದಿಂದ ಎದುರು ನೋಡುತ್ತಿದ್ದಾರೆ.

ಅಂದಹಾಗೆ, ನಾಗಚೈತನ್ಯ ಮತ್ತು ಸಮಂತಾ ನಟಿಸಿದ ಯೇ ಮಾಯಾ ಚೇಸಾವೆ, ಎಕ್ ದಿವಾನಾ ಥಾ, ಕುಟ್ಟಿ ಸ್ಟೋರಿ ಸೇರಿದಂತೆ ಬಹುಭಾಷೆಗಳಲ್ಲಿ ಅವರು ನಿರ್ದೇಶನ ಮಾಡಿದ್ದಾರೆ. ಸದ್ಯ ಚಿಯಾನ್ ವಿಕ್ರಮ್ ನಟನೆಯ ಹೊಸ ಸಿನಿಮಾಗೆ ಗೌತಮ್ ವಾಸುದೇವ್ ಮೆನನ್ ನಿರ್ದೇಶನ ಮಾಡಿದ್ದಾರೆ. ಮುಂದಿನ ತಿಂಗಳು ಏಪ್ರಿಲ್‌ನಲ್ಲಿ ಈ ಸಿನಿಮಾ ರಿಲೀಸ್ ಆಗಲಿದೆ.



# 'ಡ್ರ್ಯಾಗನ್' ಚಿತ್ರದ ಬಳಿಕ ಹೆಚ್ಚಿದ ಬೇಡಿಕೆ 'ಮುಗಿಲ್‌ಪೇಟೆ' ನಟಿಗೆ ಬಂಪರ್ ಆಫರ್

ಕನ್ನಡದ 'ಮುಗಿಲ್‌ಪೇಟೆ' ಚಿತ್ರದ ನಟಿ ಕಯಾದು ಲೋಹರ್ ಇದೀಗ ಸೌತ್‌ನಲ್ಲಿ ಬ್ಯುಸಿಯಾಗಿದ್ದಾರೆ. ಇತ್ತೀಚೆಗೆ ಕಯಾದು ನಟಿಸಿದ ತಮಿಳಿನ 'ಡ್ರ್ಯಾಗನ್' ಸಿನಿಮಾ ಸಕ್ಸಸ್ ಕಂಡಿದೆ. ಈ ಬೆನ್ನಲ್ಲೇ ಹಲವಾರು ಸಿನಿಮಾ ಅವಕಾಶಗಳು ಅವರನ್ನು ಅರಸಿ ಬಂದಿವೆ. ಸ್ಟಾರ್ ನಟನ ಜೊತೆ ನಟಿಸುವ ಚಾನ್ಸ್ ಸಿಕ್ಕಿದೆ.

ಫೆ.21ರಂದು ರಿಲೀಸ್ ಆದ ತಮಿಳಿನ 'ಡ್ರ್ಯಾಗನ್' ಸಿನಿಮಾದಲ್ಲಿ ಪ್ರದೀಪ್ ರಂಗನಾಥನ್‌ಗೆ ನಾಯಕಿಯಾಗಿ ಗಮನ ಸೆಳೆದಿದ್ದಾರೆ. ಈ ಸಿನಿಮಾ ಯಶಸ್ವಿಯಾಗಿದೆ. ಈ ಬೆನ್ನಲ್ಲೇ ತಮಿಳಿನ ಖ್ಯಾತ ನಟ ಸಿಂಬು ನಟನೆಯ ಹೊಸ ಸಿನಿಮಾಗೆ ನಾಯಕಿಯಾಗಿ ಆಯ್ಕೆಯಾಗಿದ್ದಾರೆ ಎನ್ನಲಾದ ವಿಚಾರವೊಂದು ಚರ್ಚೆಗೆ ಗ್ರಾಸವಾಗಿದೆ. ಈ ಚಿತ್ರವನ್ನು ರಾಮ್ ಕುಮಾರ್ ಎಂಬುವವರು ನಿರ್ದೇಶನ ಮಾಡ್ತಿದ್ದಾರೆ.

ಇನ್ನೂ ತೆಲುಗಿನ ನಟ ವಿಶ್ವಕ್ ಸೇನ್ ನಟನೆಯ 'ಫಂಕಿ' ಚಿತ್ರಕ್ಕೂ ಕಯಾದು ಅವರನ್ನೇ ನಾಯಕಿಯಾಗಿ ಸೆಲೆಕ್ಟ್ ಮಾಡಿದ್ದಾರೆ ಎನ್ನಲಾಗಿದೆ. ಈ ಎರಡು ಪ್ರಾಜೆಕ್ಟ್‌ಗಳ ಬಗ್ಗೆ ಅಧಿಕೃತವಾಗಿ ಘೋಷಣೆ ಆಗುವವರೆಗೂ ಕಾದುನೋಡಬೇಕಿದೆ.

ಸದ್ಯ ಕಯಾದು ತಮಿಳಿನ 'ಹೃದಯಂ ಮುರಳಿ' ಸಿನಿಮಾದಲ್ಲಿ ನಟಿಸುತ್ತಿದ್ದಾರೆ. ಅಥರ್ವಗೆ ನಾಯಕಿಯಾಗಿ ಸಾಥ್ ನೀಡುತ್ತಿದ್ದಾರೆ. ಈ ಸಿನಿಮಾದ ಚಿತ್ರೀಕರಣ ಭರದಿಂದ ನಡೆಯುತ್ತಿದೆ.

2021ರಲ್ಲಿ ಕ್ರೇಜಿಸ್ಟಾರ್ ರವಿಚಂದ್ರನ್ ಪುತ್ರ ಮನೋರಂಜನ್ ನಟನೆಯ 'ಮುಗಿಲ್‌ಪೇಟೆ' ಚಿತ್ರಕ್ಕೆ ನಾಯಕಿಯಾಗಿ ಕಯಾದು ಸ್ಯಾಂಡಲ್‌ವುಡ್‌ಗೆ ಎಂಟ್ರಿ ಕೊಟ್ಟರು. ಆ ನಂತರ ಮಲಯಾಳಂ, ತೆಲುಗು, ಮರಾಠಿ ಸಿನಿಮಾಗಳಲ್ಲಿ ನಟಿಸಿದರು. ಈಗ ತೆಲುಗಿನಿಂದಲೂ ಅವಕಾಶಗಳು ಸಿಗುತ್ತಿವೆ.



# ಜಾನ್ವಿ ಕಪೂರ್‌ಗೆ ವಿಶೇಷ ಉಡುಗೊರೆ ನೀಡಿದ ರಾಮ್ ಚರಣ್ ಪತ್ನಿ



ಬಾಲಿವುಡ್ ಬೆಡಗಿ ಜಾನ್ವಿ ಕಪೂರ್ ಅವರು ಸದ್ಯ ರಾಮ್ ಚರಣ್‌ಗೆ ನಾಯಕಿಯಾಗಿ ಹೊಸ ಪ್ರಾಜೆಕ್ಟ್‌ನಲ್ಲಿ ನಟಿಸುತ್ತಿದ್ದಾರೆ. ಹೈದರಾಬಾದ್‌ನಲ್ಲಿ ಶೂಟಿಂಗ್ ನಡೆಯುತ್ತಿದೆ. ಈ ಹಿನ್ನೆಲೆ ರಾಮ್ ಚರಣ್ ಪತ್ನಿ ಉಪಾಸನಾ ಭೇಟಿ ನೀಡಿ ಜಾನ್ವಿಗೆ ವಿಶೇಷ ಉಡುಗೊರೆಯೊಂದನ್ನು ನೀಡಿದ್ದಾರೆ.

ಸೆಟ್‌ಗೆ ಬ್ರೇಕ್ ಇದ್ದ ಸಂದರ್ಭದಲ್ಲಿ ಉಪಾಸನಾ ಭೇಟಿ ನೀಡಿದ್ದಾರೆ. ಈ ವೇಳೆ, 'ಅತ್ತಮ್ಮಾ ಕಿಚನ್' ಕಡೆಯಿಂದ ಬಾಕ್ಸ್ ನೀಡಲಾಗಿದೆ. ರಾಮ್ ಚರಣ್ ತಾಯಿ ಸುರೇಖಾ ತಯಾರಿಸಿದ ರೆಸಿಪಿ ಇದಾಗಿದೆ. ಇದನ್ನು 'ಅತ್ತಮ್ಮಾ ಕಿಚನ್' ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಳ್ಳಲಾಗಿದೆ.

ಇನ್ನೂ 'ಆರ್ ಸಿ 16' ಸಿನಿಮಾದಲ್ಲಿ ರಾಮ್ ಚರಣ್, ಜಾನ್ವಿ ಕಪೂರ್, ಶಿವರಾಜ್‌ಕುಮಾರ್ ಸೇರಿದಂತೆ ಹಲವರು ನಟಿಸುತ್ತಿದ್ದಾರೆ. ಶೂಟಿಂಗ್ ಭರದಿಂದ ನಡೆಯುತ್ತಿದೆ. ಈ ಚಿತ್ರವನ್ನು ಬುಚಿ ಬಾಬು ಸನಾ ನಿರ್ದೇಶನ ಮಾಡುತ್ತಿದ್ದಾರೆ.

# ರೊಮ್ಯಾಂಟಿಕ್ ಲವ್ ಸ್ಟೋರಿ ಹೇಳಲು ಸಜ್ಜಾದ 'ಉಲ್ಲಾಸ ಉತ್ಸಾಹ' ನಟಿ ಯಾಮಿ



ಕನ್ನಡದ 'ಉಲ್ಲಾಸ ಉತ್ಸಾಹ' ಸಿನಿಮಾದ ನಟಿ ಯಾಮಿ ಗೌತಮ್ ಮುದ್ದು ಮಗನ ಆರೈಕೆಯಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ಮತ್ತೆ ಸಿನಿಮಾಗೆ ಕಮ್ ಬ್ಯಾಕ್ ಆಗಲು ಅವರು ತಯಾರಿ ನಡೆಸಿದ್ದಾರೆ. ಹೊಸ ಬಾಲಿವುಡ್ ಸಿನಿಮಾ ಮೂಲಕ ಯಾಮಿ ಮತ್ತೆ ಅಭಿಮಾನಿಗಳ ಮುಂದೆ ಬರಲಿದ್ದಾರೆ.

'ಗಿನ್ನಿ ವೆಡ್ಸ್ ಸನ್ನಿ ಪಾರ್ಟ್ 2' ಚಿತ್ರಕ್ಕೆ ಯಾಮಿ ಗೌತಮ್ ನಾಯಕಿಯಾಗಿ ನಟಿಸಲಿದ್ದಾರೆ. ವಿಕ್ರಾಂತ್ ಮಾಸ್ಸಿಗೆ ಅವರು ಜೊತೆಯಾಗಲಿದ್ದಾರೆ. ಸದ್ಯದಲ್ಲೇ ಪ್ರಿ-ಪ್ರೊಡಕ್ಷನ್ ಕೆಲಸ ಶುರುವಾಗಲಿದೆ. ಇದೊಂದು ರೊಮ್ಯಾಂಟಿಕ್ ಮತ್ತು ಕಾಮಿಡಿ ಒಳಗೊಂಡ ಸಿನಿಮಾ ಆಗಿರಲಿದೆ. ಸದ್ಯದಲ್ಲೇ ಶೂಟಿಂಗ್ ಬಗ್ಗೆ ಚಿತ್ರತಂಡ ಮಾಹಿತಿ ನೀಡಲಿದೆ.

ಇನ್ನೂ ಈ ಹಿಂದೆ 'ಗಿನ್ನಿ ವೆಡ್ಸ್ ಸನ್ನಿ' ಸಿನಿಮಾ 2010ರಲ್ಲಿ ತೆರೆ ಕಂಡಿತ್ತು. ಅದರಲ್ಲಿ ವಿಕ್ರಾಂತ್ ಮತ್ತು ಯಾಮಿ ಜೊತೆಯಾಗಿ ನಟಿಸಿದ್ದರು. ಇದೀಗ ಅದೇ ಟೈಟಲ್ ಜೊತೆ ಹೊಸ ಬಗೆಯ ಕಥೆ ಹೇಳಲು ನಿರ್ದೇಶಕರು ಹೊರಟಿದ್ದಾರೆ.

ಇನ್ನೂ ಯಾಮಿ ಗೌತಮ್ ಅವರು ನಿರ್ದೇಶಕ ಆದಿತ್ಯಾ ಧರ್ ಜೊತೆ 2021ರಲ್ಲಿ ಮದುವೆಯಾದರು. ಕಳೆದ ವರ್ಷ ಮೇನಲ್ಲಿ ಗಂಡು ಮಗುವಿಗೆ ಜನ್ಮ ನೀಡಿದರು.

# ಆರ್‌ಸಿಬಿ - ಕೆಕೆಆರ್ ನಡುವಿನ ಉದ್ಘಾಟನಾ ಪಂದ್ಯಕ್ಕೆ ಮಳೆ ಭೀತಿ

18ನೇ ಆವೃತ್ತಿಯ ಇಂಡಿಯನ್ ಪ್ರೀಮಿಯರ್ ಲೀಗ್ ಆರಂಭಕ್ಕೆ ಕ್ಷಣಗಣನೆ ಬಾಕಿಯಿದೆ. ಶನಿವಾರ 7:30ಕ್ಕೆ ಆರ್‌ಸಿಬಿ ಮತ್ತು ಕೆಕೆಆರ್ ನಡುವೆ ಮೊದಲ ಪಂದ್ಯ ನಡೆಯಲಿದೆ. ಆದ್ರೆ ಹಾಲಿ ಚಾಂಪಿಯನ್ ಕೋಲ್ಕತ್ತಾ ನೈಟ್ ರೈಡರ್ಸ್ ಹಾಗೂ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಗಳ ನಡುವೆ ಈಡನ್‌ಗಾರ್ಡನ್‌ನಲ್ಲಿ ನಿಗದಿಯಾಗಿರುವ ಉದ್ಘಾಟನಾ ಪಂದ್ಯಕ್ಕೆ ಮಳೆ ಭೀತಿ ಎದುರಾಗಿದೆ.

18ನೇ ಆವೃತ್ತಿಯ ಐಪಿಎಲ್ ಟೂರ್ನಿಯನ್ನು ವರ್ಣರಂಜಿತ ಉದ್ಘಾಟನಾ ಸಮಾರಂಭದ ಮೂಲಕ ಪ್ರತಿಷ್ಠಿತ ಮೈದಾನದಲ್ಲಿ ಚಾಲನೆ ನೀಡಲು ಐಪಿಎಲ್ ಮಂಡಳಿ ಹಾಗೂ ಬಿಸಿಸಿಐ ಸಕಲ ಸಿದ್ದತೆ ಮಾಡಿಕೊಂಡಿದೆ. ಆದ್ರೆ ಹವಾಮಾನ ಇಲಾಖೆಯ ಮುನ್ಸೂಚನೆ ಅಭಿಮಾನಿಗಳ ಆಸೆಗೆ ತಣ್ಣೀರು ಎರಚಬಹುದು.



ಈ ಬಾರಿಯು ಐಪಿಎಲ್ ಟೂರ್ನಿಯು ಮಾ.22ರಿಂದ ಕೋಲ್ಕತಾದಲ್ಲಿ ಆರಂಭವಾಗಿ ಮೇ 25ರಂದು ಕೋಲ್ಕತ್ತಾದಲ್ಲಿಯೇ ಕೊನೆಯಾಗಲಿದೆ. ಮೇ 18ರ ತನಕ ಲೀಗ್ ಹಂತದ ಪಂದ್ಯ ನಡೆಯಲಿದ್ದು, ಮೇ 20ರಂದು ಮೊದಲ ಕ್ವಾಲಿಫೈಯರ್, ಮೇ 21ರಂದು ಎಲಿಮಿನೇಟರ್ ಸುತ್ತು ಹೈದರಾಬಾದ್‌ನಲ್ಲಿ ನಡೆಯಲಿದೆ. ಮೇ 23ರಂದು ಕ್ವಾಲಿಫೈಯರ್-2 ಕೋಲ್ಕತಾದಲ್ಲಿ ನಿಗದಿಯಾಗಿದೆ. ಒಟ್ಟು 10 ತಂಡಗಳು ಪಂದ್ಯಾವಳಿಯಲ್ಲಿ ಭಾಗವಹಿಸಲಿದ್ದು, 13 ನಗರಗಳಲ್ಲಿ 65 ದಿನಗಳ ಕಾಲ ಒಟ್ಟು 74 ಪಂದ್ಯಗಳು ನಡೆಯಲಿವೆ. ಡಬಲ್ ಹೆಡರ್ ಪಂದ್ಯಗಳು ಇರುವಾಗ ಮಧ್ಯಾಹ್ನದ ಪಂದ್ಯ 3:30 ಹಾಗೂ ರಾತ್ರಿ ಪಂದ್ಯ 7:30ಕ್ಕೆ ಆರಂಭವಾಗಲಿದೆ.

ಈಡನ್ ಗಾರ್ಡನ್ಸ್ ಸ್ಟೇಡಿಯಂ ಸುತ್ತಮುತ್ತ ಭಾರೀ ಮೋಡ ಕವಿದಿದ್ದು, ಗುರುವಾರ ಮುನ್ನಚ್ಚರಿಕೆಯ ಕ್ರಮವಾಗಿ ಮೈದಾನದ ಸಿಬ್ಬಂದಿ ಆಡುವ ಪ್ರದೇಶದಲ್ಲಿ ಹೊದಿಕೆಗಳನ್ನು ಹಾಸಿದ್ದಾರೆ. ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಈ ಪ್ರದೇಶದಲ್ಲಿ 'ಆರೆಂಜ್ ಅಲರ್ಟ್'ಘೋಷಿಸಿದೆ. ಶನಿವಾರದ ತನಕ ಗುಡುಗು, ಮಿಂಚು ಹಾಗೂ ಬಿರುಗಾಳಿಯೊಂದಿಗೆ ಹಗುರ ಹಾಗೂ ಮಧ್ಯಮ ಪ್ರಮಾಣದ ಮಳೆಯಾಗುವ ಸಾಧ್ಯತೆ ಇದೆ ಮುನ್ಸೂಚನೆ ನೀಡಿದೆ. ಇಂದು ಸಹ ಕೋಲ್ಕತ್ತಾದಲ್ಲಿ ಮಳೆಯಾಗಿದ್ದರಿಂದ ಅಭ್ಯಾಸ ಪಂದ್ಯವನ್ನು ರದ್ದುಗೊಳಿಸಲಾಗಿದೆ.

ಐಪಿಎಲ್‌ನ ಉದ್ಘಾಟನಾ ದಿನವಾದ ಮಾರ್ಚ್ 22ರಂದು ಗರಿಷ್ಠ ಪ್ರಮಾಣದ ಮಳೆಯಾಗಬಹುದು ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಈ ಹಿನ್ನೆಲೆ ಪಂದ್ಯ ರದ್ದಾಗುವ ಸಾಧ್ಯತೆಯಿದೆ ಎಂದು ಹೇಳಲಾಗುತ್ತಿದೆ. ಒಂದು ವೇಳೆ ಪಂದ್ಯ ರದ್ದಾದ್ರೆ, ಉಭಯ ತಂಡಗಳಿಗೆ ತಲಾ ಒಂದೊಂದು ಅಂಕ ಸಿಗಲಿದೆ.

# 'ಅಂಕಿಅಂಶಗಳೇ ಎಲ್ಲವನ್ನೂ ಹೇಳುತ್ತವೆ'

## ರೋಹಿತ್‌ಗೆ ತಿರುಗೇಟು ನೀಡಿದ ಮೊಹಮ್ಮದ್ ಸಿರಾಜ್

ಕೆಲವೇ ತಿಂಗಳುಗಳ ಹಿಂದೆ ಟೀಂ ಇಂಡಿಯಾದ ಬೌಲಿಂಗ್ ವಿಭಾಗದ ಖಾಯಂ ಸದಸ್ಯ ಎನಿಸಿಕೊಂಡಿದ್ದ ಬೌಲರ್ ಮೊಹಮ್ಮದ್ ಸಿರಾಜ್‌ಗೆ ತಂಡದಲ್ಲಿ ಸ್ಥಾನ ಇಲ್ಲದಂತಾಗಿದೆ. ಆಸ್ಟ್ರೇಲಿಯಾ ವಿರುದ್ಧದ ಐದು ಪಂದ್ಯಗಳ ಟೆಸ್ಟ್ ಸರಣಿಯಲ್ಲಿ ಕೊನೆಯದಾಗಿ ಆಡಿದ್ದ ಸಿರಾಜ್‌ರನ್ನು ಆ ಬಳಿಕ ತಂಡದಿಂದ ಕೈಬಿಡಲಾಗಿದೆ. ಟೆಸ್ಟ್ ಮಾದರಿಯ ಹೊರತಾಗಿ ಏಕದಿನ ಮಾದರಿಗೂ ಸಿರಾಜ್ ಆಯ್ಕೆಯಾಗಿಲ್ಲ. ಇತ್ತೀಚೆಗಷ್ಟೇ ನಡೆದಿದ್ದ ಚಾಂಪಿಯನ್ಸ್ ಟ್ರೋಫಿಯಲ್ಲಿ ಸಿರಾಜ್‌ಗೆ ಭಾರತ ತಂಡದಲ್ಲಿ ಅವಕಾಶ ಸಿಕ್ಕಿರಲಿಲ್ಲ. ತಂಡವನ್ನು ಪ್ರಕಟಿಸುವ ವೇಳೆ ಸಿರಾಜ್‌ರನ್ನು ಕೈಬಿಟ್ಟಿದ್ಯಾಕೆ



ಎಂಬುದನ್ನು ವಿವರಿಸಿದ್ದ ನಾಯಕ ರೋಹಿತ್, ಸಿರಾಜ್ ಹಳೆಯ ಚೆಂಡಿನಲ್ಲಿ ಅಷ್ಟೊಂದು ಪರಿಣಾಮಕಾರಿಯಲ್ಲ. ಹಾಗಾಗಿ ಅವರನ್ನು ಆಯ್ಕೆ ಮಾಡಲಾಗಿಲ್ಲ ಎಂದಿದ್ದರು. ಆದರೀಗ ರೋಹಿತ್ ಅವರ ಈ ಹೇಳಿಕೆಗೆ ಸಿರಾಜ್ ಮಾರ್ಮಿಕ ಉತ್ತರ ನೀಡಿ, ನಾಯಕನಿಗೆ ಟಕ್ಕರ್ ನೀಡುವ ಕೆಲಸ ಮಾಡಿದ್ದಾರೆ.

**ಅಂಕಿಅಂಶಗಳೇ ಎಲ್ಲವನ್ನೂ ಹೇಳುತ್ತವೆ:** ವಾಸ್ತವವಾಗಿ ಈ ಬಾರಿಯ ಐಪಿಎಲ್‌ನಿಂದ ಮೊಹಮ್ಮದ್ ಸಿರಾಜ್, ಗುಜರಾತ್ ಟೈಟನ್ಸ್ ತಂಡದ ಪರ ಆಡಲಿದ್ದಾರೆ. ಹೀಗಾಗಿ ಐಪಿಎಲ್‌ನ ಹೊಸ ಸೀಸನ್‌ಗೆ ಮೊದಲು ಗುಜರಾತ್ ಟೈಟನ್ಸ್ ಪತ್ರಿಕಾಗೋಷ್ಠಿಯನ್ನು ಆಯೋಜಿಸಿತ್ತು. ಈ ಸಮಯದಲ್ಲಿ, ಹೊಸ ತಂಡದ ಪರ ಕಣಕ್ಕಿಳಿಯುತ್ತಿರುವ ಸಿರಾಜ್ ಬಳಿ ಚಾಂಪಿಯನ್ಸ್ ಟ್ರೋಫಿಗೆ ಆಯ್ಕೆಯಾಗದಿರುವ ಬಗ್ಗೆ ಮತ್ತು ರೋಹಿತ್ ನೀಡಿದ ಕಾರಣದ ಬಗ್ಗೆ ಪ್ರಶ್ನೆಗಳನ್ನು ಕೇಳಲಾಯಿತು. ಇದಕ್ಕೆ ಮಾರ್ಮಿಕ ಉತ್ತರ ನೀಡಿರುವ ಸಿರಾಜ್, 'ಕಳೆದ ವರ್ಷ, ಹಳೆಯ ಚೆಂಡಿನಲ್ಲಿ ಅತಿ ಹೆಚ್ಚು ವಿಕೆಟ್ ಪಡೆದ ವಿಶ್ವದ ಹತ್ತು ವೇಗದ ಬೌಲರ್‌ಗಳಲ್ಲಿ ನನ್ನ ಹೆಸರು ಸೇರಿತ್ತು. ಎಕಾನಮಿ ರೇಟ್ ಕೂಡ ಕಡಿಮೆ ಇದೆ. ಅಂಕಿಅಂಶಗಳೇ ಎಲ್ಲವನ್ನೂ ಹೇಳುತ್ತವೆ. ನಾನು ಹೊಸ ಮತ್ತು ಹಳೆಯ ಚೆಂಡುಗಳೆರಡರಲ್ಲೂ ಉತ್ತಮ ಪ್ರದರ್ಶನ ನೀಡಿದ್ದೇನೆ ಎಂದಿದ್ದಾರೆ.

ವಿಧಾನಸಭೆ ಸದನದ ಕಾರ್ಯಕಲಾಪಕ್ಕೆ ಅಡ್ಡಿ

# 18 ಸದಸ್ಯರು 6 ತಿಂಗಳ ಕಾಲ ಸಸ್ಪೆಂಡ್

**ಬೆಂಗಳೂರು:** ವಿಧಾನಸಭೆ ಸದನದ ಕಾರ್ಯಕಲಾಪಕ್ಕೆ ಅಡ್ಡಿಪಡಿಸಿದ್ದ ವಿಪಕ್ಷಗಳ 18 ಸದಸ್ಯರು 6 ತಿಂಗಳ ಕಾಲ ಅಮಾನತುಗೊಳಿಸಿ ಸ್ಪೀಕರ್ ಯು.ಟಿ ಖಾದರ್ ರೂಲಿಂಗ್ ಹೊರಡಿಸಿದ್ದಾರೆ.

ವಿಧಾನಸಭೆ ನಡಾವಳಿಯ 348ನೇ ನಿಯಮದಡಿ ಶಾಸಕರಾದ ದೊಡ್ಡನಗೌಡ ಪಾಟೀಲ್, ಅಶ್ವಥನಾರಾಯಣ, ಎಸ್.ಆರ್ ವಿಶ್ವನಾಥ್, ಬೈರತಿ ಬಸವರಾಜು, ಎಂ.ಆರ್ ಪಟೇಲ್, ಚನ್ನಬಸಪ್ಪ, ಉಮಾನಾಥ್ ಕೋಟ್ಯನ್, ಸುರೇಶ್ ಗೌಡ, ಶೈಲೇಂದ್ರ ಬೆಲ್ದಾಳೆ, ಶರಣು ಸಲಗಾರ್, ಸಿಕೆ ರಾಮಮೂರ್ತಿ, ಯಶ್ಪಾಲ್ ಸುವರ್ಣ, ಹರಿಶ್ ಬಿ.ಪಿ, ಭರತ್ ಶೆಟ್ಟಿ, ಬಸವರಾಜ ಮತ್ತಿಮೂಡ್, ಧೀರಜ್ ಮುನಿರಾಜು, ಮುನಿರತ್ನ, ಚಂದ್ರು ಲಮಾಣಿ ಅವರನ್ನ ಅಮಾನತುಗೊಳಿಸಿ ಸ್ಪೀಕರ್ ಯು.ಟಿ ಖಾದರ್ ರೂಲಿಂಗ್ ಹೊರಡಿಸಿದರು. ಸ್ಪೀಕರ್ ರೂಲಿಂಗ್‌ಗೆ ವಿಪಕ್ಷ ಸದಸ್ಯರು ತೀವ್ರ ಖಂಡನೆ ವ್ಯಕ್ತಪಡಿಸಿದರು.

ಹನಿಟ್ರ್ಯಾಪ್ ಪ್ರಕರಣದ ತನಿಖೆಯನ್ನು ಹಾಲಿ ಹೈಕೋರ್ಟ್ ನ್ಯಾಯಾಧೀಶರಿಂದ ತನಿಖೆ ನಡೆಸಬೇಕೆಂದು ಆಗ್ರಹಿಸಿ ವಿಪಕ್ಷಗಳ ಸದಸ್ಯರಿಂದು ವಿಧಾನಸಭೆಯ ಬಾವಿಗೆ ಇಳಿದು ಪ್ರತಿಭಟನೆ ನಡೆಸಿದರು. ಈ ವೇಳೆ ಸ್ಪೀಕರ್ ಖಾದರ್ ಮೇಲೆ ಪೇಪರ್ ಎಸೆದು ಸಿಟ್ಟು ಹೊರ ಹಾಕಿದರು. ಇದರಿಂದ ಅಸಮಾಧಾನಗೊಂಡ ಸ್ಪೀಕರ್ ಕಲಾಪವನ್ನು ಮುಂದೂಡಿದ್ದರು. ಮಧ್ಯಾಹ್ನದ ಕಲಾಪ ಆರಂಭವಾಗುತ್ತಿದ್ದಂತೆ ಸ್ಪೀಕರ್ ಪೀಠಕ್ಕೆ ಅಪಮಾನ ಮಾಡಿದ 18 ಶಾಸಕರನ್ನು 6 ತಿಂಗಳ ಕಾಲ ಸ್ಪೆಂಡ್ ಮಾಡಿ ಸ್ಪೀಕರ್ ರೂಲಿಂಗ್ ಹೊರಡಿಸಿದರು.



**ಅಮಾನತುಗೊಂಡ ಶಾಸಕರಿಗೆ ಈ ಷರತ್ತುಗಳು ಅನ್ವಯ**

1. ಶಾಸಕರು ವಿಧಾನಸಭೆಯ ಸಭಾಂಗಣ, ಲಾಬಿ ಮತ್ತು ಗ್ಯಾಲರಿಗಳಿಗೆ ಪ್ರವೇಶಿಸುವಂತಿಲ್ಲ.
2. ಶಾಸಕರು ಸದಸ್ಯರಾಗಿರುವ ವಿಧಾನಮಂಡಲದ/ ವಿಧಾನ ಸಭೆಯ ಸ್ಥಾಯಿ ಸಮಿತಿಗಳ ಸಭೆಗಳಲ್ಲಿಯೂ ಭಾಗವಹಿಸುವಂತಿಲ್ಲ.
3. ವಿಧಾನ ಸಭೆಯ ಕಾರ್ಯಕಲಾಪಗಳ ಪಟ್ಟಿಯಲ್ಲಿ ಅವರುಗಳ ಹೆಸರಿನಲ್ಲಿ ಯಾವುದೇ ವಿಷಯವನ್ನು ನಮೂದು ಮಾಡತಕ್ಕದಲ್ಲ.
4. ಅಮಾನತ್ತಿನ ಅವಧಿಯಲ್ಲಿ ಅವರು ನೀಡುವ ಯಾವುದೇ ಸೂಚನೆಗಳನ್ನು ಸ್ವೀಕರಿಸಲಾಗುವುದಿಲ್ಲ.
5. ಅಮಾನತ್ತಿನ ಅವಧಿಯಲ್ಲಿ ನಡೆಯುವ ಸಮಿತಿಗಳ ಚುನಾವಣೆಯಲ್ಲಿ ಅವರು ಮತದಾನ ಮಾಡುವಂತಿಲ್ಲ.
6. ಅಮಾನತ್ತಿನ ಅವಧಿಯಲ್ಲಿ ಅವರುಗಳು ಯಾವುದೇ ದಿನಭತ್ಯೆಯನ್ನು ಪಡೆಯಲು ಅರ್ಹರಿರುವುದಿಲ್ಲ.

**ಸ್ಪೀಕರ್ ಪೀಠಕ್ಕೆ ಅಪಮಾನ!:** ನಿನ್ನೆ ವಿಧಾನಸಭೆಯ ಅಧಿವೇಶನದ ಕಡೆಯ ದಿನ. ಹೀಗಾಗಿ ಬೆಳಗ್ಗೆ ವಿಧಾನಸಭೆ ಆರಂಭಗೊಳ್ಳುತ್ತಿದ್ದಂತೆ ಅಶೋಕ್ ಮತ್ತು ಸುನಿಲ್ ಕುಮಾರ್ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು. ಸರ್ಕಾರದ ಸಚಿವರೇ ತನ್ನ ಮೇಲೆ ಹನಿಟ್ರ್ಯಾಪ್ ನಡೆದಿದೆ ಎಂದು ಆರೋಪಿಸಿದ್ದಾರೆ. ಆದರೆ ಸರ್ಕಾರ ಇನ್ನೂ ಯಾವುದೇ ತೀರ್ಮಾನ ಕೈಗೊಂಡಿಲ್ಲ ಎಂದು ಆಕ್ರೋಶ ಹೊರ ಹಾಕಿದರು.

ಜಡ್ಜ್‌ಗಳ ಮೇಲೆ ಹನಿಟ್ರ್ಯಾಪ್ ನಡೆದಿದೆ ಎಂದು ರಾಜಣ್ಣ ಹೇಳಿದ್ದಾರೆ. ಹೀಗಾಗಿ ಸರ್ಕಾರ ಹೈಕೋರ್ಟ್ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು. ವಿಪಕ್ಷಗಳ ಆಗ್ರಹಕ್ಕೆ ಸಿದ್ದರಾಮಯ್ಯ ಮತ್ತು ಪರಮೇಶ್ವರ್ ಅವರು ಈ ಪ್ರಕರಣವನ್ನುಗಂಭೀರವಾಗಿ ಸ್ವೀಕರಿಸಿ ಉನ್ನತ ಮಟ್ಟದ ತನಿಖೆ ನಡೆಸುತ್ತೇವೆ ಎಂದು ತಿಳಿಸಿದರು. ನಂತರ ಸಿದ್ದರಾಮಯ್ಯ ನವರು ಬಜೆಟ್ ಭಾಷಣಕ್ಕೆ ಉತ್ತರ ನೀಡಲು ಆರಂಭಿಸಿರು. ಈ ವೇಳೆ ವಿಪಕ್ಷ ಸದಸ್ಯರು ಬಾವಿಗೆ ಇಳಿದು ಪ್ರತಿಭಟಿಸಿದರು. ವಿಪಕ್ಷಗಳ ಪ್ರತಿಭಟನೆಗೆ ಕ್ಯಾರೇ ಎನ್ನದ ಸಿಎಂ ತಮ್ಮ ಭಾಷಣವನ್ನು ಮುಂದುವರಿಸಿದರು. ಸಿಎಂ ಭಾಷಣದ ಬಳಿಕ ಸರ್ಕಾರ ಹಲವು ಮಸೂದೆಗಳಿಗೆ ಅಂಗೀಕಾರವನ್ನು ಪಡೆದುಕೊಂಡಿತು. ಈ ಸಂದರ್ಭದಲ್ಲಿ ಬಿಜೆಪಿ ಸದಸ್ಯರು ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಮೀಸಲಾತಿ ನೀಡುವ ಮಸೂದೆಗಳ ಪ್ರತಿಯನ್ನು ಸ್ಪೀಕರ್ ಮೇಲೆ ಎಸೆದು ಸಿಟ್ಟು ಪ್ರದರ್ಶಿಸಿದರು. ಗದ್ದಲ ಜಾಸ್ತಿ ಆಗುತ್ತಿದ್ದಂತೆ ಖಾದರ್ ಕಲಾಪವನ್ನು ಮುಂದಕ್ಕೆ ಹಾಕಿದ್ದರು.

ಮಧ್ಯಾಹ್ನ ಕಲಾಪ ಆರಂಭವಾಗುತ್ತಿದ್ದಂತೆ ವಿಪಕ್ಷ ಸದಸ್ಯರು ಕೇಸರಿ ಶಾಲು ಧರಿಸಿ ಸದನ ಪ್ರವೇಶಿಸಿದರು. ಹನಿಟ್ರ್ಯಾಪ್ ಪ್ರಕರಣದ ತನಿಖೆಗೆ ಒತ್ತಾಯಿಸಿ ಧರಣಿ ಮುಂದುವರಿಸಿದರು. ಸಿಎಂ ರಾಜೀನಾಮೆಗೆ ಆಗ್ರಹಿಸಿದರು.

## ಹನಿಟ್ರ್ಯಾಪ್ ಗದ್ದಲ | ಯತ್ನಾಳ್‌ಗೆ ಚೀಟಿ ಕೊಟ್ಟವರು ಸಿಎಂ ಆಪ್ತರಾ?

# ಸಿಬಿಐ ತನಿಖೆಯಾಗಲಿ ಎಂದ ಸುರೇಶ್ ಗೌಡ

**ಬೆಂಗಳೂರು:** ವಿಜಯಪುರದ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರಿಗೆ ಚೀಟಿ ಕೊಟ್ಟವರು ಯಾರು? ಇದರ ಬಗ್ಗೆ ಸಿಬಿಐ ತನಿಖೆಯಾಗಬೇಕು ಎಂದು ಸುರೇಶ್ ಗೌಡ ಆಗ್ರಹಿಸಿದ್ದಾರೆ. ವಿಧಾಸನಸಭೆಯಲ್ಲಿ ಮಾತನಾಡಿದ ಅವರು, ಯತ್ನಾಳ್ ಮಾತನಾಡುತ್ತಿದ್ದಾಗ ಅವರಿಗೆ ಒಂದು ಚೀಟಿ ಬಂತು. ಚೀಟಿ ಬಂದ ಮೇಲೆ ಯತ್ನಾಳ್ ಹನಿಟ್ರ್ಯಾಪ್ ವಿಚಾರದ ಬಗ್ಗೆ ಮಾತಾಡಿದರು ಎಂದರು.

ಯತ್ನಾಳ್ ಹನಿಟ್ರ್ಯಾಪ್ ಮಾತನಾಡುವುದಕ್ಕೂ ಮುನ್ನ ಒಂದು ಚೀಟಿ ಆಡಳಿತ ಪಕ್ಷದಿಂದ ಬಂತು. ಈ ಚೀಟಿ ಕೊಟ್ಟವರು ಯಾರು? ಇದರ ತನಿಖೆ ಆಗಬೇಕು? ಚೀಟಿ ಕೊಟ್ಟವರು ಸಿಎಂಗೆ ಆಪ್ತರಾ? ಇದರ ತನಿಖೆ ಆಗಬೇಕು, ಸಿಬಿಐ ತನಿಖೆ ಆಗಬೇಕು ಎಂದು ಆಗ್ರಹಿಸಿದರು.

ಶುಕ್ರವಾರ ಸದನದಲ್ಲಿ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ನೇರವಾಗಿಯೇ ಸಹಕಾರಿ ಸಚಿವ ರಾಜಣ್ಣ ಮೇಲೆ ಹನಿಟ್ರ್ಯಾಪ್ ಯತ್ನ ನಡೆದಿದೆ ಎಂದು ಪ್ರಸ್ತಾಪ ಮಾಡಿದರು. ಮಾರ್ಶಲ್ ಒಬ್ಬರು ಚೀಟಿ ನೀಡಿದ ಬಳಿಕ ಹನಿಟ್ರ್ಯಾಪ್ ವಿಚಾರವನ್ನು ಪ್ರಸ್ತಾಪಿಸಿದ್ದರು. ಯತ್ನಾಳ್ ಪ್ರಸ್ತಾಪ ಬೆನ್ನಲ್ಲೇ ತಮ್ಮ ಮೇಲೆ ಹನಿಟ್ರ್ಯಾಪ್ ಪ್ರಯತ್ನ ನಡೆದಿರುವುದು ಸತ್ಯ ಎಂಬುದನ್ನು ರಾಜಣ್ಣ ಒಪ್ಪಿಕೊಂಡರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com